ಸಂಪುಟ: 13 Volume | ಸಂಚಿಕೆ: 302 Issue | ಪುಟಗಳು 08 Pages | ಮಂಗಳವಾರ 20 ಜನವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಜೀವನದಮಾಧುರ್ಯಸೌಂದರ್ಯ ಬಯಸುವೆಡೆ, ಜೀವನದ ಕಹಿ ವಿಕೃತಿಗೆ ಅಂಜಬೇಕೆ?

–ಸ್ವಾಮಿ ವಿವೇಕಾನಂದ

ಕಲಿಕಾ ಹಬ್ಬ ಕಾರ್ಯಕ್ರಮ 6
ಆಧ್ಯಾತ್ಮಿಕ ಚಿಂತಕ ಮಹಾನ್ ಯೋಗಿ ವೇಮನ 7
ಕ್ರೀಡೆಯಿಂದ ಉತ್ಸಾಹ, ಚೈತನ್ಯ ಹೆಚ್ಚು 8

## ಅರ್ಧ ಚಳಿ, ಉರಿ ಬಿಸಿಲು

**ಬೆಂಗಳೂರು:** ಸಂಕ್ರಾಂತಿ ನಂತರ, ಹವಾಮಾನವು ಬೆಂಗಳೂರಿಗರನ್ನು ಗೊಂದಲಕ್ಕೀಡುಮಾಡುತ್ತಿದೆ, ಅವರು ಹಗಲಿನಲ್ಲಿ ಫ್ಯಾನ್ ಆನ್ ಮಾಡುತ್ತಾರೆ, ರಾತ್ರಿಯಲ್ಲಿ ಕಂಬಳಿ ಹೊದ್ದು ಮಲಗುತ್ತಾರೆ. ಕಳೆದ ಮೂರು ದಿನಗಳಲ್ಲಿ ತಾಪಮಾನದಲ್ಲಿ ಗಮನಾರ್ಹ ಏರಿಕೆ ಕಂಡುಬಂದಿದೆ.



ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಪ್ರಕಾರ, ಹಗಲಿನ ತಾಪಮಾನದಲ್ಲಿನ ಏರಿ–ಕೆಯು ಹೆಚ್ಚಾಗಿ ಸ್ಪಷ್ಟ ಆಕಾಶ ಮತ್ತು ಶಾಂತ ಗಾಳಿಯಿರುತ್ತದೆ. ಈ ಹಿಂದೆ, ಮೇಲ್ಮೈ ಗಾಳಿಯು ಸ್ವಲ್ಪ ತಂಪಾಗಿಸುತ್ತಿತ್ತು, ಆದ–ರೆ ಗಾಳಿಯ ಕೊರತೆಯಿಂದಾಗಿ ಶಾಖವು ಹೆಚ್ಚು ಗಮನಾರ್ಹವಾಗಿದೆ ಎಂದು ಅವರು ವಿವರಿಸಿದರು. ಹಗಲಿನ ತಾಪಮಾನವು ಹೆಚ್ಚಾಗಿದೆ, ಆದರೆ ಶಾಂತ ಪರಿಸ್ಥಿತಿಗಳಿಂದಾಗಿ ರಾತ್ರಿಯ ತಾಪಮಾನವು ಕಡಿಮೆ ಇರುತ್ತದೆ ಎಂದು ಅವರು ಹೇಳಿದರು. ಪ್ರಸ್ತುತ ಬಿಸಿಲಿನ ವಾತಾವರಣ ತಾತ್ಕಾಲಿಕವಾಗಿದೆ ಮತ್ತು ಮುಂಬರುವ ದಿನಗಳಲ್ಲಿ ಹವಾಮಾನ ಪರಿಸ್ಥಿತಿಗಳು ಏರಿಳಿತಗೊಳ್ಳುವ ನಿರೀಕ್ಷೆಯಿದೆ ಎಂದು ಐಎಂಡಿ ಅಧಿಕಾರಿಗಳು ತಿಳಿಸಿದ್ದಾರೆ.

## ಕೇಂದ್ರಕ್ಕೆ ಮುಖ್ಯಮಂತ್ರಿ ಸ್ಟಾಲಿನ್ ಸಡ್ಡು

• ಮಲ್ಲಮ್ಮ ನುಡಿ ವಾರ್ತೆ ಚೆನ್ನೈ



ಸಾಹಿತ್ಯಮತ್ತುಕಲೆಗಳವಿಚಾರದಲ್ಲಿಯೂ ಕೇಂದ್ರ ಸರ್ಕಾರ ರಾಜಕೀಯ ಹಸ್ತಕ್ಷೇಪ ನಡೆಸುತ್ತಿದೆ ಎಂದು ಆರೋಪಿಸಿರುವ ತಮಿಳುನಾಡು ಮುಖ್ಯಮಂತ್ರಿಎಂ.ಕೆ.ಸ್ಟಾಲಿನ್,ಇದಕ್ಕೆ ಪ್ರತ್ಯುತ್ತರವಾಗಿ ಕನ್ನಡ ಸೇರಿದಂತೆ ಏಳು ಭಾರತೀಯ ಭಾಷೆಗಳಿಗೆ ತಮಿಳುನಾಡುಸರ್ಕಾರದವತಿಯಿಂದಲೇವಾರ್ಷಿಕ ಸಾಹಿತ್ಯ ಪ್ರಶಸ್ತಿ ನೀಡುವುದಾಗಿ ಘೋಷಿಸಿದ್ದಾರೆ.

ಚೆನ್ನೈ ಅಂತಾರಾಷ್ಟ್ರೀಯ ಪುಸ್ತಕ ಮೇಳದ (ಸಿಐಬಿಎಫ್–2026)ಸಮಾರೋಪಸಮಾರಂಭದಲ್ಲಿ ಮಾತನಾಡಿದ ಸ್ಟಾಲಿನ್, ಕೇಂದ್ರದ ನಡೆಗೆ ಅಸಮಾಧಾನ ವ್ಯಕ್ತಪಡಿಸಿ ಈ ಮಹತ್ವದ ನಿರ್ಧಾರವನ್ನು ಪ್ರಕಟಿಸಿದ್ದಾರೆ.

ತಮಿಳುನಾಡು ಸರ್ಕಾರ ನೀಡಲಿರುವ ಈ ಪ್ರಶಸ್ತಿಗೆ ಸೆಮ್ಮೊಳಿ ಇಲಕ್ಕಿಯ ವಿರುದು (ಶಾಸ್ತ್ರೀಯ ಭಾಷಾ ಸಾಹಿತ್ಯ ಪ್ರಶಸ್ತಿ) ಎಂದು ಹೆಸರಿಡಲಾಗಿದೆ. ಮೊದಲ ಹಂತದಲ್ಲಿ ತಮಿಳು, ತೆಲುಗು, ಕನ್ನಡ, ಮಲಯಾಳಂ, ಒಡಿಯಾ, ಬಂಗಾಳಿ ಮತ್ತು ಮರಾಠಿ ಭಾಷೆಯ ಅತ್ಯುತ್ತಮ ಕೃತಿಗಳಿಗೆ ಪ್ರಶಸ್ತಿ ನೀಡಲಾಗುತ್ತದೆ.

## ರಾಸಲೀಲೆ: ವರದಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ



ಹಿರಿಯ ಐಪಿಎಸ್ ಅಧಿಕಾರಿ, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಡಿಜಿಪಿ ರಾಮಚಂದ್ರರಾವ್ ಅವರು ಕಚೇರಿಯಲ್ಲೇ ಮಹಿಳೆಯೊಂದಿಗೆ ರಾಸಲೀಲೆ ನಡೆಸಿದ ವಿಡಿಯೋ ವೈರಲ್ ಆಗಿದ್ದು, ಈ ಬಗ್ಗೆ ವರದಿ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಗೃಹ ಇಲಾಖೆಗೆ ಸೂಚನೆ ನೀಡಿದ್ದಾರೆ.

ರಾಮಚಂದ್ರರಾವ್ ಅವರು ಸಮವಸ್ತ್ರದಲ್ಲಿರುವಾಗಲೇ ತಮ್ಮ ಕಚೇರಿಯ ಒಳಗಡೆಯೇ ಮಹಿಳೆಯನ್ನು ತಪ್ಪಿಕೊಂಡಿರುವ ವಿಡಿಯೋ ಈಗ ವೈರಲ್ ಆಗಿದ್ದು, ಇದು 1 ವರ್ಷದ ಹಿಂದೆ ಸೆರೆಯಾಗಿದ್ದ ವಿಡಿಯೋ ಎನ್ನಲಾಗಿದೆ.

ಈ ಬಗ್ಗೆ ಇಂದು ಬೆಳಗಾವಿಯಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ ಅವರು, ವಿಡಿಯೋ ಬಗ್ಗೆ ನನಗೆ ಬೆಳಗ್ಗೆಯಷ್ಟೇ ಗೊತ್ತಾಗಿದೆ. ಎಷ್ಟೇ ದೊಡ್ಡವರಾದ್ರು ಅವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು. ಈ ಬಗ್ಗೆ ಪ್ರಾಥಮಿಕ ತನಿಖೆ ನಡೆಸಿ ವರದಿ ನೀಡುವಂತೆ ಗೃಹ ಇಲಾಖೆಗೆ ಸೂಚಿಸಿದ್ದೇನೆ ಎಂದರು.

# ಸಿಎಂ ಪಟ್ಟ ನಿಲ್ಲದ ಗುಟ್ಟಿನಾಟ

## ರಾಜ್ಯ ಕಾಂಗ್ರೆಸ್‌ನಲ್ಲಿ ಕುರ್ಚಿ ಕದನ | ರಣದೀಪ್ ಸಿಂಗ್ ಸುರ್ಜೇವಾಲಾ ಜಮೀರ್‌ಗೆ ಬುಲಾವ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು/ನವದೆಹಲಿ





ರಾಜ್ಯ ಕಾಂಗ್ರೆಸ್‌ನಲ್ಲಿ ಕುರ್ಚಿ ಕದನ ಇನ್ನೂ ಶಮನ ವಾಗಿಲ್ಲ..! ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಬುಲಾವ್ ಹಿನ್ನೆಲೆಯಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ದಿಢೀರ್ ಹರಿಯಾಣಗೆ ತೆರಳಿ ಸಮಾಲೋಚನೆ ನಡೆಸಿದ್ದು, ಈ ಮಾತುಕತೆ ಕುತೂಹಲ ಹೆಚ್ಚಿಸಿದೆ. ಹುಬ್ಬಳ್ಳಿಯಲ್ಲಿದ್ದ ಜಮೀರ್ ಅವರು ಸುರ್ಜೇವಾಲಾ ಕರೆ ಬಂದ ಕೂಡಲೇ ಅಲ್ಲಿಂದಲೇ ಶನಿವಾರ ಸಂಜೆಯೇ ದೆಹಲಿಗೆ ತೆರಳಿದ್ದಾರೆ ಎಂದು ಹೇಳಲಾಗಿದೆ,

**ಗಂಟೆಗೂ ಹೆಚ್ಚುಕಾಲ ಚರ್ಚೆ:** ಹರಿಯಾಣಕ್ಕೆ ತೆರಳಿ ಕೈತಾಲ್ ನಲ್ಲಿದ್ದ ಸುರ್ಜೇವಾಲಾ ಅವರೊಂದಿಗೆ ಒಂದು ಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಸಿದ್ದಾರೆನ್ನಲಾಗಿದ್ದು, ಈ ಮಾತುಕತೆ ಕುತೂಹಲವನ್ನು ಹುಟ್ಟುಹಾಕಿಸಿದೆ. ಸುರ್ಜೇವಾಲಾ ಭೇಟಿ ನಂತರ ಜಮೀರ್ ಅಹ್ಮದ್ ಖಾನ್ ಅವರು ಮತ್ತೆ ದೆಹಲಿ ಮಾರ್ಗವಾಗಿ ಹುಬ್ಬಳ್ಳಿಗೆ ವಾಪಸ್ಸಾಗಿದ್ದಾರೆ. ಈ ನಡುವೆ ಭೇಟಿ ವೇಳೆ ಜಮೀರ್ ಅವರು, ಜನವರಿ 24ರಂದು ಹುಬ್ಬಳ್ಳಿಯಲ್ಲಿ ನಡೆಯುವ ವಸತಿ ಇಲಾಖೆಯ ಮನೆಹಂಚಿಕೆಕಾರ್ಯಕ್ರಮಕ್ಕೆಆಹ್ವಾನಿಸಿದ್ದಾರೆಂದು ಮೂಲ ತಿಳಿಸಿದೆ.

**ಡಿಕೆಶಿ ಮಾರ್ಮಿಕ ನುಡಿ:** ನಮ್ಮ ಅನುಕೂಲಕ್ಕೆ ಯಾವಾಗ, ಯಾರನ್ನು ಬೇಟಿ ಮಾಡಬೇಕೋ ಮಾಡುತ್ತೇವೆ. ಈ ಭೇಟಿ ಮಾಹಿತಿಯನ್ನು ನಾನು ಬಹಿರಂಗಪಡಿಸುವುದಿಲ್ಲ. ಪ್ರತಿಯೊಂದಕ್ಕೂ ಕಾಲವೇ ಉತ್ತರ ನೀಡಲಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಮಾರ್ಮಿಕವಾಗಿ ನುಡಿದಿದ್ದಾರೆ.

### ಭೇಟಿ ಬಹಿರಂಗ ಪಡಿಸಲ್ಲ

ದೆಹಲಿಯಲ್ಲಿ ಎಐಸಿಸಿ ವರಿಷ್ಠರನ್ನು ಭೇಟಿ ಮಾಡಿದ್ದೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಅದನ್ನು ಬಹಿರಂಗಪಡಿಸಲ್ಲ. ನಾನೇಕೆ ಅದನ್ನೆಲ್ಲ ಬಹಿರಂಗಪಡಿಸಲಿ? ಕಾಲವೇ ಉತ್ತರ ನೀಡುತ್ತದೆ. ಕಾಲ ಎಲ್ಲದಕ್ಕೂ ತನ್ನ ಉತ್ತರ ನೀಡಲಿದೆ. ನಮ್ಮ ಅನುಕೂಲಕ್ಕೆ ತಕ್ಕಂತೆ ಯಾರನ್ನು ಯಾವಾಗ ಭೇಟಿ ಮಾಡಬೇಕು ಎಂಬುದನ್ನು ನಿರ್ಧರಿಸಿ ಭೇಟಿ ಮಾಡುತ್ತೇವೆ. ಎಲ್ಲರೂ ಅದನ್ನೇ ಮಾಡುತ್ತಾರೆ ಎಂದಿದ್ದಾರೆ ಡಿಕೆಶಿ.

### 22ರಿಂದ ವಿಶೇಷ ಅಧಿವೇಶನ

ಜ. 22 ರಿಂದ ಪ್ರಾರಂಭವಾಗುವ ಏಳು ದಿನಗಳ ವಿಶೇಷ ಶಾಸಕಾಂಗ ಅಧಿವೇಶನ ಮತ್ತು ಮಾರ್ಚ್‌ನಲ್ಲಿ ಬಜೆಟ್ ಅಧಿವೇಶನಕ್ಕೆ ಮುಂಚಿತವಾಗಿ, ಸಿದ್ದರಾಮಯ್ಯ ಮತ್ತು ಡಿಕೆಶಿ ತಂಡ ಹೈಕಮಾಂಡ್‌ನ ನಿರ್ಧಾರಕ್ಕಾಗಿ ಕುತೂಹಲದಿಂದ ಕಾಯುತ್ತಿವೆ. ಆ. 18 ರಂದು ವಿಶ್ವ ಆರ್ಥಿಕ ವೇದಿಕೆಯಲ್ಲಿ ಭಾಗವಹಿಸಲು ದಾವೋಸ್ಗೆ ಭೇಟಿ ನೀಡುವುದನ್ನು ರದ್ದುಗೊಳಿಸಿದ ಶಿವಕುಮಾರ್, ರಾಷ್ಟ್ರ ರಾಜಧಾನಿಯಲ್ಲಿ ಬೀಡುಬಿಟ್ಟಿದ್ದಾರೆ.

### ನಾಯಕತ್ವ ಬದಲಾವಣೆ ಚರ್ಚೆ

ಐದು ರಾಜ್ಯಗಳಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ, ಶಿವಕುಮಾರ್ ಅವರನ್ನು ಅಸ್ಸಾಂಗೆ ಮತ್ತು ಕೇರಳಕ್ಕೆ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರನ್ನು ವೀಕ್ಷಕರನ್ನಾಗಿ ನೇಮಿಸಲಾಗಿದೆ. ಇದು ಹೈಕಮಾಂಡ್ ನಾಯಕರೊಂದಿಗೆ ಚರ್ಚೆ ನಡೆಸಲು ಇಬ್ಬರಿಗೂ ಅವಕಾಶ ನೀಡಿದೆ ಮತ್ತು ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆಯೂ ಚರ್ಚೆಗಳು ನಡೆದಿವೆ ಎಂದು ಮೂಲಗಳು ತಿಳಿಸಿವೆ.

### ಸತೀಶ್, ಮಹದೇವಪ್ಪ ಚರ್ಚೆ?

ಮಹತ್ತರ ಬೆಳವಣಿಗೆಯೊಂದರಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಮಹದೇವಪ್ಪ ಅವರು ಭೇಟಿಯಾಗಿ ಚರ್ಚೆನಡೆಸಿರುವುದು ಚರ್ಚೆಗೆ ಗ್ರಾಸವಾಗಿದೆ. ಅದೇನಿದ್ದರೂ 28 ನೇಸಾಲಿಗೆ ನಾನು ಮುಖ್ಯಮಂತ್ರಿಯ ಹುರಿಯಾಳು ಎಂದಿರುವ ಸತೀಶ್ ಅವರು, ಮಹದೇವಪ್ಪ ಜೊತೆಗೆ ಸುದೀರ್ಘ ಮಾತುಕತೆ ನಡೆಸಿರುವುದು ರಹಸ್ಯವಾಗಿಯೇ ಇದೆ. ಆದರೆ ಸಿದ್ರಾಮಯ್ಯ ಅವರೇ ಸಿಎಂ ಎನ್ನುವುದು ಮಹದೇವಪ್ಪ ಅಭಿಪ್ರಾಯ

## ಕನ್ನಡಕ್ಕೆ ಅಪಮಾನ: ಬಂಧನ

**ಚೆನ್ನೈ:** ಕರ್ನಾಟಕದ ಧ್ವಜಕ್ಕೆ ಅಪಮಾನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತಮಿಳುನಾಡಿನ ಈರೋಡ್ ಮೂಲದ ಸಿಲಂಬರಸನ್ ಎಂಬಾತನನ್ನು ಬೆಂಗಳೂರು ಪೊಲೀಸರು ಬಂಧಿಸಿದ್ದಾರೆ. ಈ ಹಿಂದೆ ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ಪ್ರಯಾಣಿಸುತ್ತಿದ್ದ ಟಿಟಿ ವಾಹನದ ಮೇಲೆ ಕರ್ನಾಟಕ ಧ್ವಜವಿತ್ತು ಎಂಬ ಒಂದೇ ಕಾರಣಕ್ಕೆ ಆ ವಾಹನ ನಿಲ್ಲಿಸಿ ತಮಿಳುನಾಡಿನ ಈರೋಡ್ ನಿವಾಸಿ ಸಿಲಂಬರಸನ್ ಗಲಾಟೆ ಮಾಡಿದ್ದ. ಬಳಿಕ ವಾಹನದ ಮೇಲಿದ್ದ ಧ್ವಜವನ್ನು ಬಲವಂತವಾಗಿ ತೆಗೆಸಿದ್ದ. ಬಳಿಕ ಆ ಧ್ವಜವನ್ನು ಕಾಲಿನಿಂದ ತುಳಿದು ಅಪಮಾನಿಸಿದ್ದ. ಈ ವಿಡಿಯೋ ವೈರಲ್ ಆದ ಬೆನ್ನಲ್ಲೇ ಕನ್ನಡ ಪರ ಸಂಘಟನೆಗಳು ಮತ್ತು ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಈ ಸಂಬಂಧ ಬೆಂಗಳೂರಿನ ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

## ರಾಮುಲು ವಿರುದ್ಧ ಎಫ್‌ಐಆರ್

**ಬಳ್ಳಾರಿ:** ಪೋಕ್ಸೊ ಸಂತ್ರಸ್ತೆ ಹೆಸರು ಮತ್ತು ವಿಳಾಸ ಬಹಿರಂಗಪಡಿಸಿದ್ದ ಮಾಜಿ ಸಚಿವ ಬಿ. ಶ್ರೀರಾಮುಲು ಅವರ ವಿರುದ್ಧ ಎಫ್ಐಆರ್ ದಾಖಲಾಗಿದೆ. ಬಳ್ಳಾರಿ ನಗರದ ಮಹಿಳಾ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಮತ್ತು ಬಾಲ ನ್ಯಾಯ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ಭಾಷಣದ ವೇಳೆ ಸಂವೇದನಾ ಶೀಲ ವಿವರ ಉಲ್ಲೇಖಿಸಿ, ಪೋಕ್ಸೋ ಕಾಯ್ದೆಯನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದಾಗಿ ದೂರಿನಲ್ಲಿ ಆರೋಪಿಸಲಾಗಿದೆ. ದೂರಿನನ್ವಯ ಮಾಜಿ ಸಚಿವ ಶ್ರೀರಾಮುಲು ವಿರುದ್ಧ ಪೋಕ್ಸೋ ಅಡಿಯಲ್ಲಿ ಕೇಸ್ ದಾಖಲಾಗಿದೆ.ಜ.17ರಂದು ನಡೆದ ಬಿಜೆಪಿಯ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಮಾತನಾಡುವಾಗ ಶ್ರೀರಾಮುಲು ಅವರು ಸಂತ್ರಸ್ತೆಯ ಹೆಸರು ಹಾಗೂ ವಿಳಾಸವನ್ನು ಬಹಿರಂಗಪಡಿಸಿದ್ದರು.



## ಸಿಬಿಐಗೆ ಕೊಡಲು ಹಿಂದೇಟು: ಕಿಡಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬಳ್ಳಾರಿಯ ಪ್ರಕರಣವನ್ನು ಸಿಬಿಐಗೆ ಕೊಡಲು ಯಾಕೆ ಹಿಂದೇಟು ಹಾಕುತ್ತಾರೆ ಎಂದು ಶಾಸಕ ಜಿ. ಜನಾರ್ಧನ ರೆಡ್ಡಿ ಸವಾಲು ಹಾಕಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ರಾಜ್ಯದ ಮುಖ್ಯಮಂತ್ರಿಯಾಗಿ ನಾನು ಇರುವ ಸಂದರ್ಭದಲ್ಲಿ ಸುಮಾರು 7 ಪ್ರಕರಣಗಳನ್ನು ಸಿಬಿಐಗೆ ಕೊಟ್ಟಿದ್ದೇನೆ.ಬಿಜೆಪಿಯವರುಒಂದುಕೇಸನ್ನಾದರೂಸಿಬಿಐಗೆ ಕೊಟ್ಟಿದ್ದಾರಾ ಎಂದು ಮುಖ್ಯಮಂತ್ರಿಗಳು ಕೇಳಿದ್ದಾರೆ. ಯಡಿಯೂರಪ್ಪ ಅವರ ಸರಕಾರದ ಅವಧಿಯಲ್ಲಿ ಎಷ್ಟು ಸಿಬಿಐಗೆಕೊಟ್ಟಿದ್ದಾರೆ,ಸಿದ್ದರಾಮಯ್ಯರಅವಧಿಯಲ್ಲಿಎಷ್ಟು ಸಿಬಿಐಗೆವಹಿಸಿದ್ದಾರೆ ಎಂಬ ಪ್ರಶ್ನೆ ಮುಖ್ಯವಲ್ಲ ಎಂದು ತಿಳಿಸಿದ್ದಾರೆ. ನಿಮ್ಮ ಶಾಸಕನೇ ಕೊಲೆ ಮಾಡಿಸಿದ್ದೆಂದು ನಿಮಗೆ ಈಗಾಗಲೇ ಗೊತ್ತಾಗಿದೆ. ಇದರಿಂದ ಕಾಂಗ್ರೆಸ್ ಪಕ್ಷಕ್ಕೆ ಈಗಾಗಲೇ ಮುಜುಗರ ಆಗಿದೆ. ಕೇವಲ ಮೂವರು ಖಾಸಗಿ ಗನ್ಮೆನ್ಗಳನ್ನು ಬಂಧಿಸಿ, ಸಿಐಡಿಗೆ ಕೊಡುವ ಮೂಲಕ ಇದನ್ನು ಜನರು ಮರೆಯುವಂತೆ ಮಾಡಬೇಕು ಎಂದು ತಿಳಿಸಿದ್ದಾರೆ.

## 15ನೇ ಹಣಕಾಸು: ಕೋಟಿ ಮೊತ್ತದ ಹಗರಣ

**ಬೆಂಗಳೂರು:** ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲೇ ಬಹಳ ದೊಡ್ಡ ಭ್ರಷ್ಟಾಚಾರ ನಡೆದಿದೆ. 15ನೇ ಹಣಕಾಸು ಆಯೋಗದಹಣವನ್ನುದುರ್ಬಳಕೆಮಾಡಿಕೊಂಡಿದ್ದಾರೆ. ಮಾತೆತ್ತಿದರೆಸಂವಿಧಾನದಬಗ್ಗೆಮಾತನಾಡುವಪ್ರಿಯಾಂಕ್ ಖರ್ಗೆಯವರಿಗೆ, ತಮ್ಮ ಇಲಾಖೆಯಲ್ಲಿ ಸಂವಿಧಾನದ ಉಲ್ಲಂಘನೆ ಎಷ್ಟಾಗುತ್ತಿದೆ ಎಂದು ತಿಳಿದುಕೊಳ್ಳುವ ಪುರುಸೊತ್ತಿಲ್ಲಎಂದುರಾಜ್ಯಬಿಜೆಪಿಪ್ರಧಾನಕಾರ್ಯದರ್ಶಿ ಪಿ.ರಾಜೀವ್ ಅವರು ಆರೋಪಿಸಿದ್ದಾರೆ.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಹಣಕಾಸು ಆಯೋಗವು ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆ ಮಾಡುವ ಅನುದಾನದಡಿ ಟೈಡ್ ಹಾಗೂ ಅನ್ ಟೈಡ್ ಎಂದರೆ ಬಂಧಿತ ಮತ್ತು ನಿರ್ಬಂಧಿತ ಎಂಬ ಎರಡು ವಿಧಗಳಿವೆ. ಬಂಧಿತ ಅನುದಾನವು ಕೇಂದ್ರದಿಂದ ಕರ್ನಾಟಕದ 6 ಸಾವಿರ ಗ್ರಾಮ ಪಂಚಾಯಿತಿಗಳಿಗೆ ನಿಗದಿಯಾಗಿ ಬರುತ್ತದೆ. ಇಲ್ಲಿ ಆಯುಕ್ತರ ಕಾರ್ಯಾಲಯದಲ್ಲಿ ಸಣ್ಣಪುಟ್ಟ ಬದಲಾವಣೆಗೆ ಸ್ವಲ್ಪ ದಿನ ಅವಕಾಶ ಕೊಡುತ್ತಾರೆ.

## ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಆಡಳಿತಾರೂಢ ಭಾರತೀಯ ಜನತಾ ಪಕ್ಷ(ಬಿಜೆಪಿ)ದ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಬಿಜೆಪಿ ಹಿರಿಯ ನಾಯಕ ಮತ್ತು ಚುನಾವಣಾಧಿಕಾರಿ ಕೆ. ಲಕ್ಷ್ಮಣ್ ಪ್ರಕಟಿಸಿದ್ದಾರೆ.

ಇತ್ತೀಚಿಗಷ್ಟೇ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದ ಬಿಹಾರ ಬಿಜೆಪಿ ಶಾಸಕ ನಿತಿನ್ ನಬಿನ್ ಅವರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಹುದ್ದೆಗೆ ನಾಮಪತ್ರ ಸಲ್ಲಿಸಿದ್ದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ನಬಿನ್ ಅವರ ಪರವಾಗಿ 37 ಸೆಟ್ ನಾಮಪತ್ರಗಳು ಸಲ್ಲಿಕೆಯಾಗಿವೆ ಮತ್ತು ಎಲ್ಲಾ ನಾಮಪತ್ರಗಳು ಮಾನ್ಯವಾಗಿವೆ ಎಂದು ಕೆ. ಲಕ್ಷ್ಮಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೆ ನಬಿನ್ ಅವರ ಉಮೇದುವಾರಿಕೆಯನ್ನುಸೂಚಿಸಿದವರಲ್ಲಿ ಪ್ರಧಾನಿ ನರೇಂದ್ರ ಮೋದಿ ಕೂಡ ಒಬ್ಬರಾಗಿದ್ದಾರೆ. ಪಕ್ಷದ ಮುಖ್ಯಸ್ಥ ಜೆ.ಪಿ. ನಡ್ಡಾ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್ ಮತ್ತು ನಿತಿನ್ ಗಡ್ಕರಿ ಸೇರಿದಂತೆ ಹಲವಾರು ಹಿರಿಯ ಬಿಜೆಪಿ ನಾಯಕರು ನಬಿನ್ ಉಮೇದುವಾರಿಕೆಯನ್ನು ಬೆಂಬಲಿಸಿದ್ದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಹುದ್ದೆಗೆ ಇಂದು ಮಧ್ಯಾಹ್ನ 2 ರಿಂದ ಸಂಜೆ 4 ರವರೆಗೆ ನಾಮಪತ್ರಸಲ್ಲಿಸಲು ಅವಕಾಶ ನೀಡಲಾಗಿತ್ತು. ಸಂಜೆ 4 ರಿಂದ 5 ರವರೆಗೆ ನಾಮಪತ್ರಗಳ ಪರಿಶೀಲನೆ ನಡೆದಿದ್ದು, ಸಂಜೆ 5 ರಿಂದ 6 ರವರೆಗೆ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಲು ಅವಕಾಶ ನೀಡಲಾಗಿತ್ತು. ಆದರೆ ನಬಿನ್ ಅವರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. "ಒಟ್ಟಾರೆಯಾಗಿ, ರಾಷ್ಟ್ರೀಯ ಅಧ್ಯಕ್ಷ ಹುದ್ದೆಗೆ ನಿತಿನ್ ನಬಿನ್ ಅವರ ಪರವಾಗಿ 37 ಸೆಟ್ ನಾಮಪತ್ರಗಳು ಬಂದಿವೆ. ಪರಿಶೀಲನೆಯ ಸಮಯದಲ್ಲಿ, ಎಲ್ಲಾ ಸೆಟ್ ನಾಮಪತ್ರಗಳು ಅಗತ್ಯ ಸ್ವರೂಪದಲ್ಲಿ ಭರ್ತಿಯಾಗಿವೆ ಮತ್ತು ಮಾನ್ಯವಾಗಿವೆ" ಎಂದು ಅವರು ವಿವರಿಸಿದ್ದಾರೆ.

## ಅಬಕಾರಿಯಲ್ಲಿ 2500 ಕೋಟಿ ರೂ ಹಗರಣ: ಆರೋಪ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಬಕಾರಿ ಇಲಾಖೆಯಲ್ಲಿ 2,500 ಕೋಟಿ ರೂಪಾಯಿ ಹಗರಣ ನಡೆದಿದ್ದು, ಈ ಅಕ್ರಮ ಹಣವನ್ನು ಅಸ್ಸಾಂ ರಾಜ್ಯ ಚುನಾವಣೆಗೆ ಬಳಕೆ ಮಾಡಲಾಗುತ್ತಿದೆ ಎಂದು ಬಿಜೆಪಿ ಗಂಭೀರ ಆರೋಪಮಾಡಿದೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಧಾನಸಭೆ ಪ್ರತಿ ಪಕ್ಷದ ನಾಯಕ ಆರ್. ಅಶೋಕ್ ಅವರು, ಅಬಕಾರಿ ಸಚಿವ ಆರ್ಬಿ ತಿಮ್ಮಾಪುರ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಸರ್ಕಾರವು ಇಲಾಖೆಗಳಿಗೆ ಆದಾಯ ಸಂಗ್ರಹ ಗುರಿಗಳನ್ನು ನಿಗದಿಪಡಿಸುತ್ತದೆ. ಆದರೆ, ಅಬಕಾರಿ ಇಲಾಖೆಯಲ್ಲಿ ಪರವಾನಗಿಗಳನ್ನು ಹರಾಜು ಹಾಕಲಾಗುತ್ತಿದೆ. ಅಬಕಾರಿ ಉಪ ಆಯುಕ್ತ ಜಗದೀಶ್ ನಾಯಕ್ ಅವರು 25 ಲಕ್ಷ ರೂ. ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರ ಕೈಗೆ ಸಿಕ್ಕಿಬಿದ್ದರು. ಇದರಿಂದ ಇಲಾಖೆಯಲ್ಲಿನ ಭ್ರಷ್ಟಾಚಾರ ಬಹಿರಂಗವಾಗಿದೆ. ಅಲ್ಲದೆ, ಗೃಹಲಕ್ಷ್ಮಿ ಯೋಜನೆಯಲ್ಲಿ ರೂ.5,000 ಕೋಟಿ ಹಗರಣ, ವಾಲ್ಮೀಕಿ ನಿಗಮದ ನಿಧಿಗಳ ದುರ್ಬಳಕೆ ಹಾಗೂ ರೂ.600 ಕೋಟಿ ರೂ. ಮೌಲ್ಯದ ಭೂ ವ್ಯವಹಾರಗಳಲ್ಲೂ ಅಕ್ರಮಗಳು ನಡೆದಿವೆ.

ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇರ ಹೊಣೆಯಾಗಿದ್ದಾರೆ. ತಿಮ್ಮಾಪುರ ರಾಜೀನಾಮೆ ನೀಡದಿದ್ದರೆ, ಸಿದ್ದರಾಮಯ್ಯ ಅವರನ್ನೇ ಹೊಣೆಗಾರರನ್ನಾಗಿ ಪರಿಗಣಿಸಬೇಕಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



### ಸಚಿವರೂ ಭಾಗಿ: ದೂರು

ಅಬಕಾರಿ ಡಿಸಿಯೊಬ್ಬರು 25 ಲಕ್ಷ ರೂ. ಲಂಚ ಪಡೆದ ಪ್ರಕರಣದಲ್ಲಿ ಅಬಕಾರಿ ಸಚಿವರೂ ಭಾಗಿಯಾಗಿದ್ದಾರೆ ಎಂದು ಆರೋಪಿಸಿ ಸಚಿವ ಆರ್ ಬಿ ತಿಮ್ಮಾಪುರ ಅವರ ವಿರುದ್ಧ ಕರ್ನಾಟಕ ಲೋಕಾಯುಕ್ತಕ್ಕೆ ದೂರು ನೀಡಲಾಗಿದೆ. ಇತ್ತೀಚೆಗೆ ಅಬಕಾರಿ ಉಪ ಆಯುಕ್ತ ಜಗದೀಶ್ ನಾಯಕ್ ಅವರು ಬಾರ್ ಲೈಸೆನ್ಸ್ ನೀಡಲು 25 ಲಕ್ಷ ರೂ. ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳಿಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದದ್ದರು. ಜಗದೀಶ್ ಸೇರಿದಂತೆ ಐವರು ಅಬಕಾರಿ ಅಧಿಕಾರಿಗಳನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ.

## ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತದ ಅಧಃಪತನ ಶುರುವಾಗಿದೆ: ಎಚ್‌ಡಿ ಕುಮಾರಸ್ವಾಮಿ

# ಹನುಮಂತನೆಂದರೆ ಅಗಾಧಶಕ್ತಿಯ ನಿಧಿ

## ಹಾರಕೂಡ ಶ್ರೀ



• ಮಲ್ಲಮ್ಮ ನುಡಿ ವಾರ್ತೆ.
ಬಸವಕಲ್ಯಾಣ:

ಹನುಮಂತನೆಂದರೆ ಅಗಾಧಶಕ್ತಿಯ ನಿಧಿಯಾಗಿದ್ದು, ಯಾರು ಅನುಮಾನ ದೇವರನ್ನು ಶ್ರದ್ಧೆಯಿಂದ ಆರಾಧಿಸುವವರೂ ಅವರಲ್ಲಿ ವಿಸ್ಮಯಕಾರಿ ಬೆಳವಣಿಗೆ ಕಂಡುಬರುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾಮುನರದಲ್ಲಿ ಶ್ರೀ ವೀರ ಹನುಮಾನ ಮಂದಿರದ ಕಳಸಾರೋಹಣ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಹಾಮುಲಾಲ ರವರು ದೊಡ್ಡ ಸಂತರಾಗಿದ್ದು ಅವರ ಧರ್ಮ ಕಾರ್ಯಗಳು ಇಂದಿಗೂ ಅನುಕರಣೀಯವಾಗಿವೆ. ಹತ್ತಾರು ಕ್ಷೇತ್ರಗಳ ಮಾತ್ರೆಗಿಂತಲೂ ಒಬ್ಬ ಸಂತರ ಸಾನಿಧ್ಯ ಮಿಗಿಲಾಗಿರುತ್ತದೆ.

ಧರ್ಮದಲ್ಲಿ ಗುರುವಿನಲ್ಲಿ ನಂಬಿಗೆ, ಶ್ರದ್ಧೆ ಇದ್ದರೆ ಬದುಕಿನಲ್ಲಿ ಸಾಧನೆ ಫಲಿಸುತ್ತದೆ. ಹಾಮುನಗರದ ಎಲ್ಲಾ ಜನತೆ ಒಂದಾಗಿ ಆಂಜನೇಯ ಸ್ವಾಮಿಯ ಸುಂದರ ಮಂದಿರ ನಿರ್ಮಿಸಿ, ಕಳಸಾರೋಹಣ ಮಾಡಿರುವುದು ಐಕ್ಯತೆಯ ಸಂಕೇತವಾಗಿದೆ. ಈ ಗ್ರಾಮದ ಜನರು ಯಾವತ್ತೂ ಒಂದಾಗಿ ಬಾಳುವಂತಾಗಲಿ ಮತ್ತು ಸರ್ವರಿಗೂ ಮಂಗಳವಾಗಲೆಂದು ಶುಭ ಹಾರೈಸಿದರು. ಚವಡಾಪೂರ ಪೂಜ್ಯಶ್ರೀ ಮುರಾಹರಿ ಮಹಾರಾಜರು ಮಾತನಾಡಿದರು. ಪೂಜ್ಯಶ್ರೀ ಲೋಕೇಶ ಮಹಾರಾಜರು ಬಂಜಾರಾ ತಾಂಡಾ, ಪೂಜ್ಯ ಶ್ರೀ ಅನಿಲ ಮಹಾರಾಜರು ಕಲಖೋರಾ, ಪೂಜ್ಯ ಶಂಕರ ಆಯಿ ಮೈಸಲಗಾ ತಾಂಡಾ, ಪೂಜ್ಯ ವಿಲಾಸ ಮಹಾರಾಜರು ಹತ್ಯಾಳ ತಾಂಡಾ, ಕಾಡ ಅಧ್ಯಕ್ಷರಾದ ಬಾಬು ಹೊನ್ನನಾಯಕ ಬಾಬು ಹೊನ್ನಾನಾಯಕ, ಶಿವರಾಜ ಪಾಟೀಲ. ಆಯಾಸಪೂರ, ಮಲ್ಲಿನಾಥ ಹಿರೇಮಠ, ಡಾ. ಸಂತೋಷ್. ರಾಮಚಂದ್ರ ಗಂಗಾರಾಮ ರಾಠೋಡ, ಅರುಣಕುಮಾರ ಭೀಮಸಿಂಗ್ ರಾಠೋಡ, ಪ್ರೇಮಸಿಂಗ್ ಭೈರಾಮ ಚವ್ಹಾಣ ಕಾರಬಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸಂಜೀವಕುಮಾರ ನಾಯಕ ಸ್ವಾಗತಿಸಿ ಪ್ರಾಸ್ತಾನಿಕವಾಗಿ ಮಾತನಾಡಿದರು.

# ತಾಲೂಕಾ ಮಟ್ಟದ ಕ್ರೀಡಾ ಕೂಟಕ್ಕೆ ಚಾಲನೆ.



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ: – ಜಿಲ್ಲಾ ಪಂಚಾಯತ್ ಬೀದರ ಮತ್ತು ತಾಲೂಕಾ ಪಂಚಾತ್ ಹಾಗೂ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ ವತಿಯಿಂದ ನಗರದ ಹೊರ ವಲಯದಲ್ಲಿರುವ ದೊಡ್ಡಪ್ಪ ಅಪ್ಪ ಕ್ರಿಡಾಂಗಣದಲ್ಲಿ ಕ್ರೀಡಾ ಕೂಟಕ್ಕೆ ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಮೇಶ ಸುಲ್ಫಿ ಚಾಲನೆ ನೀಡಿ ಮಾತನಾಡಿದ ಅವರು ನಾವು ಆರೋಗ್ಯವಂತಾಗಿರಲು ಕ್ರೀಡಾ ಸ್ಪರ್ಧೆಯೂ ಮಹತ್ವದ್ದಾಗಿದೆ. ಇದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಿರಲು ಸಾಧ್ಯವಾಗುತ್ತದೆ ಎಂದರು.

ತಾಲೂಕಾ ಪಂಚಾಯತ್ ಸಹಾಯಕ ನಿರ್ದೇಶಕ ಮಹಮ್ಮದ್ ಸಲೀಂ ಮಾತನಾಡಿ ವರ್ಷಪೂರ್ತಿ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ತಾಲೂಕಾ ಮಟ್ಟದ ಕ್ರೀಡಾಕೂಟದಲ್ಲಿ ಅಷ್ಟೇ ಅತ್ಯವಶ್ಯವಾಗಿದೆ. ಯಾ–ಕೆಂದರೆ ನಮಗಿರುವ ಮಾನಸಿಕ ಒತ್ತಡಗಳಿಂದ ದೂರವಿರಲು ಕ್ರೀಡಾ ಸ್ಪರ್ಧೆ ಅತ್ಯವಶ್ಯವಾಗಿದೆ ಎಂದು ನುಡಿದರು.

ಈ ಸಂದರ್ಭದಲ್ಲಿ ತಾ.ಪಂ. ವ್ಯವಸ್ಥಾಪಕರಾದ ರಾಜರೆಡ್ಡಿ ಪಾಟೀಲ್, ಪಿಡಿಒ ಸಂಘದ ಅಧ್ಯಕ್ಷರಾದ ರಮೇಶ ರಾಠೋಡ ಹಾಗೂ ಆರ್.ಡಿ.ಪಿ.ಆರ್. ಎಲ್ಲಾ ಸಿಬ್ಬದಿಗಳು ಹಾಗೂ ದೈಹಿಕ ಶಿಕ್ಷಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಡಾ.ಭೀಮಣ್ಣ ಖಂಡ್ರೆ ಅಪಾರ ದೇಶಭಕ್ತಿಯ ಪ್ರತೀಕವಾಗಿದ್ದರು: ಜ್ಯಾಂತೀಕರ್

• ಮಲ್ಲಮ್ಮ ನುಡಿ ವಾರ್ತೆ ,ಬೀದರ್:

ಜ 18:– ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ಬೀದರ್ ಜಿಲ್ಲಾ ಸಂಪರ್ಕ ಕಚೇರಿಯಲ್ಲಿ, ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ವತಿಯಿಂದ ಲೋಕನಾಯಕ



ಡಾ.ಭೀಮಣ್ಣ ಖಂಡ್ರೆ ಅವರ ಭಾವಪೂರ್ಣ ಶ್ರದ್ಧಾಂಜಲಿ ಸಭೆ ಆಯೋಜಿಸಲಾಯಿತು. ಸಭೆಯ ಅಧ್ಯಕ್ಷತೆಯನ್ನು ಒಕ್ಕೂಟದ ಅಧ್ಯಕ್ಷರಾದ ಶ್ರೀ ಗುರುನಾಥ ಜ್ಯಾಂತೀಕರ್ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಡಾ. ಭೀಮಣ್ಣ ಖಂಡ್ರೆ ಅವರು ನೇರ ನುಡಿ, ಗಂಭೀರ ನಡೆ, ಸ್ವಾಭಿಮಾನ ಮತ್ತು ಅಪಾರ ದೇಶಭಕ್ತಿಯ ಪ್ರತೀಕವಾಗಿದ್ದರು ಎಂದು ಸ್ಮರಿಸಿದರು. ಸ್ವಾತಂ ಹೋರಾಟಗಾರರಾಗಿದ್ದ ಅವರು ಧರ್ಮಾಭಿಮಾನಿಗಳಾಗಿಯೂ ಸಮಾಜ ಸೇವೆಯಲ್ಲಿ ಅಪಾರ ಕೊಡುಗೆ ನೀಡಿದರು. ವೀರಶೈವ ಸಮಾಜದ ರಾಷ್ಟ್ರೀಯ ಅಧ್ಯಕ್ಷರಾಗಿ ಸಮಾಜ ಸಂಘಟನೆಗೆ ಅವಿರತ ಶ್ರಮವಹಿಸಿದ್ದು, ಬೆಂಗಳೂರಿನ ಅರಮನೆ ಮೈದಾನದಲ್ಲಿ ವೀರಶೈವ ಸಮಾಜದ ಭವನ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ ಎಂದು ತಿಳಿಸಿದರು.

ಬೀದರ್ ಜಿಲ್ಲೆ ಮಹಾರಾಷ್ಟ್ರದ ಪಾಲಾಗುವ ಸಂದರ್ಭದಲ್ಲೂ ಜಿಲ್ಲೆಯನ್ನು ಕರ್ನಾಟಕದಲ್ಲೇ ಉಳಿಸಿಕೊಳ್ಳಲು ಅವರು ವಹಿಸಿದ ಪಾತ್ರ ಸ್ಮರಣೀಯವಾಗಿದೆ. ಸಹಕಾರ ಕ್ಷೇತ್ರದಲ್ಲಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನಲ್ಲಿ ವಿವಿಧ ಜವಾಬ್ದಾರಿಗಳನ್ನು ನಿಭಾಯಿಸಿದ್ದು, ಹಲವು ವರ್ಷಗಳ ಕಾಲ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷರಾಗಿ ಸಂಸ್ಥೆಯನ್ನು ಮುನ್ನಡೆಸಿದರು. ಭಾಲ್ಕಿ ತಾಲೂಕಿನಲ್ಲಿ ಮಹಾತ್ಮ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆ ಸ್ಥಾಪಿಸಿ ಸಾವಿರಾರು ಮಂದಿಗೆ ಉದ್ಯೋಗ ಕಲ್ಪಿಸಿ, ಜಿಲ್ಲೆಯ ಜನತೆಗೆ ಸ್ವಾಭಿಮಾನದ ಜೀವನಕ್ಕೆ ದಾರಿ ಮಾಡಿಕೊಟ್ಟರು ಎಂದು ಹೇಳಿದರು.

ಲೋಕನಾಯಕರ ಅಗಲಿಕೆಯಿಂದ ಬೀದರ್ ಜಿಲ್ಲೆಗೆ ಹಾಗೂ ವೀರಶೈವ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಸಂತಾಪ ವ್ಯಕ್ತಪಡಿಸಿ, ಅವರ ಕುಟುಂಬದವರಿಗೆ ಹಾಗೂ ಲಕ್ಷಾಂತರ ಅಭಿಮಾನಿಗಳಿಗೆ ದುಃಖ ತಾಳುವ ಶಕ್ತಿ ನೀಡಲೆಂದು ಮತ್ತು ಲಿಂಗೈಕ್ಯರಾದ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಲಾಯಿತು. ಅವರ ಬದುಕು ಇಂದಿನ ಯುವ ಸಮುದಾಯಕ್ಕೆ ದಾರಿದೀಪವಾಗಲಿ ಎಂದು ಆಶಿಸಿದರು.

ಸಭೆಯಲ್ಲಿ ಬೀದರ್ ಜಿಲ್ಲಾ ಒಕ್ಕೂಟದ ನಿರ್ದೇಶಕರಾದ ಸಂಜೀವ್ ಕುಮಾರ್ ಪಾಟಿಲ್, ಜಗನ್ನಾಥ ಕರಂಜೆ, ರಾಜಶೇಖರ್ ನಾಗಮೂರ್ತಿ, ಕ್ರಾಂತಿಕುಮಾರ್ ಕುಲಾಲ್, ಸಂಜಯ್ ಕ್ಯಾಸ, ಚೆನ್ನಮಲ್ಲಿಕಾರ್ಜುನ, ಶಿವಶಂಕರ್ ಬೆಳಮಗಿ, ಜಿಲ್ಲಾ ಸೌಹಾರ್ದ ಅಭಿವೃದ್ಧಿ ಅಧಿಕಾರಿ ರಾಜೇಶ್ ಕೆ.ಎಂ., ಕಲ್ಯಾಣ ಸೌಹಾರ್ದದ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಶಿವರಾಜ್ ಹೂಗಾರ್, ಒಕ್ಕೂಟದ ಮುಖ್ಯ ಕಾರ್ಯನಿರ್ವಾಹಕರಾದ ಅಮೃತ್ ಹೊಸಮನಿ ಸೇರಿದಂತೆ

# ಡಾ। ಭೀಮಣ್ಣ ಖಂಡ್ರೆ ಸಾಮಾಜಿಕ ಕಾಳಜಿ ಮೆಚ್ಚುವಂತಹದ್ದು : ಹಲಮಂಡಗೆ



• ಮಲ್ಲಮ್ಮ ನುಡಿ ವಾರ್ತೆ
ಭಾಲ್ಕಿ:

ಶತಾಯುಷಿ ಡಾ। ಭೀಮಣ್ಣ ಖಂಡ್ರೆ ಅವರು ತೋರಿದ ಜನಪರ, ಸಾಮಾಜಿಕ ಕಾಳಜಿ ಮೆಚ್ಚುವಂತಹದ್ದು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಹೇಳಿದರು. ಪಟ್ಟಣದ ವೀರಶೈವ ಪ್ರಾಥಮಿಕ ಶಾಲಾ ಶಿಕ್ಷಕರ ಸೌಹಾರ್ದ ಸಹಕಾರ ಸಂಘದಲ್ಲಿ ಸೋಮವಾರ ಆಯೋಜಿಸಿದ್ದ ಶತಾಯುಷಿ ಡಾ। ಭೀಮಣ್ಣ ಖಂಡ್ರೆ ಅವರ ಶ್ರದ್ಧಾಂಜಲಿ ಸಭೆಯಲ್ಲಿ ನುಡಿನಮನ ಸಲ್ಲಿಸಿ ಅವರು ಮಾತನಾಡಿದರು. ಶಾಸಕ, ಮಂತ್ರಿಯಾಗಿ, ಅಖಿಲಭಾರತ ವೀರಶೈವ ಮಹಾಸಭೆಯ ಅಧ್ಯಕ್ಷರಾಗಿ ಡಾ।ಭೀಮಣ್ಣ ಖಂಡ್ರೆ ಅವರು ಮಾಡಿದ ಸಾಮಾಜಿಕ ಸೇವೆ ಎಲ್ಲರೂ ಸ್ಮರಿಸುವಂತಾಗಿದೆ. ಅವರು ರೈತರ ನೆರವಿಗೆ ಧಾವಿಸಿ, ಜಿಲ್ಲೆಯಲ್ಲಿ ಕಾರಂಜಾ ಯೋಜನೆಗೆ ವೇಗ ನೀಡಿ ರೈತರ ಜಮೀನಿಗೆ ನೀರು ಹರಿಸುವ ಕೆಲಸ ಮಾಡಿದ್ದರು. ಎರಡು ಸಕ್ಕರೆ ಕಾರ್ಖಾನೆ ಸ್ಥಾಪಿಸಿ, ತಾವು ಒಬ್ಬ ರೈತಪರ ನಾಯಕ ಎಂಬುದನ್ನು ಸಾಬೀತು ಪಡಿಸಿದ್ದರು. ಇಂತಹ ಅನೇಕ ಯೋಜನೆ ಅನುಷ್ಠಾನದ ಮೂಲಕ ಈ ಭಾಗಕ್ಕೆ ನ್ಯಾಯ ಒದಗಿಸಿಕೊಡುವ ಪ್ರಯತ್ನ ಮಾಡಿದ್ದಾರೆ. ಲಿಂಗಾಯತ ಸಮಾಜದ ಮೇರು ಪರ್ವತವಾಗಿದ್ದ ಅವರು, ವೈಯಕ್ತಿಕ ಆಸೆಗಳಿಗೆ ತಿಲಾಂಜಲಿ ಹೇಳಿ, ಸಮಾಜಕ್ಕಾಗಿ ದುಡಿದಿದ್ದಾರೆ. ಅಂತಹ ಮಹನೀಯರು ಭೌತಿಕವಾಗಿ ನಮ್ಮನ್ನಗಲಿದರೂ, ಅವರು ಸದಾ ನಮ್ಮ ಮನಸ್ಸಿನಲ್ಲಿ ಇರುತ್ತಾರೆ ಎಂದು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ ಮಾತನಾಡಿ, ಡಾ।ಭಿಮಣ್ಣ ಖಂಡ್ರೆಯವರ ಆದರ್ಶ ಮತ್ತು ಅಭಿವೃದ್ಧಿ ಚಿಂತನೆಗಳು ಇಂದಿನ ರಾಜಕಾರಣಿಗಳಿಗೆ ಮಾದರಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸೂರ್ಯಕಾಂತ ಸುಂಟೆ, ಕಾರ್ಯದರ್ಶಿ ಅಶೋಕ ಕುಂಬಾರ, ಪ್ರಮುಖರಾದ ಷಡಕ್ಷರಿ ಸ್ವಾಮಿ, ತಿಪ್ಪಣ್ಣ ಶಿವಪೂರೆ, ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದ ಪತ್ರಾಂಕಿತ ವ್ಯವಸ್ಥಾಪಕ ಶಿವಕುಮಾರ ಘುಲಾರಿ, ಸಿದ್ರಾಮಪ್ಪ ಕುಡತೆ, ಎಸ್ ವಾಡೆ ಸೇರಿದಂತೆ ಹಲವರು ಇದ್ದರು.

# ನಿವೃತ್ತ ಯೋಧರಿಗೂ ಕೂಡಾ ಆದ್ಯತೆ, ಗೌರವ ನೀಡಬೇಕು

## ಡಾ.ವೆಂಕಟರಾವ ತೆಲಂಗ್

• ಮಲ್ಲಮ್ಮ ನುಡಿ ವಾರ್ತೆ
• ಹುಮನಾಬಾದ:

ಯಾವುದೇ ಒಂದು ರಾಷ್ಟದ ರಕ್ಷಣೆ, ಅಭಿವೃದ್ಧಿಯಲ್ಲಿ ಅಲ್ಲಿನ ಸೈನಿಕರ ಪಾತ್ರ ಪ್ರಮುಖವಾಗಿದೆ. ಮಳೆ–ಚಳಿ, ಹಗಲು–ರಾತ್ರಿಯೆನ್ನದೇ, ಮನೆ–ಸಂಸಾರವನ್ನು ಬಿಟ್ಟು ದೇಶವೇ ನನ್ನ ಕುಟುಂಬ ಎಂದು ಭಾವಿಸಿ ದೇಶವನ್ನು ಕಾಯುವ ಪವಿತ್ರವಾದ ಕೆಲಸ ಮಾಡುವ ಯೋಧರಿಗೆ ಎಲ್ಲಾ ಸೌಲಭ್ಯಗಳು ದೊರೆಯಬೇಕು. ದೇಶದ ನಾಗರಿಕರು ಸೇನಾ ಪಡೆಗಳ ತ್ಯಾಗ, ಧೈರ್ಯ, ಸಾಹಸ, ಕೊಡುಗೆಯನ್ನು ಸ್ಮರಿಸಿ, ಗೌರವಿಸುವುದು ಅಗತ್ಯ. ನಿವೃತ್ತ ಯೋಧರಿಗೂ ಕೂಡಾ ಆದ್ಯತೆ, ಗೌರವ ನೀಡಬೇಕು ಎಂದು ಪಟ್ಟಣದಲ್ಲಿ ಜಯಸಿಂಹ ನಗರದ ನಿವೃತ್ತ ಸೈನಿಕರ ಸಂಸ್ಥೆ ಹುಮನಾಬಾದ ವತಿಯಿಂದ ಭಾನುವಾರ ಜರುಗಿದ 78ನೇ ಸೈನಿಕ ದಿನಾಚರಣೆಯ ಕಾರ್ಯಕ್ರಮವನ್ನು ಜಯಸಿಂಹ ನಗರದ ನಿವೃತ್ತ ಸೈನಿಕರ ಸಂಸ್ಥೆ ಗೌರವಾಧ್ಯಕ್ಷ ಡಾ.ವೆಂಕಟರಾವ ತೆಲಂಗ್ ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ನಮ್ಮ ಹಕ್ಕುಗಳನ್ನು ಪಡೆಯಲು ಒಗ್ಗಟ್ಟಿನ ಹೋರಾಟ ಬಹಳ ಅಗತ್ಯವಾಗಿದೆ. ಆರ್ಮಿಯಲ್ಲಿ ಇರುವಾಗ ಎಲ್ಲರೂ ಒಗ್ಗಟ್ಟಿನಿಂದ ಇರುತ್ತವೆ. ಸೇವೆ ಮುಗಿಸಿ ಇಲ್ಲಿ ಬಂದಾಗ ಒಗ್ಗಟ್ಟಿನ ಕೊರತೆ ಕಾಣುತ್ತೆವೆ. ನಿವೃತ್ತ ಸೈನಿಕರ ಹಕ್ಕು ಪಡೆಯಲು ಒಂದಾಗಿ ಹೋರಾಟ ಮಾಡುವ ಅನಿವಾರ್ಯತೆ ಇದೆ. ಇಡಿ ಜಿಲ್ಲೆಯಲ್ಲಿ ನಿವೃತ್ತ ಸೈನಿಕರ ಸಂಘ ಬಲಿಷ್ಠಗೊಳಿಸಿ ಅದರ ಮುಖಾಂತರ ನಮ್ಮ ಹಕ್ಕು ಪಡೆಯಲು ಮುಂದಾಗೋಣ ಎಂದು ಕರೆ ನೀಡಿದರು.




ಜಯಸಿಂಹ ನಗರದ ನಿವೃತ್ತ ಸೈನಿಕರ ಸಂಸ್ಥೆಯ ಹುಮನಾಬಾದ ಅಧ್ಯಕ್ಷ ಅಮೃತರಾವ ರಾಜೇಶ್ವರ ಮಾತನಾಡಿ, ಮಾಜಿ ಸೈನಿಕರಾದ ನಾವುಗಳು ಅಣ್ಣತಮ್ಮಂದಿರ ಹಾಗೆ ಇರಬೇಕು. ಆರ್ಮಿಯಲ್ಲಿರುವಾಗ ಜನರು ಸೈನಿಕರಿಗೆ ಬಹಳ ಗೌರವ ಮಾಡುತ್ತಾರೆ, ಮಾಜಿ ಆದ ಬಳಿಕ ಗೌರವ ಕಡಿಮೆ ಮಾಡುತ್ತಾರೆ, ಇದು ನಾವು ಕೇಳಿ ಪಡಿಯುದಲ್ಲ ಜನರಲ್ಲಿ ಸ್ವ–ಯಂ ಆಗಿ ಬರಬೇಕು ಎಂದರು.

ಪ್ರಧಾನ ಕಾರ್ಯದರ್ಶಿ ಅಶೋಕಕುಮಾರ ಮಾಲಿ ಪಾಟೀಲ ಮಾತನಾಡಿ, 40 ದಿವಸದಲ್ಲಿ ನಾವೆಲ್ಲರೂ ಒಗ್ಗಟ್ಟಾಗಿ ಜಯಸಿಂಹನಗರ ನಿವೃತ್ತ ಸೈನಿಕ ಸಂಸ್ಥೆಯ ರಿಜಿಸ್ಟ್ರೇಷನ್ ಮಾಡಿ ಸಂಸ್ಥೆ ಉದ್ಘಾಟನೆ ಮಾಡಿರುವುದು ನಮ್ಮೆಲ್ಲರ ದುರ್ದೈವ ಎಂದರು. ದೇಶ ಕಾಯುವ ಸೈನಿಕರಿಗೆ ಮತ್ತು ದೇಶದ ಜನತೆಗೆ ಊಟ ಕೊಡುವ ಅನ್ನದಾತ ರೈತರಿಗೆ ಪ್ರತಿಯೊಬ್ಬರು ಗೌರವಸಲ್ಲಿಸಬೇಕೆಂದು ಕರೆನೀಡಿದರು. ಪ್ರತಿದಿನ ರಾತ್ರಿ–ಹಗಲು ಎನ್ನದೇ 24 ತಾಸು ದೇಶ ಮತ್ತು ದೇಶದ ನಾಗರಿಕರ ಸುರಕ್ಷತೆಗಾಗಿ ದುಡಿಯುತ್ತಿರುವ ಸಶಸ್ತ್ರಸೇನಾನಿಗಳ ಕಾರ್ಯ ಅತ್ಯಂತ ಗೌರವವಾದದ್ದು. ಇದು ಬೇರೆ ಸೇವೆಗಿಂತ ಅತ್ಯುತ್ತಮವಾದ ತ್ಯಾಗ. ಈ ಸೇವೆಗೆ ಸರಿಸಾಟಿಯಿಲ್ಲ. ತಮ್ಮ ಕುಟುಂಬ ತೊರೆದು ದೇಶಕ್ಕಾಗಿ ಪ್ರಾಣದ ಹಂಗು ತೊರೆದು ದುಡಿಯುವ ಇವರ ನಿಸ್ವಾರ್ಥ ಸೇವೆಯನ್ನು ನಾವೆಲ್ಲರೂ ಗೌರವಿಸಬೇಕು. ಅವರ ಕುಟುಂಬಗಳಿಗೆ ಬೆಂಬಲವಾಗಿ ನೈತಿಕ ಸ್ಥೈರ್ಯ ತುಂಬುವ ಕಾರ್ಯ ಮಾಡಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಜಯಸಿಂಹ ನಗರದ ನಿವೃತ್ತ ಸೈನಿಕರ ಸಂಸ್ಥೆಯ ಉಪಾಧ್ಯಕ್ಷ ನಿಂಗಪ್ಪ ಚಿಂಚೋಳಿಕರ, ಕಾರ್ಯದರ್ಶಿ ಅಮೂಲಕುಮಾರ ಕುಲಕರ್ಣಿ, ಖಜಾಂಚಿ ವಿಠ್ಠಲರಾವ ರಾಜೇಶ್ವರ, ಸಲಹೆಗಾರ ಬಾಬುರಾವ ಸೂರ್ಯವಂಶಿ, ಲೆಕ್ಕಪರಿಶೋಧಕ ಜಗನ್ನಾಥ ಮಾಶೆಟ್ಟಿ, ಸದಸ್ಯರಾದ ಹಣಮಂತ ದೇವಣಿ, ವೈಜೀನಾಥ ಬಿರಾದಾರ, ಕಲಪ್ಪ ಮಶೆಟ್ಟಿ, ವಿಜಯಕುಮಾರ ಪರಶೆಟ್ಟಿ, ಮಂಜುಳಾ ಧರ್ಮರಾಯ, ಸುನಿತಾ ಶಾಮರಾವ ಹಾಗೂ ಮಲ್ಲಪ್ಪ ಭಾಗೇವಾಡಿ, ಜಗನಾಥ ಡಿಗ್ಗೆ, ಪಾಂಡಪ್ಪ, ಶಿವಲಿಂಗಯ್ಯ ಸ್ವಾಮಿ, ರಾಮಲಿಂಗ ಜಕಾರೆ, ಚಿದಂಬರ ಮುಗಳಿ, ಬಸವರಾಜ ನಿಂಬುರೆ, ನಾರಾಯಣ, ರೈತ ಮುಖಂಡರಾದ ಖಾಸಿಂ ಅಲಿ, ಸತೀಷ ನನೂರೆ, ಕಲ್ಲಪ್ಪ, ಅಶೋಕ, ಹಾಗೂ ಮಾಜಿ ಸೈನಿಕರು, ಮಹಿಳೆಯರು, ಸೇರಿದಂತೆ ಅನೇಕರು ಇದ್ದರು.



ಹುಮನಾಬಾದ:ಪಟ್ಟಣದ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಜಯಸಿಂಹ ನಗರ ನಿವೃತ್ತ ಸೈನಿಕರ ಪಥಸಂಚಲನವನ್ನು ಮಾಜಿ ಸೈನಿಕರಿಂದ ಭಾರತ ಮಾತಕೀ ಜೈ ಎಂದು ಘೋಷಣೆದೊಂದಿಗೆ ಅದ್ದೂರಿಯಾಗಿ ಪ್ರಮುಖ ಬೀದಿಗಳ ಮುಖಾಂತರ ಜರುಗಿತು.

# ಮಾನವ ಜೀವಿಗಳನ್ನು ರಕ್ಷಣೆ ಮಾಡುತ್ತದೆ ಆಶ್ರಮದ ಸೇವೆ ಸಿಂಧನೂರು ಘನತೆ ಹೆಚ್ಚುತ್ತದೆ

ಮಲ್ಲಮ್ಮ ನುಡಿ ವಾರ್ತೆ
ಸಿಂಧನೂರು:

ಆಕ್ಸ್ ಫರ್ಡ್ ಸಮೂಹ ಸಂಸ್ಥೆಗಳು ಸಿಂಧನೂರು ಹಾಗೂ ಎನ್.ಸತ್ಯನಾರಾಯಣ ಶ್ರೇಷ್ಠಿ ಸ್ನೇಹ ಬಳಗದ ವತಿಯಿಂದ ಅಕ್ಸ್ ಫರ್ಡ್ ಸಮೂಹ ಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷರಾದ ಎನ್. ನಾರಾಯಣ ಶ್ರೇಷ್ಠಿ ಅವರ ಜನ್ಮ ಸಾರ್ಥಕ ದಿನದ ಅಂಗವಾಗಿ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಅಗತ್ಯವಿರುವ ಆಹಾರ ವಸ್ತುಗಳನ್ನು ವಿತರಿಸಿ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಆಶ್ರಯದಾತರುಗಳಿಗೆ ಆತ್ಮಸ್ಥೈರ್ಯ ತುಂಬಿದರು.

ಈ ಕಾರ್ಯಕ್ರಮದಲ್ಲಿ ಎನ್. ಸತ್ಯನಾರಾಯಣ ಶ್ರೇಷ್ಠಿ ಸಂಸ್ಥಾಪಕ ಅಧ್ಯಕ್ಷರು ಆಕ್ಸ್ ಫರ್ಡ್ ಸಮೂಹ ಸಮೂಹ ಸಂಸ್ಥೆಗಳು ಇವರನ್ನು ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಅಕ್ಷಯ ಆಹಾರ ಜೋಡಿಗೆ ಸೇವಾ ಟ್ರಸ್ಟ್. ಸ್ವಾಮಿ ಚಾರಿಟೇಬಲ್ ಟ್ರಸ್ಟ್ ಕರಡಕಲ್. ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ನಿರ್ಮೂಲನಾ ಸಮಿತಿ ಲಿಂಗಸೂಗೂರು ಇವರುಗಳ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ನಂತರ ಎನ್. ಸತ್ಯನಾರಾಯಣ ಶ್ರೇಷ್ಠಿ ಮಾತನಾಡಿ ಸಮಾಜದಿಂದ ತಿರಸ್ಕೃತಗೊಂಡವರನ್ನು ಮತ್ತು ತಮಗರಿವಿಲ್ಲದ ಮಾನವ ಜೀವಿಗಳನ್ನು ರಕ್ಷಣೆ ಮಾಡುತ್ತಿರುವ ಕಾರುಣ್ಯ ಆಶ್ರಮದ ಸೇವೆ ನಮ್ಮ ಸಿಂಧನೂರಿನ ಘನತೆ ಗೌರವವನ್ನು ಹೆಚ್ಚಿಸಿದೆ. ಕೆಲವು ವರ್ಷಗಳ ಹಿಂದೆ ಅನಾಥಾಶ್ರಮ ಮತ್ತು ಅದರ ನಿರ್ವಹಣೆ ಮತ್ತು ಅನಾಥಾಶ್ರಮದ ಬದುಕು ಹೇಗಿರುತ್ತದೆ ಎನ್ನುವುದನ್ನು ತೋರಿಸಿ ಕೊಟ್ಟಿರುವ ಕಾರುಣ್ಯ ಆಶ್ರಮವು ಕರುನಾಡಿನ ಕರುಣೆಯ ಕುಟುಂಬವಾಗಿದೆ. ಇಂತಹ ಸತ್ಯ ಪ್ರಾಮಾಣಿಕವಾದಂತಹ ಸೇವೆಯಲ್ಲಿರುವ ಕಾರುಣ್ಯಾಶ್ರಮದ ಸೇವೆಯ ಜೊತೆ ಸದಾವಕಾಲವಿರುತ್ತೇನೆ. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪರಶುರಾಮ ಮಲ್ಲಾಪುರ ಸಂಸ್ಥಾಪಕ ಅಧ್ಯಕ್ಷರು ನೋಬೆಲ್ ಕಾಲೇಜ್ ಸಿಂಧನೂರು. ಸೈಯದ್ ಸೋಹೇಬ್ ಖಾದ್ರಿ. ಡಾ. ವಸೀಮ್. ಬಸವರಾಜ ಮಾಲಿ ಪಾಟೀಲ್. ವಿಜಯಲಕ್ಷ್ಮಿ ಹಿರೇಮಠ ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ನಿರ್ಮೂಲನಾ ಸಮಿತಿ ಲಿಂಗಸೂಗೂರು. ಮಂಜುನಾಥ ಬ್ಯಾಗವಾಟ ಲಿಂಗಸೂಗೂರು. ಕುಮಾರ. ಮಹಾಂತೇಶ ಸಮಾಜ ಸೇವಕರು ಲಿಂಗಸೂಗೂರು. ಮಂಜುನಾಥ ಪಾಟೀಲ್ ವಕೀಲರು ಕರಡಕಲ್.



ರೇಖಾ ಮಸ್ಕಿ. ಹಾಗೂ ಶ್ರೀಮಠ ಸೇವಾ ಟ್ರಸ್ಟ್ ಸದಸ್ಯರುಗಳಾದ ಡಾ. ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಕರಡಕಲ್. ಸುಜಾತ ಹಿರೇಮಠ. ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ ಮರಿಯಪ್ಪ.ಜ್ಯೋತಿ. ಹಾಗೂ ಆಕ್ಸ್ ಫರ್ಡ್ ಸಮೂಹ ಸಂಸ್ಥೆಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು



ಹೇಮರೆಡ್ಡಿ ಮಲ್ಲಮ್ಮ ಕ್ಷೇಮಾಭಿವೃದ್ಧಿ ಸಹಕಾರ ಸಂಘ ಗುರುಮಠಕಲ್ ಭವನದಲ್ಲಿ ರೆಡ್ಡಿ ಸಮಾಜದ ವತಿಯಿಂದ 614 ನೇಯ ಯೋಗಿ ವೇಮನ ಜಯಂತಿ ಆಚರಿಸಲಾಯಿತು.

# ರಂಭಾಪುರಿ ಜಗದ್ಗುರು ಇಷ್ಟಲಿಂಗ ಮಹಾಪೂಜೆ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ.

ತಾಲೂಕಿನ ಮೇಹಕರ್ ಗ್ರಾಮದಲ್ಲಿ ವೀರುಪಾಕ್ಷೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಿವ್ಯ ಸಾನಿಧ್ಯದಲ್ಲಿ ಮೊದಲ ದಿನದ ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮಸಭೆ ಭಕ್ತಿಭಾವ ಮತ್ತು ವೈಭವದಿಂದ ನೆರವೇರಿತು. ಈ ಸಂದರ್ಭದಲ್ಲಿ ಶ್ರೀಮದ್ ರಂಭಾಪುರಿ ಜಗದ್ಗುರುಗಳು ಆಶೀರ್ವಚನ ನೀಡುತ್ತಾ, ಇಷ್ಟಲಿಂಗ, ರುದ್ರಾಕ್ಷಿ ಮತ್ತು ವಿಭೂತಿ ಧಾರಣೆ ವೀರಶೈವ ಲಿಂಗಾಯತ ಧರ್ಮದ ಜೀವಂತ ಪ್ರತೀಕಗಳಾಗಿದ್ದು, ಅವುಗಳ ಧಾರಣೆಯಿಂದ ಆತ್ಮಶುದ್ಧಿ, ಧಾರ್ಮಿಕ ಚೈತನ್ಯ ಮತ್ತು ಮಾನವೀಯ ಮೌಲ್ಯಗಳ ವೃದ್ಧಿ ಸಾಧ್ಯವಾಗುತ್ತದೆ ಎಂದು ಸಂದೇಶ ನೀಡಿದರು. ರಾಜೇಶ್ವರ ಶಿವಾಚಾರ್ಯರ ದಿವ್ಯ ನೇತೃತ್ವದಲ್ಲಿ ನಡೆಯುತ್ತಿರುವ ಈ ಮಹತ್ವದ ಧಾರ್ಮಿಕ ಕಾರ್ಯಕ್ರಮವು ಮುಂದಿನ ಎರಡು ದಿನಗಳು (20 ಮತ್ತು 21ರಂದು) ನಡೆಯಲಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗುರುಗಳ ದರ್ಶನ ಪಡೆದು ಆತ್ಮಪುನೀತರಾಗುವಂತೆ ಜಗದ್ಗುರುಗಳು ಕೋರಿದರು. ಧರ್ಮ, ಸಂಸ್ಕೃತಿ ಮತ್ತು ಭಕ್ತಿಯ ಸಂಗಮವಾಗಿರುವ ಈ ಜಾತ್ರಾ ಮಹೋತ್ಸವವು ಭಕ್ತರಲ್ಲಿ ಅಪಾರ ಉತ್ಸಾಹ ಮತ್ತು ಆಧ್ಯಾತ್ಮಿಕ ಉಲ್ಲಾಸವನ್ನು ಮೂಡಿಸಿದೆ ಎಂದು ತಿಳಿಸಿದರು. ರಾಜೇಶ್ವರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು.




ಹುಮನಾಬಾದ:ತಾಲ್ಲೂಕಿನ ಹುಡಗಿ ಗ್ರಾಮದ ಶ್ರೀ ಕರಿಬಹವೇಶ್ವರ ಕಲ್ಯಾಣ ಮಂಟಪದಲ್ಲಿ ಶಿವಾಚಾರ್ಯ ರತ್ನ ಶ್ರೀ ಷ.ಬ್ರ. ಶ್ರೀ ವೀರುಪಾಕ್ಷ ಶಿವಾಚಾರ್ಯರ 97ನೇ ಜನ್ಮ ವರ್ಧಂತಿ ಮಹೋತ್ಸವವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಆಶ್ರಯ ದೀಪ ಚಾರಿಟೇಬಲ್ ಟ್ರಸ್ಟ್ (ರಿ) ವತಿಯಿಂದ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ. ಉಪಾಧ್ಯಕ್ಷ ಅರವಿಂದ ಜೋಗಿರೆರವರಿಂದ ವಿರುಪಾಕ್ಷ ಶಿವಾಚಾರ್ಯರವರಿಗೆ ಸನ್ಮಾನಿಸಿ ಹುಟ್ಟುಹಬ್ಬದ ಶುಭಾಶಯಗಳು ಕೋರಿದರು. ಕಾರ್ಯದರ್ಶಿ ಮೋಹನ್ ಸಿಂಗ್. ಅನಿಲ್ ರೆಡ್ಡಿ .ಪರಮೇಶ್ವರ. ಸುರೇಶ್ ಮಠಪತಿ, ಮಲ್ಲು ಸ್ವಾಮಿ, ಶಿವಕುಮಾರ ಹಿರೇಮಠ. ಕರಬಸಪ್ಪ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಡಾ. ಭೀಮಣ್ಣ ಖಂಡ್ರೆ ಅವರ ಸೇವೆ ಕನ್ನಡ ಕುಲಕೋಟಿಗೆ ಆದರ್ಶ

ಭಾಲ್ಕಿ. ಸಮಾಜದ ಏಳಿಗೆಗೆ ಡಾ. ಭೀಮಣ್ಣ ಖಂಡ್ರೆ ಅವರ ಕೊಡುಗೆ ಚಿರಸ್ಮರಣೀಯವಾದದ್ದು ಎಂದು ಚನ್ನಬಸವೇಶ್ವರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಲಕ್ಷ್ಮಿಕಾಂತ ನಾಟೇಕರ್ ಅಭಿಪ್ರಾಯಪಟ್ಟರು. ಕಾಲೇಜಿನಲ್ಲಿ ದಿ. ಭೀಮಣ್ಣ ಖಂಡ್ರೆ ಅವರಿಗೆ ನುಡಿ ನಮನವನ್ನು ಸಲ್ಲಿಸಿ, ಗಡಿ ಜಿಲ್ಲೆ ಒಬ್ಬ ಧೀಮಂತ ನಾಯಕನನ್ನು ಕಳೆದುಕೊಂಡಿದೆ. ಸಹಕಾರಿ ,ಶೈಕ್ಷಣಿಕ, ನೀರಾವರಿ ಕ್ಷೇತ್ರದಲ್ಲಿ ಅವರ ಸಾಧನೆ ಅಪಾರ. ನೇರ ನುಡಿಯ ನೇತಾರರಾಗಿದ್ದರು. ತಮಗೆ ಅನಿಸಿದ್ದನ್ನು ಯಾವುದೇ



ಮುಲಾಜಿಲ್ಲದೆ ಹೇಳುತ್ತಿದ್ದರು ಸತ್ಯ, ನ್ಯಾಯದ ಪರವಾಗಿ ಹೋರಾಟ ನಡೆಸುತ್ತಿದ್ದರು . ಕರ್ನಾಟಕದ ಏಕೀಕರಣಕ್ಕಾಗಿ ಎಡಬಿಡದೆ ದುಡಿದ ಮಹಾಮಹಿಮರು. ಒಂದೆಡೆ ಉರ್ದು, ಇನ್ನೊಂದೆಡೆ ಮರಾಠಿ ಇದ್ದರು ಅಚ್ಚ ಕನ್ನಡಿಗರಾಗಿ ಕನ್ನಡ ಕಟ್ಟಿದ ಡಾ. ಭೀಮಣ್ಣ ಖಂಡ್ರೆ ಅವರ ಸೇವೆ ಕನ್ನಡ ಕುಲ ಕೋಟಿಗೆ ಆದರ್ಶಪ್ರಾಯವಾದದ್ದು ಎಂದು ಹೇಳಿದರು. ಮಹಾತ್ಮಗಾಂಧೀಜಿಯವರ ನಾಯಕತ್ವದಲ್ಲಿ ಸ್ವತಂತ್ರಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದ ಭೀಮಣ್ಣ ಖಂಡ್ರೆಯವರ ಬದುಕಿನ ಹೆಜ್ಜೆಗಳು ಈ ಮಣ್ಣಿನಲ್ಲಿ ಚಿರಸ್ಥಾಯಿಯಾಗಿವೆ ಎಂದು ಸ್ಮರಿಸಿದರು. ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ. ಅವರ ಕುಟುಂಬ ಸದಸ್ಯರು ಹಾಗೂ ಅಪಾರ ಅಭಿಮಾನಿ ಬಳಗಕ್ಕೆ ಈ ದುಃಖ ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸಿದರು. ಸಂದರ್ಭದಲ್ಲಿ ಪಿಯು ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಲಬುರಗಿ ಜಿಲ್ಲಾ ಮಟ್ಟದ
## ಸರ್ಕಾರಿ ನೌಕರರ ಕ್ರೀಡಾಕೂಟ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ

ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಜಿಲ್ಲಾಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಇದೇ ಜನವರಿ 21 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಗೌರವ ಉಪಸ್ಥಿತಿವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಸುನೀಲ್ ವಲ್ಲ್ಯಾಪುರೆ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಪ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ್ ಎಂ.ವೈ. ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯ್ಯದ್ ಮಹೆಬೂಬ್ ಚಿಸ್ತಿ ಸಾಹೇಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಮಹಾನಗರಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ ಹಾಗೂ ಬೆಂಗಳೂರಿನ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್, ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು ಸಿನ್ಹಾ, ಕೆ.ಕೆ. ಆರ್.ಟಿ.ಸಿ. ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಪಾಂಡ್ವೆ ರಾಹುಲ್ ತುಕಾರಾಮ್, ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸುಲು ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

# ವಿವಿಧ ತರಬೇತಿ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ

ಕಲಬುರಗಿ ಎಸ್.ಬಿ.ಐ. ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಉಚಿತವಾಗಿ ಕೆಳಕಂಡ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಎಸ್.ಬಿ.ಐ. ಆರ್‌ಸೆಟ್ ನಿರ್ದೇಶಕರು ತಿಳಿಸಿದ್ದಾರೆ.

ಜನವರಿ 30 ರಿಂದ ಫೆಬ್ರವರಿ 11 ರವರೆಗೆ ಕೃಷಿ ಉದ್ಯಮಿ (ಕುರಿ ಮತ್ತು ಆಡು ಸಾಕಾಣಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ) ತರಬೇತಿ ನೀಡಲಾಗುತ್ತಿದ್ದು, ಅರ್ಜಿ ಸಲ್ಲಿಕೆಗೆ ಜನವರಿ 29 ಕೊನೆಯ ದಿನವಾಗಿದೆ. ಫೆಬ್ರವರಿ 23 ರಿಂದ ಮಾರ್ಚ್ 24 ರವರೆಗೆ ಟಿ.ವ್ಹಿ. ರಿಪೇರಿ ತರಬೇತಿ ನೀಡಲಾಗುತ್ತಿದ್ದು,ಅರ್ಜಿ ಸಲ್ಲಿಕೆಗೆ ಫೆಬ್ರವರಿ 22 ರಂದು ಕೊನೆಯ ದಿನವಾಗಿದೆ. ಅದೇ ರೀತಿ ವಸ್ತ್ರ ಚಿತ್ರಕಲಾ (ಹ್ಯಾಂಡ್ ಎಂಬ್ರಾಯಡರಿ) (ಲಘು ಉದ್ಯಮಿ) ಕುರಿತು ಜನವರಿ 27 ರಿಂದ ಫೆಬ್ರವರಿ 26 ರವರೆಗೆ ತರಬೇತಿ ನೀಡಲಾಗುತ್ತಿದ್ದು, ಅರ್ಜಿ ಸಲ್ಲಿಕೆಗೆ ಜನವರಿ 26 ರಂದು ಕೊನೆಯ ದಿನವಾಗಿದೆ.

ಈ ತರಬೇತಿ ಸಂದರ್ಭದಲ್ಲಿ ಉಚಿತ ಊಟ ಹಾಗೂ ವಸತಿ ಸೌಲಭ್ಯ ನೀಡಲಾಗುತ್ತದೆ. ವಯೋಮಿತಿ 18 ರಿಂದ 45 ವರ್ಷದೊಳಗಿನ ಬಿ.ಪಿ.ಎಲ್., ಅಂತ್ಯೋದಯ ರೇಷನ್, ಎಮ್‌ಜಿಎನ್‌ಆರ್‌ಇಜಿಎ ಕಾರ್ಡ್ ಹೊಂದಿದ ಕುಟುಂಬದ ನಿರುದ್ಯೋಗಿ ಅಭ್ಯರ್ಥಿಗಳು ಸಂಸ್ಥೆಯಿಂದ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲಾತಿಗಳೊಂದಿಗೆ ಮೇಲ್ಕಂಡಂತೆ ಕೊನೆಯ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ತರಬೇತಿ ಸಂಸ್ಥೆಯನ್ನು ಹಾಗೂ ಮೊಬೈಲ್ ಸಂಖ್ಯೆ 9901694389, 9900135705, 7019939996 ಹಾಗೂ 9901098123 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಜನವರಿ 20 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ

ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ-2ರ ವ್ಯಾಪ್ತಿಯಲ್ಲಿ ಬರುವ ಪ್ರಸ್ತುತ 33/11 ಕೆ.ವಿ. ನೆಲೋಗಿ ವಿದ್ಯುತ್ ಉಪ-ಕೇಂದ್ರದಲ್ಲಿ ಮೆಂಟೇನೆನ್ಸ್ ಕಾರ್ಯಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಇದೇ ಜನವರಿ 20ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುತ್ತಿದ್ದು, ಸಾರ್ವಜನಿಕರು ಹಾಗೂ ಗ್ರಾಮದ ಎಲ್ಲಾ ನೀರಾವರಿ ಪಂಪ್‌ಸೆಟ್‌ನ ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ-2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ. ಜೇವರ್ಗಿ ಉಪವಿಭಾಗದ 33/11 ಕೆ.ವಿ ನೆಲೋಗಿ ವಿದ್ಯುತ್ ವಿತರಣಾ ಕೇಂದ್ರ: ಜೇವರ್ಗಿ ತಾಲೂಕಿನ ನೆಲೋಗಿ ಗ್ರಾಮ ಪಂಚಾಯತಿಯ ವ್ಯಾಪ್ತಿಯ ಕಲ್ಲೂರ-ಕೆ, ಕಲ್ಲೂರ-ಬಿ, ಯಂಕ್ಕಂಚಿ, ಮಾಹುರ, ಕೂಡಲಗಿ, ನಾಗರಾಣಿ, ಕೂಟನೂರ್, ಹಿಪ್ಪರಗಾ ಎಸ್.ಎನ್, ಸೊನ್ನ, ನಿರಲಕೊಡ, ಹೆಗಿನಾಳ, ಕಲ್ಲಹಂಗರಗಾ, ಕಾಸರ ಬೊಸಗಾ, ಮುತಕೊಡ ಮತ್ತು ನೆಲೋಗಿ ಗ್ರಾಮ ಪಂಚಾಯತಿಯ ಎಲ್ಲಾ ಗ್ರಾಮಗಳು ಹಾಗೂ ಗ್ರಾಮದ ಎಲ್ಲಾ ನೀರಾವರಿ ಪಂಪ್‌ಸೆಟ್‌ಗಳು.

# ಕೆ.ಪಿ.ಆರ್.ಶುಗರ್ಸ್ ಕಾರ್ಖಾನೆಗೆ ಡಿ.ಸಿ. ದಿಢೀರ ಭೇಟಿ




ಮಲ್ಲಮ್ಮನುಡಿವಾರ್ತೆ,ಕಲಬುರಗಿ

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಶನಿವಾರ ಅಫಜಲಪೂರ ತಾಲೂಕಿನ ಚಿಣಮಗೇರಾ ಗ್ರಾಮದಲ್ಲಿರುವ ಕೆ.ಪಿ.ಆರ್.ಶುಗರ್ಸ್ ಕಾರ್ಖಾನೆಗೆ ದಿಢೀರ ಭೇಟಿ ನೀಡಿ ಕಬ್ಬು ತೂಕ ಕಾರ್ಯ ಪರಿಶೀಲಿಸಿದರು.

ಕಬ್ಬು ತೂಕ ಮಾಡುವ ಯಂತ್ರ ಕಾರ್ಯ ವಿಕ್ಷಿಸಿದಲ್ಲದೆ ಕಾರ್ಖಾನೆಯ ವಿವಿಧ ವಿಭಾಗಕ್ಕೆ ಭೇಟಿ ನೀಡಿದ ಅವರು ಕಬ್ಬು ಇಳುವರಿ ಕುರಿತು ಕಾರ್ಖಾನೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಕಬ್ಬು ಮಾರಾಟ ಮಾಡಲು ಬರುವ ರೈತರಿಗೆ ಕುಡಿಯುವ ನೀರು, ಶೌಚಾಲಯ, ರಾತ್ರಿ ಇರಲು ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕೆಂದು ಸೂಚಿಸಿದರು.

ಇನ್ನು ಸಕಾಲದಲ್ಲಿಯೆ ರೈತರಿಗೆ ಕಬ್ಬಿನ ಹಣ ಪಾವತಿ ಮಾಡಬೇಕು. ಅನಗತ್ಯ ವಿಳಂಬ ಮಾಡಬಾರದು. ಹಣ ಪಾವತಿಯ ಪ್ರತಿ ವ್ಯವಹಾರವು ಪಾರದರ್ಶಕವಾಗಿರಬೇಕು ಮತ್ತು ಪ್ರತಿ ಹಂತದ ಮಾಹಿತಿ ರೈತರಿಗೆ ಒದಗಿಸಬೇಕು. ರೈತರ ಸಮಕ್ಷಮ ತೂಕ ಮಾಡಬೇಕು ಎಂಬಿತ್ಯಾದಿ ಕಾರ್ಖಾನೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದ ರೈತರೊಂದಿಗೆ ಸಂವಾದಿಸಿ ಅವರ ಸಮಸ್ಯೆ ಆಲಿಸಿದರು.

ತಹಶೀಲ್ದಾರರ ಸಂಜೀವಕುಮಾರ ದಾಸರ್ ಸೇರಿದಂತೆ ಕಾರ್ಖಾನೆಯ ಉಪಾಧ್ಯಕ್ಷರು, ಇತರೆ ಅಧಿಕಾರಿಗಳು, ರೈತ ಮುಖಂಡರು ಇದ್ದರು.

# ಜನವರಿ 29ರಂದು ಕಾಳಗಿ ತೈ ಬಜಾರ ಹರಾಜು ಪ್ರಕ್ರಿಯೆ

• ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ

ಕಾಳಗಿ ಪಟ್ಟಣ ಪಂಚಾಯತ್ ವತಿಯಿಂದ 2025-26ನೇ ಸಾಲಿಗೆ (ದಿನದ ಮತ್ತು ವಾರದ ಮಾರುಕಟ್ಟೆ) ತೈ ಬಜಾರ ಹರಾಜು ಪ್ರಕ್ರಿಯೆಯು ಇದೇ ಜನವರಿ 29 ರಂದು ಮಧ್ಯಾಹ್ನ 12 ಗಂಟೆಗೆ ಕಾಳಗಿ ಪಟ್ಟಣ ಪಂಚಾಯತ್ ಕಚೇರಿ ಆವರಣದಲ್ಲಿ ಜರುಗಲಿದೆ ಎಂದು ಕಾಳಗಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತೈ ಬಜಾರ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲಿಚ್ಛಿಸುವವರು 25,000 ರೂ. ಗಳ ಠೇವಣಿ ಮೊತ್ತ ಪಾವತಿಸಬೇಕು. ಆಸಕ್ತರು ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್, ಕಾಳಗಿ ಇವರ ಹೆಸರಿಗೆ ಪಡೆದಿರುವ ಠೇವಣಿ ಡಿ.ಡಿ. ಅಥವಾ ನಗದು ಹಣದೊಂದಿಗೆ ತಮ್ಮ ಆಧಾರ ಕಾರ್ಡ್ ಅಥವಾ ಗುರುತಿನ ಚೀಟಿಯ ಪ್ರತಿಯನ್ನು 2026ರ ಜನವರಿ 29ರ ಮಧ್ಯಾಹ್ನ 12 ಗಂಟೆಯೊಳಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಚೇರಿಯಲ್ಲಿ ಸಲ್ಲಿಸಬೇಕು.

ವಿವಿಧ ಮಾರಾಟಗಾರರಿಗೆ ನಿಗದಿಪಡಿಸಿದ ಪ್ರತಿದಿನ/ ವಾರದ ಸಂತೆಗಳ ಸುಂಕ ವಸೂಲಿ ದರಗಳ ವಿವರ, ಹರಾಜಿನ ಷರತ್ತುಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಾರ್ಯಾಲಯದಿಂದ ಕಚೇರಿಯ ಅವಧಿಯಲ್ಲಿ ಸಂಪರ್ಕಿಸಲು ಕೋರಲಾಗಿದೆ.

# ಸಚ್ಚಾರಿತ್ರ್ಯದ ಸನ್ಮಾರ್ಗವೇ ಶಿಕ್ಷಣ ಡಾ. ಯಂಕನಗೌಡ ಪಾಟೀಲ




• ಮಲ್ಲಮ್ಮ ನುಡಿ ವಾರ್ತೆ,ಕೆಂಭಾವಿ:

ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯರಾಗಬೇಕು, ಅಂಕಗಳಿಕೆ ಎಂಬುದು ಉದ್ಯೋಗದ ಭಾಗವಷ್ಟೇ, ಸಚ್ಚಾರಿತ್ರ್ಯದ ಸನ್ಮಾರ್ಗ ತೋರುವುದೇ ಶಿಕ್ಷಣದ ಅಂತಿಮ ಗುರಿಯಾಗಬೇಕು ಎಂದು ಉಪನ್ಯಾಸಕ ಡಾ ಯಂಕನಗೌಡ ಎಸ್ ಪಾಟೀಲ ಹೇಳಿದರು.

ಪಟ್ಟಣದ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಸ್ವಾಮಿ ವಿವೇಕಾನಂದರ 164 ನೇ ಜಯಂತೋತ್ಸವ ಮತ್ತು ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಸ್ವಾಮಿ ವಿವೇಕಾನಂದರ ವಿಚಾರಧಾರೆಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಸತ್ಪ್ರಜೆಗಳಾಗಿ ಬಾಳಲು ಸಾಧ್ಯ ಎಂದವರು. "ಸತಿಪತಿಗಳೊಂದಾದ ಭಕ್ತಿ ಹಿತವಾಗಿಪ್ಪುದು ಶಿವಂಗೆ" ಎಂಬಂತೆ ಪತ್ನಿ ಮತ್ತು ಪತಿಯರು ಒಂದಾಗಿ, ಶಿಕ್ಷಣ ಸಂಸ್ಥೆಯ ಏಳಿಗೆಗಾಗಿ ಹಗಲಿರುಳೂ ಶ್ರಮಿಸುತ್ತಿರುವ ಮುಖ್ಯ ಶಿಕ್ಷಕ ಬಾಬು ಪಟೇಲ್ ದಂಪತಿಗಳು ಹಾಗೂ ಕಾರ್ಯಕ್ಕೆ ಸಾಥ್ ನೀಡುತ್ತಿರುವ ಆಡಳಿತ ಮಂಡಳಿಯ ಕಾರ್ಯ ಶ್ಲಾಘನೀಯ, ಕಳೆದ ಮೂರು ದಶಕಗಳಿಂದ ನೂರಾರು ವಿದ್ಯಾರ್ಥಿಗಳ ಬಾಳಲಿ ಜ್ಞಾನ ದೀವಿಗೆ ಹೊತ್ತಿಸಿ ಬಡ ಮಕ್ಕಳ ಪಾಲಿಗೆ ಆಶಾಕಿರಣವಾದ ಈ ಶಿಕ್ಷಣ ಸಂಸ್ಥೆ ಮುಂಬರುವ ದಿನಗಳಲ್ಲಿ ಪ್ರೌಢಶಾಲೆ ಆರಂಭಿಸುವ ಮೂಲಕ ಗ್ರಾಮೀಣ ಪ್ರತಿಭೆಗಳ ಉನ್ನತ ವ್ಯಾಸಂಗಕ್ಕೆ ಮುಂದಾಗಲಿ ಎಂದು ಕರೆ ನೀಡಿದರು.

ಪ್ರಾಸ್ತಾವಿಕ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ಬಾಬು ಪಟೇಲ್ ಸ್ವಾಮಿ ವಿವೇಕಾನಂದರ ಹೆಸರಿನಲ್ಲಿ ನಡೆಯುತ್ತಿರುವ ನಮ್ಮ ಸಂಸ್ಥೆಯು ಕೇವಲ ಅಕ್ಷರ ಕಲಿಸದೆ ಸಂಸ್ಕಾರವನ್ನು ಕಲಿಸುತ್ತಿದೆ. ಇಲ್ಲಿ ಓದಿದ ವಿದ್ಯಾರ್ಥಿಗಳು ಇಂದು ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ದೇಶ-ವಿದೇಶಗಳಲ್ಲಿ ಉನ್ನತ ಸ್ಥಾನ ಅಲಂಕರಿಸಿರುವುದು ನಮ್ಮ ಶ್ರಮಕ್ಕೆ ಸಂದ ಗೌರವ. ವಿವೇಕಾನಂದರ 'ಏಳಿ, ಎದ್ದೇಳಿ' ಎಂಬ ಮಂತ್ರದಂತೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಸಾಧನೆಯ ಶಿಖರ ಏರಬೇಕು ಎಂದರು.

ವಿವೇಕೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಪುಟ್ಟ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಮನಸೂರೆಗೊಂಡಿತು. ಸ್ವಾಮಿ ವಿವೇಕಾನಂದರ ವೇಷಧರಿಸಿ ಅವರ ಐತಿಹಾಸಿಕ ಚಿಕಾಗೋ ಭಾಷಣದ ಮರುಸೃಷ್ಟಿ ಮಾಡುವ ಮೂಲಕ. ವಿವೇಕಾನಂದರ ಜೀವನ ಚರಿತ್ರೆಯನ್ನು ಸಾರುವ ಕಿರು ನಾಟಕಗಳು ಮತ್ತು ದೇಶಭಕ್ತಿ ಗೀತೆಗಳ ಗಾಯನವು ನೆರೆದಿದ್ದ ಪೋಷಕರಲ್ಲಿ ಮತ್ತು ಸಾರ್ವಜನಿಕರಲ್ಲಿ ರೋಮಾಂಚನ ಉಂಟುಮಾಡಿತು. ಇದೇ ಸಂದರ್ಭದಲ್ಲಿ ಪಿಯುಸಿ ಕಾಲೇಜು ಉಪನ್ಯಾಸಕ ರಾಮಣ್ಣ ಪಾಟೀಲ, ಶಿಕ್ಷಕಿ ಸಾನಿಯಾ ನಾಲತವಾಡ ಇವರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಶಿಕ್ಷಣ ಸಂಸ್ಥೆ ಅಧ್ಯಕ್ಷ ಆದಿತ್ಯಗೌಡ ಪೊಲೀಸ್ ಪಾಟೀಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಮುಖರಾದ ಉಪಾಧ್ಯಕ್ಷ ಬಂದೇನವಾಜ್ ನಾಲತವಾಡ, ಗಂಗಾಧರ ಪತ್ತಾರ, ಇಲಿಯಾಸ್ ನಾಲತವಾಡ, ತಾಹೇರ ಹುಸೇನ್, ಇಲಿಯಾಸ್ ಪಟೇಲ್, ಮೌಲಾನ ಗೌಸ್ಪಾಕ್, ಸಿಬ್ಬಂದಿ ಮಧುಮತಿ, ಅಕ್ಷತಾ, ಮಿಜಬಾ, ಮದೀನಾ, ಭಾರತಿ ಸೇರಿದಂತೆ ವಿದ್ಯಾರ್ಥಿಗಳು ಪಾಲಕ ಪೋಷಕರು ಉಪಸ್ಥಿತರಿದ್ದರು.

ಶ್ರೀ ಮಹಾಯೋಗಿ ವೇಮನ ಜಯಂತಿ ಆಚರಣೆ

# ಲೋಕಕಲ್ಯಾಣಕ್ಕಾಗಿ ಶ್ರಮಿಸಿದ ವೇಮನ ಮಹಾನ್ ದಾರ್ಶನಿಕ :ಅಲ್ಲಮಪ್ರಭು ಪಾಟೀಲ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:



ಕನ್ನಡದಲ್ಲಿ ಸರ್ವಜ್ಞ, ತಮಿಳಿನಲ್ಲಿ ತಿರುವಳ್ಳುವರ್ ಅವರಂತೆ ತೆಲುಗಿಗೆ ಶ್ರೀ ಮಹಾಯೋಗಿ ವೇಮನರು ವಚನಕಾರರಾಗಿದ್ದು, ಲೋಕಕಲ್ಯಾಣಕ್ಕಾಗಿ ಶ್ರಮಿಸಿದ ಮಹಾನ್ ದಾರ್ಶನಿಕರಾಗಿದ್ದಾರೆ ಎಂದು ಶಾಸಕ ಅಲ್ಲಮಪ್ರಭು ಪಾಟೀಲ ತಿಳಿಸಿದರು.

ಸೋಮವಾರ ಕಲಬುರಗಿ ನಗರದ ಡಾ. ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಶ್ರೀ ಮಹಾಯೋಗಿ ವೇಮನ್ ಅವರ ಭಾವಚಿತ್ರಕ್ಕೆ ಪುಜೆ ಸಲ್ಲಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 14 ಮತ್ತು 15ನೇ ಶತಮಾನದಲ್ಲಿ ಸಮ ಸಮಾಜ ನಿರ್ಮಾಣಕ್ಕೆ ವೇಮನರು ಶ್ರಮಿಸಿದ್ದಾರೆ ಎಂದರು.

ಕಾರಣಾಂತರದಿಂದ ವೇಮನರು ದುಶ್ಚಟಕ್ಕೆ, ಸ್ತ್ರೀ ವ್ಯಾಮೋಹಕ್ಕೆ ಒಳಗಾಗಿದ್ದರು. ಪರಸ್ತ್ರಿಯ ಆಸೆಗೆ ಅತ್ತಿಗೆಯಾದ ಹೇಮರೆಡ್ಡಿ ಮಲ್ಲಮ್ಮ ಅವರ ಮೂಗುತಿಯನ್ನು ಪಡೆಯಲು ಬಂದಾಗ ಹೇಮರೆಡ್ಡಿ ಮಲ್ಲಮ್ಮನ ಪ್ರೇರಣೆಯ ಮಾತಿನಿಂದ ಮನ ಪರಿವರ್ತನೆಗೊಂಡು ಮುಂದೆ ಯೋಗಿಯಾಗಿ ಸುಮಾರು 4,000 ವಚನಗಳನ್ನು ಬರೆಯುವ ಮೂಲಕ ವಚನ ಸಾಹಿತ್ಯಕ್ಕೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆ ಎಂದು ಅಲ್ಲಮಪ್ರಭು ಪಾಟೀಲ್ ತಿಳಿಸಿದರು.

ಬಸವಣ್ಣನವರ ಮಾರ್ಗದಲ್ಲಿ ಸಾಗಿದ ವೇಮನರು ವಚನಗಳ ಮೂಲಕ ಜನಸಾಮಾನ್ಯರಲ್ಲಿ ಜಾಗೃತೆ ಮೂಡಿಸಿ ಬದುಕಿಗೆ ದಾರಿ ತೋರಿಸಿದ್ದಾರೆ. ಇಂತಹ ದಾರ್ಶನಿಕರ ಸಾಧನೆ, ತತ್ವಗಳು ಪಠ್ಯ ಪುಸ್ತಕದಲ್ಲಿ ಅಳವಡಿಸಿ ಮುಂದೆ ಬರುವ ಯುವಪೀಳಿಗೆಗೆ ತಲುಪಿಸುವ ಕಾರ್ಯ ಸರ್ಕಾರ ಮಾಡಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ರೆಡ್ಡಿ ಸಮಾಜದ ಅಧ್ಯಕ್ಷರಾದ ಡಾ. ಎಸ್ ಬಿ ಕಾಮರೆಡ್ಡಿ ಅವರು ಮಾತನಾಡಿ, ಆಂಧ್ರಪ್ರದೇಶದ ಕಡಪ ಜಿಲ್ಲೆಯಲ್ಲಿ ಜನಿಸಿದ ತೆಲುಗು ಕವಿ, ಸಮಾಜ ಸುಧಾರಕ ಮಹಾಯೋಗಿ ವೇಮನ್ ಅವರು ಆರಂಭದಲ್ಲಿ ಅನಾದಾರಕ್ಕೆ ಗುರಿಯಾಗಿ ದುಶ್ಚಟಗಳಿಗೆ ದಾಸನಾಗಿದ್ದರು. ಹೇಮರೆಡ್ಡಿ ಮಲ್ಲಮ್ಮನಿಂದ ಪರಿವರ್ತನೆಗೊಂಡು ಜೀವನದಲ್ಲಿ ಯೋಗಿಯಾಗಿ ಕವಿಯಾಗಿ ಗುರುತಿಸಿಕೊಂಡವರಾಗಿದ್ದಾರೆ ಎಂದರು.

ಕಲಬುರ್ಗಿಯ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ. ಜ್ಯೋತಿ ಎಂ. ರೆಡ್ಡಿ ಅವರು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ, ಜಿಲ್ಲಾಧಿಕಾರಿ ಕಚೇರಿಯ ಕಚೇರಿ ಸಹಾಯಕ ಶಿವಪ್ರಭು ಹಿರೇಮಠ, ಹಾಗೂ ರೆಡ್ಡಿ ಸಮಾಜದ ಮುಖಂಡರು ಇನ್ನಿತರರು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ನಾಸಿ ಸ್ವಾಗತಿಸಿದರು.

# ಇ-ಆಫೀಸ್ ಬಳಕೆಯಲ್ಲಿ ರಾಜ್ಯದಲ್ಲಿಯೇ ಕಲಬುರಗಿ ನಂಬರ್1: ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,

ಸರ್ಕಾರಿ ಕಚೇರಿಯಲ್ಲಿ ಕಡತಗಳ ತ್ವರಿತ ವಿಲೇವಾರಿಗೆ ತಂತ್ರಜ್ಞಾನದ ಸಮರ್ಪಕ ಬಳಕೆಗೆ ಒತ್ತು ನೀಡಿದ ಪರಿಣಾಮ ಇ-ಆಫೀಸ್ ಬಳಕೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯ ಕಲಬುರಗಿ ಜಿಲ್ಲಾ ಪಂಚಾಯತ ಇಡೀ ರಾಜ್ಯದಲ್ಲಿಯೇ ನಂಬರ್-1 ಸ್ಥಾನ ಪಡೆದುಕೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕಳೆದ 2025ನೇ ಕ್ಯಾಲೆಂಡರ್ ವರ್ಷದಲ್ಲಿ ಕಲಬುರಗಿ ಜಿಲ್ಲೆಯಲ್ಲಿ 2,938 ಇ-ಕಡತ ಸೃಷ್ಟಿಸಿ 54,381 ಕಡತ ವಿಲೇವಾರಿ ಮಾಡಲಾಗಿದೆ. ಅದೇ ರೀತಿ ಸಾರ್ವಜನಿಕರಿಂದ ಸ್ವೀಕೃತ 13,664 ಪತ್ರಗಳನ್ನು ಇ-ರಸೀದಿಯಡಿ ಸೃಷ್ಟಿಸಿ 3,52,221 ಇ-ರಸೀದಿ ವಿಲೇವಾರಿ ಮಾಡಲಾಗಿದೆ.

ಸರ್ಕಾರಿ ಕಚೇರಿಗಳು ಜನಸ್ನೇಹಿಯಾಗಬೇಕು. ಸಾರ್ವಜನಿಕರು ತಮ್ಮ ಕೆಲಸಕ್ಕೆ ಸರ್ಕಾರಿ ಕಚೇರಿಗಳಿಗೆ ಅನಗತ್ಯ ವರ್ಷಗಟ್ಟಲೆ ಅಲೆದಾಡುವುದನ್ನು ತಪ್ಪಿಸಲೆಂದೆ ಇ-ಆಫೀಸ್ ಅನುಷ್ಠಾನದ ಮೂಲಕ ಪ್ರತಿ ಅಧಿಕಾರಿ-ಸಿಬ್ಬಂದಿಗೆ ಕಾಲಮಿತಿಲ್ಲಿಯೆ ಕಡತ ವಿಲೇವಾರಿಗೆ ಹೊಣೆಗಾರಿಕೆ ನೀಡಿದ ಫಲ ಇದಾಗಿದೆ. ಆಡಳಿತ ಸುಧಾರಣೆಯಲ್ಲಿ ಕಲಬುರಗಿ ಜಿಲ್ಲೆ ಮುಂಚೂಣಿಯಲ್ಲಿರುವುದಕ್ಕೆ ಸಚಿವರು ಸಂತಸ ವ್ಯಕ್ತಪಡಿಸಿದ್ದಾರೆ.

ಟಾಪ್ 10 ನಲ್ಲಿ ಕಲ್ಯಾಣದ ನಾಲ್ಕು ಜಿಲ್ಲೆ: ರಾಜ್ಯದಾದ್ಯಂತ 2025 ಕ್ಯಾಲೆಂಡರ್ ವರ್ಷದಲ್ಲಿ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಇ-ಕಡತ ಬಳಕೆಯಲ್ಲಿ ಟಾಪ್-10 ಜಿಲ್ಲೆಗಳ ಅಂಕಿ-ಸಂಖ್ಯೆ ಅವಲೋಕಿಸಿದರೆ

2,938 ಇ-ಕಡತ ಸೃಜಿಸಿ ಕಲಬುರಗಿ ಜಿಲ್ಲಾ ಪಂಚಾಯತ್ ಮೊದಲನೇ ಸ್ಥಾನದಲ್ಲಿದ್ದರೆ, 2,523 ಕಡತ ಸೃಜಿಸಿ ಚಿತ್ರದುರ್ಗ ಜಿ.ಪಂ. ಎರಡನೇ ಹಾಗೂ 2,476 ಕಡತದೊಂದಿಗೆ ಬೆಂಗಳೂರು ನಗರ ಜಿ.ಪಂ. ಜಿಲ್ಲೆ ಮೂರನೇ ಸ್ಥಾನ ಪಡೆದಿದೆ. 2,339 ಇ-ಕಡತ ಸೃಜಿಸಿ ಐದನೇ ಸ್ಥಾನದಲ್ಲಿ ಬೀದರ, 1,955 ಇ-ಕಡತ ಸೃಜಿಸಿ ಎಂಟನೇ ಸ್ಥಾನದಲ್ಲಿ ಯಾದಗಿರಿ, 1,924 ಇ-ಕಡತ ಸೃಜನೆಯೊಂದಿಗೆ ಒಂಬತ್ತನೇ ಸ್ಥಾನದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ಸ್ಥಾನ ಪಡೆದುಕೊಂಡಿದೆ. ಅಗ್ರ 10ರಲ್ಲಿ ಕಲ್ಯಾಣ ಕರ್ನಾಟಕ 4 ಜಿಲ್ಲೆಗಳು ಇ-ಆಫೀಸ್ ಅನುಷ್ಠಾನದಲ್ಲಿ ಸ್ಥಾನ ಪಡೆದಿರುವುದು ಪ್ರದೇಶದ ಗ್ರಾಮೀಣ ಭಾಗದಲ್ಲಿ ಆಡಳಿತ ವೇಗ ಪಡೆದುಕೊಂಡಿರುವುದಕ್ಕೆ ಹಿಡಿದ ಕನ್ನಡಿಯಾಗಿದೆ. ಸುಗಮ ಅಡಳಿತಕ್ಕೆ ಕಲಬುರಗಿ ಜಿಲ್ಲೆ ಮಾದರಿಯಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.




ಗಮನಸೆಳೆದ ಆಳಂದ-ಅಫಜಲಪೂರ ತಾಲೂಕಾ ಪಂಚಾಯತಿ: ಇನ್ನು ತಾಲೂಕಾ ಪಂಚಾಯತಿವಾರು ಇ.ಆಫೀಸ್ ಬಳಕೆಯಲ್ಲಿಯೂ ಕಳೆದ ವರ್ಷದಲ್ಲಿ ಜಿಲ್ಲೆ ಗಮನಾರ್ಹ ಸಾಧನೆ ಮಾಡಿದೆ. ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕು ಪಂಚಾಯತಿ 1,508 ಇ-ಕಡತ ಸೃಜಿಸಿ 3,089 ಇ-ಕಡತ ವಿಲೇವಾರಿ ಮಾಡಿ ಅಗ್ರ ಸ್ಥಾನ ಪಡೆದುಕೊಂಡರೆ, ಜಿಲ್ಲೆಯ ಆಳಂದ ತಾಲೂಕು ಪಂಚಾಯತಿ 1,127 ಇ-ಕಡತ ಸೃಜಿಸಿ 3,560 ಕಡತ ವಿಲೇವಾರಿ ಮತ್ತು 526 ಇ-ರಸೀದಿ ಸೃಷ್ಟಿಸಿ 2,022 ಇ-ರಸೀದಿ ವಿಲೇವಾರಿಯೊಂದಿಗೆ ರಾಜ್ಯದಲ್ಲಿಯೇ ದ್ವಿತೀಯ ಸ್ಥಾನ ಪಡೆದುಕೊಂಡಿದೆ.

ಅದೇ ರೀತಿ ಅಫಜಲಪುರ ತಾಲೂಕ ಪಂಚಾಯತಿ 668 ಇ-ಕಡತ ಸೃಜಿಸಿ 3,189 ಕಡತ ವಿಲೇವಾರಿ ಮಾಡಿ ಏಳನೇ ಸ್ಥಾನ ಹಾಗೂ ಕಲಬುರಗಿ ತಾಲೂಕ ಪಂಚಾಯತಿ 564 ಇ-ಕಡತ ಸೃಜಿಸಿ 1,527 ಕಡತ ವಿಲೇವಾರಿ ಮಾಡಿ ಒಂಭತ್ತನೇ ಸ್ಥಾನ ಕಾಯ್ದುಕೊಂಡಿದೆ. ಈ ಮೂಲಕ ತಾಲೂಕಾವಾರು ಟಾಪ್ ಟೆನ್ ನಲ್ಲಿ ಕಲಬುರಗಿ ಜಿಲ್ಲೆಯ ಮೂರು ತಾಲೂಕುಗಳು ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿವೆ.

ಸಾರ್ವಜನಿಕರ ಅರ್ಜಿ ವಿಲೇವಾರಿ ಪ್ರಥಮಾದ್ಯತೆ: ಜಿಲ್ಲೆಯ ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತಿಗಳು ಇ-ಕಡತ ಬಳಕೆಯಲ್ಲಿನ ಸಾಧನೆಗೆ ಸಂತಸ ವ್ಯಕ್ತಪಡಿಸಿರುವ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಸಾರ್ವಜನಿಕರು ಕಚೇರಿಗೆ ಸಲ್ಲಿಸುವ ಅರ್ಜಿಗಳನ್ನು ಇ-ಆಫೀಸ್ ಸಹಾಯದಿಂದ ಪ್ರಥಮಾದ್ಯತೆ ಮೇಲೆ ಕಡತ ವಿಲೇವಾರಿ ಮಾಡಿ ಪತ್ರಗಳಿಗೆ ಭೌತಿಕ ಸಹಿ ಬದಲಾಗಿ ಡಿಜಿಟಲ್ ಸಹಿವುಳ್ಳ ಒತ್ರದಮುಲಕವೆ ವ್ಯವಹರಿಸಲಾಗುತ್ತಿದೆ. ಇದಕ್ಕೆ ಕಾರಣರಾದ ಸಿಬ್ಬಂದಿಗಳನ್ನು ಶ್ಲಾಘಿಸಿದ ಅವರು ಮುಂದೆಯೂ ಇದೇ ರೀತಿಯಲ್ಲಿ ತ್ವರಿತ ಕಡತ ವಿಲೇವಾರಿ ಮೂಲಕ ಸಾರ್ವಜನಿರ ಕೆಲಸ ಕಾರ್ಯಗಳಿಗೆ ಸ್ಪಂದಿಸುವಂತೆ ಕೆಳ ಹಂತದ ಸಿಬ್ಬಂದಿಗಳಿಗೆ ಸೂಚಿಸಿದ್ದಾರೆ.

# ಬಾಲ ಭಾರತಿ ಶಾಲೆಯಿಂದ ಗ್ರಾಮೀಣ ಭಾಗದ ಮಕ್ಕಳಿಗೆ ಅನುಕೂಲ : ವಿಜಯಭಾಸ್ಕರ

ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ.




ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಶಿಕ್ಷಣ ಸಂಸ್ಥೆ ಶೈಕ್ಷಣಿಕವಾಗಿ ತನ್ನನ್ನು ತಾನು ಅರ್ಪಿಸಿಕೊಂಡಿದೆ. ಸೇಡಂ ತಾಲೂಕಿನ ಗ್ರಾಮೀಣ ಭಾಗದ ಮಕ್ಕಳಿಗೆಹೆಚ್ಚುಅನುಕೂಲರವಾಗುವ ನಿಟ್ಟಿನಲ್ಲಿ ಬಾಲ ಭಾರತಿ ವಿದ್ಯಾ ಮಂದಿರ ಪ್ರಾಥಮಿಕ ಶಾಲಾ ಶಿಕ್ಷಣ ನೀಡಿದೆ ಎಂದು ಪತ್ರಕರ್ತ ವಿಜಯಭಾಸ್ಕರರೆಡ್ಡಿ ಅಭಿಪ್ರಾಯಪಟ್ಟರು.

ಇಲ್ಲಿನ ಶ್ರೀ ಕೊತ್ತಲ ಬಸವೇಶ್ವರ ದೇವಾಲಯದಆರೇಬೊಮ್ಮನಹಳ್ಳಿ ಸಭಾಂಗಣದಲ್ಲಿ ನಡೆದ ಶ್ರೀ ಬಾಲ ಭಾರತಿ ವಿದ್ಯಾಮಂದಿರ ಪ್ರಾಥಮಿಕ ಶಾಲಾ 52 ನೇ ವಾರ್ಷಿಕೋತ್ಸವದಲ್ಲಿಬಹುಮಾನ ವಿತರಿಸಿ ಮಾತನಾಡಿದ ಅವರು, ದೈವಿ ನೆಲೆಯಾದ ಶ್ರೀ ಕೊತ್ತಲ ಬಸವೇಶ್ವರಅಂಗಳದಲ್ಲಿ52ವರ್ಷಗಳ ಹಿಂದೆ ಪೂಜ್ಯ ಮಡಿವಾಳೇಶ್ವರ ಸ್ವಾಮಿಗಳು ಆರಂಭಿಸಿದ ಶಿಕ್ಷಣ ಸಂಸ್ಥೆ ಸಂಸ್ಥಾಪನಾ ಶಾಲೆ ಬಾಲಭಾರತಿ ವಿದ್ಯಾಮಂದಿರ ಅನೇಕ ವಿದ್ಯಾರ್ಥಿಗಳ

ಅದರಲ್ಲೂ ಗ್ರಾಮೀಣ ಭಾಗದ ಮಕ್ಕಳಿಗೆ ಅಕ್ಷರ ಅಭ್ಯಾಸ ಮಾಡಿಸುವಲ್ಲಿ ಅಭೂತಪೂರ್ವ ಪಾತ್ರ ವಹಿಸಿದೆ ಎಂದರು. ಮಕ್ಕಳಲ್ಲಿ ವಚನಗಳ ಪಠಣ ಮಾಡಿಸುವ ಮೂಲಕ ಬಾಲ ಭಾರತಿ ಶಾಲೆಯ ಅಂಗಳದಲ್ಲಿ ನಿತ್ಯವೂ ಒಂದಿಲ್ಲೊಂದು ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ಚಿಂತನಾ ಕೂಟ ಹಮ್ಮಿಕೊಳ್ಳಲಾಗುತ್ತದೆ.

ಶಾಲಾವಾತಾವರಣದಿಂದಅನೇಕ ಸಾಧಕರು ಹೊರಹೊಮ್ಮಿದ್ದಾರೆ. ಜೊತೆಗೆ ಸಂಸ್ಥೆಯ ನಿರಂತರ ಕಾಳಜಿಯಿಂದ ಹೆಚ್ಚಿನ ಮಕ್ಕಳು ಉನ್ನತ ಮಟ್ಟಕ್ಕೆ ಏರಿದ್ದಾರೆ ಎಂದರು. ಶೈಕ್ಷಣಿಕ ಚಿಂತನಾ ಕೂಡ ಉಪನ್ಯಾಸ ನೀಡಿದ ಶಿಕ್ಷಕ, ಸಂಪನ್ಮೂಲ ವ್ಯಕ್ತಿ ಅಂಬಾರಾಯ ಧನಗರ ಮಾತನಾಡಿ, ಮಕ್ಕಳಲ್ಲಿ ಶಿಸ್ತು ಹಾಗೂ ಸಮಯ ಪಾಲನೆ ಮುಖ್ಯವಾದ ಅಂಶವಾಗಿದೆ. ಪ್ರಾತಃಕಾಲದಲ್ಲಿ ಎದ್ದು ಅಭ್ಯಾಸ ಮಾಡುವ ಮಕ್ಕಳಲ್ಲಿ ನೆನಪಿನ ಶಕ್ತಿ ಹೆಚ್ಚಾಗಿರುತ್ತದೆ. ಧಾರವಾಹಿಗಳಿಂಸ ಹೊರಬಂದು ಮಕ್ಕಳ ಕಡೆ ಇಂದಿನ ಪೋಷಕರು ಗಮನ ನೀಡಬೇಕೆಂದು ಮಾರ್ಮಿಕವಾಗಿ ಹೇಳಿದರು. ಇಂದಿನ ಮಕ್ಕಳು ಮೊಬೈಲ್ ಹಾಗೂ ಟಿವಿ ಗೀಳಿಗೆ ಬೀಳದೆ, ಪುಸ್ತಕಗಳ ಸ್ನೇಹ ಮಾಡಬೇಕಿದೆ. ಒಂದೊಳ್ಳೆ ಪುಸ್ತಕ ನಮ್ಮ ಜೀವನ ರೂಪಿಸಲು ಹೆಚ್ಚು ಸಹಾಯಕಾರಿಯಾಗುತ್ತದೆ. ಶಾಲೆಗೆ ಬರುವ ಮಕ್ಕಳು ಶಿಸ್ತು ಹಾಗೂ ಸಮಯ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಸಹ ಕಾರ್ಯದರ್ಶಿ ಡಾ.ಸದಾನಂದ ಬೂದಿ ಮಾತನಾಡಿ, ಸಂಸ್ಥೆಯು ಮಡಿವಾಳ ಶ್ರೀಗಳ ಅಮೃಯ ಹಸ್ತದಿಂದ ಆರಂಭವಾಗಿ 52 ವರ್ಷಗಳ ಸುಧೀರ್ಘ ಕಾಲ ಮುನ್ನಡೆದುಕೊಂಡು ಬಂದಿದೆ. ಶಾಲೆಗೆ ಅನೇಕ ಸಾಧಕರು ಆಗಮಿಸಿ ಮಕ್ಕಳ ಮನೋವಿಕಾಸವೃದ್ಧಿಯಾಗುವಲ್ಲಿ ಪಾತ್ರವಹಿಸಿದ್ದಾರೆ ಎಂದರು. ಶಾಲೆಯ ಮುಖ್ಯಗುರುಗಳಾದ ಲಿಂಗಪ್ಪ ಬಿರಾದಾರ ಪ್ರಾಸ್ತಾವಿಕ ಮಾತಗಳಾಡಿ ಶಾಲೆ ನಡೆದು ಬಂದ ದಾರಿಯ ಬಗ್ಗೆ ವಿವರಣೆ ನೀಡಿದರು. ಸಮಾರಂಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಹಾಗೂ ಮಕ್ಕಳ ಪೋಷಕರಿಗೆ ಬಹುಮಾನ ವಿತರಣೆ ಮಾಡಲಾಯಿತು. ಜೊತೆಗೆ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಲಾಯಿತು.

ವೇದಿಕೆ ಮೇಲೆ ಸಂಸ್ಕೃತ ಪಾಠಶಾಲಾ ಮುಖ್ಯ ಗುರು ಸಂಗಮೇಶ ಮೂಡಬೂಳ ಇದ್ದರು.

# ನಗರಸಭೆಯಿಂದ ಅಂಗಡಿಗಳ ತಪಾಸಣೆ



## 50 ಕೆಜಿ ಪ್ಲಾಸ್ಟಿಕ್ ವಶ.

• ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ.

ಯಾದಗಿರಿ ನಗರಸಭೆ ವತಿಯಿಂದ ಶನಿವಾರ ಬೆಳಿಗ್ಗೆ ಅಂಗಡಿಗಳ ಮೇಲೆ ನಡೆದ ತಪಾಸಣೆ ವೇಳೆ ಸರಿ ಸುಮಾರು 50 ಕೆಜಿ ಯಷ್ಟು ಪ್ಲಾಸ್ಟಿಕ್ ವಶಕ್ಕೆ ಪಡೆಯಲಾಯಿತು. ನಗರದ ಹಳೆ ಬಸ್ ನಿಲ್ದಾಣ ರಸ್ತೆ , ಹೊಸ ಬಸ್ ನಿಲ್ದಾಣ ರಸ್ತೆಯಲ್ಲಿನ ಅಂಗಡಿ, ಬೇಕರಿಗಳ ಮೇಲೆ ತಪಾಸಣೆ ವೇಳೆ ಒಟ್ಟು 50 ಕೆಜಿ ಪ್ಲಾಸ್ಟಿಕ್ ವಶಪಡೆದು, ವ್ಯಾಪಾರ ಉದ್ದಿಮೆ ಪರವಾನಿಗೆ ಇರದ ವ್ಯಾಪಾರಸ್ತರಿಗೆ ಒಟ್ಟು 7000/– ದಂಡ ವಿಧಿಸಲಾಯಿತು.

ಪೌರಾಯುಕ್ತ ಉಮೇಶ್ ಚೌವ್ಹಾಣ, ಆರೋಗ್ಯನಿರೀಕ್ಷ ಮಂಜುನಾಥ್ ಚೌವ್ಹಾಣ, ಶಿವಪುತ್ರ, ಸೂಪರ್ವೈಸರ್ ಅರುಣ್ ಕುಮಾರ ಗೌಡಗೇರಾ, ಸೇರಿದಂತೆ ನಗರಸಭೆ ಸಿಬ್ಬಂದಿಗಳು ಹಾಜರಿದ್ದರು.

# ವಿರೋಧಿಗಳ ಟೀಕೆಗೆ ಅಭಿವೃದ್ಧಿಯಿಂದಲೇ ಉತ್ತರಿಸುವೆ

## ಶಾಸಕ ಶರಣಗೌಡ ಕಂದಕೂರ ಕಿಡಿ

• ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ.

ಯಾದಗಿರಿ: ಮತಕ್ಷೇತ್ರದ ಅಭಿವೃದ್ಧಿಯ ವಿಷಯದಲ್ಲಿ ಪದೇಪದೇ ಅನವಶ್ಯಕವಾಗಿ ರಾಜಕೀಯ ಮಾಡುವುದನ್ನು ಜನ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂಬುದನ್ನು ನಮ್ಮ ವಿರೋಧಿಗಳು ಮರೆಯಕೂಡದು ಎಂದು ಶಾಸಕ ಶರಣಗೌಡ ಕಂದಕೂರ ಟಾಂಗ್ ನೀಡಿದರು. ಸೋಮವಾರ ಗುರುಮಠಕಲ್ ಕ್ಷೇತ್ರದ ಅಲ್ಲಿಪುರ ಗ್ರಾಮದಲ್ಲಿ ಕಾಂಗ್ರೆಸ್ ತೊರೆದ ತಾಪಂ ಮಾಜಿ ಸದಸ್ಯ ಹಂಪಯ್ಯ ಸದರ ಮತ್ತು ಎಸ್ ಡಿಎಂಸಿ ಮಾಜಿ ಅಧ್ಯಕ್ಷ ಸೋಮಣ್ಣ ಬಡಿಗೇರ ಸೇರಿದಂತೆ ಹಲವು ಕಾರ್ಯಕರ್ತರನ್ನು ಜೆಡಿಎಸ್ ಗೆ ಸೇರ್ಪಡೆಗೆ ಸ್ವಾಗತಿಸಿ ಮಾತನಾಡಿದ ಅವರು, ವಿರೋಧಿಗಳ ಟೀಕೆಗೆ ಅಭಿವೃದ್ಧಿಯಿಂದಲೇ ಉತ್ತರಿಸುತ್ತೇನೆ.

ನಮ್ಮ ತಂದೆ ಶಾಸಕರಾದ ಮೇಲೆ ಬಹಳ ಜನ ನನ್ನ ಬಳಿ ಬಂದು ಕೆಲಸ ಮಾಡಿಕೊಂಡು ದೊಡ್ಡ ಶ್ರೀಮಂತರಾಗಿ ಕಳೆದ ಚುನಾವಣೆಯಲ್ಲಿ ನಾನು ಸೋಲುತ್ತೇನೆ ಎಂದು ಭಾವಿಸಿ ಕೈ ಬಿಟ್ಟು ಹೋಗಿದ್ದಾರೆ. ಆದರೆ, ನಾನು ಗೆಲುವು ಕಂಡರೆ ಅದಕ್ಕೆ ಪಕ್ಷದಲ್ಲಿನ ಪ್ರಾಮಾಣಿಕ ಕಾರ್ಯಕರ್ತ–ರೇ ಕಾರಣ ಎಂದು ಹೇಳಿದರು. ತಮ್ಮ ಭಾಷಣದ ಆರಂಭದಿಂದಲೂ ಹೆಸರು ಹೇಳದೆಯೇ, ಕ್ಷೇತ್ರದ ಕೈ ನಾಯಕರಿಗೆ ಚಾಟಿ ಬೀಸಿದ ಶಾಸಕರು, ನಾನು ಗುತ್ತೇದಾರಿಕೆ ಮಾಡುತ್ತಿಲ್ಲ, ಮದ್ಯದಂಗಡಿ ನಡೆಸುತ್ತಿಲ್ಲ, ಕೈಗಾರಿಕೆ ವಸಾಹತುಗಳಲ್ಲಿ ಹಣ ಪಡೆದುಕೊಂಡಿಲ್ಲ. ಬದಲಾಗಿ ಕ್ಷೇತ್ರದ ಜನ ಹೇಳಿದ ಎಲ್ಲ ಕೆಲಸ ಮಾಡಲು ಪ್ರಯತ್ನಿಸುತ್ತಿದ್ದೇನೆ. ನೀವು ನನ್ನನ್ನು ಎಷ್ಟೇ ತೇಜೋವಧೆ ಮಾಡಿದರೂ ಜನ ನನ್ನನ್ನು ವಿಧಾನಸಭೆ ವಿಧಾನಸಭೆಗೆ ಕಳಿಸುತ್ತಾರೆ ಎಂಬುದಕ್ಕೆ ಕಳೆದ ಚುನಾವಣೆಯ ನನ್ನ ಗೆಲುವೇ ಸಾಕ್ಷಿ ಎಂದು ಪುನರುಚ್ಚರಿಸಿದರು.

### 50 ವರ್ಷ ಅಧಿಕಾರ ನಡೆಸಿ ಕ್ಷೇತ್ರಕ್ಕೆ ಏನು ಮಾಡಿದ್ರಿ

ಗುರುಮಠಕಲ್ ಪಟ್ಟಣಕ್ಕೆ ಮನೆಮನೆಗೆ ಕುಡಿಯುವ ನೀರು, 50 ಹಾಸಿಗೆಯ ಆಸ್ಪತ್ರೆ, ಅಗ್ನಿಶಾಮಕ ಠಾಣೆ, ಡಾ.ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಮೂರ್ತಿ, ಒಂದು ಕೋಟಿ ರೂ.ವೆಚ್ಚದಲ್ಲಿ ಕನಕ ಭವನ, 185 ಕೋಟಿ ರೂ.ವೆಚ್ಚದ ಕೆರೆ ತುಂಬುವ ಯೋಜನೆ, ಅಲ್ಲಿಪುರ, ಹತ್ತಿಕುಣಿ ಆಸ್ಪತ್ರೆ ನಿರ್ಮಾಣ, ಹತ್ತಿಕುಣಿ ಜಲಾಶಯದ ನಾಲಾ ಅಧುನೀಕರಣಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಅವರ ಬಳಿ ಮನವಿ ಮಾಡಿ ಹಣ ಬಿಡುಗಡೆ ಮಾಡಿಸಿದ್ದೇನೆ ಎಂದು ತಮ್ಮ ಅವಧಿಯಲ್ಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ಎಳೆಎಳೆಯಾಗಿ ಬಿಡಿಸಿಟ್ಟ ಶಾಸಕರು ಆದರೆ, 50 ವರ್ಷ ನೀವೇ ಅಧಿಕಾರ ನಡೆಸಿದ್ದೀರಲ್ಲ? ಯಾಕೆ ಮೂಲಸೌಕರ್ಯ ಕಲ್ಪಿಸಲಿಲ್ಲ ಎಂದು ತೀಕ್ಷ್ಣವಾಗಿ ಪ್ರಶ್ನಿಸಿದರು.

### ಕಂದಕೂರ ಕುಟುಂಬ ಎಲ್ಲ ವರ್ಗದವರನ್ನು ಪ್ರೀತಿಸುತ್ತದೆ.

ಗುರುಮಠಕಲ್ ಪಿಎಸ್ಐ ಹಾಗೂ ಸಿಪಿಐ ಅವರು ಭ್ರಷ್ಟಾಚಾರ ಮಾಡಿದ ಬಗ್ಗೆ ಕೇಳಿದರೆ, ಕೋಲಿ ಸಮಾಜದ ಅಧಿಕಾರಿಗಳನ್ನು ನಾನು ಟಾರ್ಗೆಟ್ ಮಾಡುತ್ತಿದ್ದೇನೆ ಎಂದು ಸಮಾಜದ ಜಿಲ್ಲಾಧ್ಯಕ್ಷರು ಆರೋಪ ಮಾಡುತ್ತಿದ್ದಾರೆ. ಹಿಂದೆ ಯರಗೋಳದಲ್ಲಿ ನಿಮ್ಮ ಸಮಾಜದ ಯುವಕನ ಮೇಲೆ ಪಿಎಸ್ಐ ಹಲ್ಲೆ ಮಾಡಿದಾಗ ಈ ದೇಶದ ಮಾಜಿ ಪ್ರಧಾನಿ ದೇವೇಗೌಡರು ಯಾದಗಿರಿ ಪೊಲೀಸ್ ಠಾಣೆ ಮುಂದೆ ಧರಣಿ ಕುಳಿತರು. ಆಗ ನಿಮಗೆ ಸಮಾಜ ನೆನಪಾಗಲಿಲ್ಲವೇ? ಆ ಪೊಲೀಸ್ ಅಧಿಕಾರಿ ಸ್ವತಃ ನನ್ನ ಸಮಾಜದವರಾಗಿದ್ದರೂ ನಾನು ಕೋಲಿ ಸಮಾಜದ ಪರವಾಗಿ ನಿಂತಿದ್ದೆ. ನಾಗರತ್ನ ಅನಪುರ ಅವರು ಯಾದಗಿರಿ ನಗರಸಭೆ ಅಧ್ಯಕ್ಷರಾಗಲು ನಮ್ಮ ತಂದೆ ದಿ.ನಾಗನಗೌಡ ಶ್ರಮಿಸಿದ್ದಾರೆ

ಎಂದು ಕಂದಕೂರ ಹಿಂದಿನ ಇತಿಹಾಸ ಮೆಲಕು ಹಾಕಿದರು.

ಹಂಪಣ್ಣ ಮತ್ತು ಸೋಮಣ್ಣ ಅವರು ಯಾವುದೇ ಅಪೇಕ್ಷೆ ಬಯಸದೆ ನಮ್ಮ ಪಕ್ಷಕ್ಕೆ ಬಂದಿದ್ದಾರೆ. ಗ್ರಾಮದಲ್ಲಿನ ಸೇತುವೆ ನಿರ್ಮಾಣಕ್ಕೆ ಅಭಿವೃದ್ಧಿಗೆ 1.20 ಕೋಟಿ ರೂ. ಬಿಡುಗಡೆ–ಯಾಗಿದ್ದು ಶೀಘ್ರದಲ್ಲಿ ಕಾಮಗಾರಿ ಆರಂಭಗೊಳ್ಳಲಿದೆ. ಅಲ್ಲದೆ, ಅತೀ ಶೀಘ್ರದಲ್ಲಿ ಗ್ರಾಪಂ, ಜಿಪಂ, ತಾಪಂ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ಎದುರಾಗಲಿದ್ದು, ಕಾರ್ಯಕರ್ತರು ಈ ಚುನಾವಣೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಸಲಹೆ ನೀಡಿದರು. ಅಲ್ಲಿಪುರ ಗ್ರಾಮಕ್ಕೆ ಹೊಸ ಶಾಲಾ ಕಟ್ಟಡ, ಸೇತುವೆ, ಮುಖ್ಯರಸ್ತೆಯಿಂದ ಹೋರುಂಚಾ ಮತ್ತು ಯಡ್ಡಳ್ಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗೆ 3 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ನಮ್ಮ ತಂದೆಯವರಾಗಲಿ, ನಾನಾಗಲಿ ಅಧಿಕಾರಕ್ಕೆ ಬಂದ ನಂತರ ದ್ವೇಷದ ರಾಜಕೀಯ ಮಾಡುವುದನ್ನು ಬಿಟ್ಟಿದ್ದೇವೆ. ದಿ.ನಾಗನಗೌಡ ಹಾಗೂ ದಿ.ಸದಾಶಿವರಡ್ಡಿ ಕಂದಕೂರ ಅವರು ನೂರಾರು ಕೇಸ್ ಗಳನ್ನು ಮೈಮೇಲೆ ಎಳೆದುಕೊಂಡರೂ ಸಹ ಜನರ ಸಂಕಷ್ಟಗಳಿಗೆ ನೆರವಾಗಿದ್ದಾರೆ ಎಂದು ತಿಳಿಸಿದರು. ಪಕ್ಷದ ಜಿಲ್ಲಾದ್ಯಕ್ಷ ಸುಭಾಶ್ಚಂದ್ರ ಕಟಕಟಿ ಮಾತನಾಡಿ, ಶಾಸಕ ಶರಣಗೌಡರು ಮತಕ್ಷೇತ್ರದ ಅಭಿವೃದ್ಧಿಯನ್ನೇ ತನ್ನ ಉಸಿರನ್ನಾಗಿಸಿಕೊಂಡಿದ್ದಾರೆ. ಕ್ಷೇತ್ರದ ಸಮಸ್ಯೆಗಳನ್ನು ವಿಧಾನಸಭೆ ಅಧಿವೇಶನದಲ್ಲಿ ಬಿಚ್ಚಿಟ್ಟು ಸರ್ಕಾರದ ಗಮನ ಸೆಳೆಯುವ ಕೆಲಸ ಮಾಡುತ್ತಿದ್ದಾರೆ. ನಮ್ಮ ನಾಯಕರ ಉತ್ತಮ ಕಾರ್ಯಗಳನ್ನು ಮೆಚ್ಚಿದ ಇಂದು ಅನೇಕರು ಬೇರೆ, ಬೇರೆ ಪಕ್ಷ ತೊರೆಸು ಜೆಡಿಎಸ್ ಸೇರ್ಪಡೆಯಾಗುತ್ತಿದ್ದಾರೆ ಎಂದರು. ಕ್ಷೇತ್ರದಲ್ಲಿ ಸತತ 5 ದಶಕ ಆಳಿದ ದೊಡ್ಡ ದೊಡ್ಡವರು ಗುರಮಠಕಲ್ ಅಭಿವೃದ್ಧಿಯನ್ನು ಮರೆತರು. ಆದರೆ, ದಿ.ನಾಗನಗೌಡ ಕಂದಕೂರ ಹಾಗೂ ಶಾಸಕ ಶರಣಗೌಡ ಕಂದಕೂರ ಅವರು ಜನರ ಆಶೋತ್ತರಗಳಿಗೆ ಸ್ಪಂದಿಸುವ ಕೆಲಸ ನಿರಂತರ ಮಾಡುತ್ತಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ದೊಡ್ಡಣಗೌಡ ಹಾದಿಮನಿ ಅರಿಕೇರಾ, ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಕೋಟಗಿರಿ, ತಾಪಂ ಮಾಜಿ ಅಧ್ಯಕ್ಷ ಈಶ್ವರ ನಾಯಕ, ಮುಖಂಡರಾದ ಭೋಜನಗೌಡ, ಸೋಮನಗೌಡ, ಶಾಂತಪ್ಪ ಜಾಧವ್, ವಿಠ್ಠಲ್ ಜಾಧವ, ಸಿದ್ದು ಅಚ್ಚೋಲಾ, ನಾಗರಡ್ಡಿ ಕೆ.ಹೊಸಳ್ಳಿ, ಹಂಪಯ್ಯಾ, ಸೋಮಣ್ಣ ಬಡಿಗೇರಾ, ಕಾಶಪ್ಪ, ಸಿದ್ದಪ್ಪ ಹೋರುಂಚಾ, ಶಿವಯೋಗಿ, ಬಸ್ಸನಗೌಡ ಕ್ಯಾಸಪನಳ್ಳಿ, ಅಯ್ಯನಗೌಡ ಕ್ಯಾಸಪನಳ್ಳಿ, ಅಶೋಕರಡ್ಡಿ ಪಾಟೀಲ್, ಗುರು ರಾಠೋಡ್ ಅಲ್ಲಿಪುರ, ಚಂದ್ರುಗೌಡ ಸೈದಾಪುರ, ಗಿರಿನಾಥರಡ್ಡಿ ಚಿಂತಗುಂಟಾ, ಚಂದಪ್ಪ ನಾಟೇಕಾರ, ಸಾಹೇಬಗೌಡ ಅಲ್ಲಿಪುರ, ಮರೆಪ್ಪ ಜಡಬೊ, ಗಂಗಾಧರ ತಳವಾರ, ಮಹಿಪಾಲರಡ್ಡಿ ಹೋರುಂಚಾ, ವೆಂಕೋಬಾ, ಮೂರ್ತೆಪ್ಪ ವಡ್ನಳ್ಳಿ, ಹಣಮಂತ, ವಾಚು ರಾಠೋಡ, ಸಾಬಣ್ಣ ರಾಮತೀರ್ಥ, ಶಿವಣ್ಣ ಹಿರೇಕೆರಿ, ಹಾಜಮೀಯಾ ಯರಗೋಳ, ವಿಶ್ವನಾಥ ರೆಡ್ಡಿ, ಗೋಪಾಲ ನಾಯಕ್ ಇದ್ದರು. ಪಕ್ಷ ಸೇರ್ಪಡೆಗೊಂಡ ಪ್ರಮುಖರಾದ

ನಾಗಪ್ಪ ಸದರ, ಶಿವಪ್ಪ ಕಲಾಲ್, ಬಸವರಾಜ ಮಡಿವಾಳ್, ತಾಯಪ್ಪ ಕುರಬರ, ಗ್ರಾಪಂಸದಸ್ಯ ಕಾಶಪ್ಪ, ಭೀಮರಾಯ ಹೊಸ ಕುರಬರ, ವಿಜಯ ತಳವಾರ, ಮೋನೇಶ ಕುಂಬಾರ, ಚಿದಾನಂದ ಕಲಾಲ, ಅಶೋಕಕುಂಬಾರ, ಭೀಮಣ್ಣ ನಾಟೇಕಾರ, ರಾಮುಲು, ತೇಜು, ರಂಗಪ್ಪ, ರಮೇಶ, ಭಾಗಣ್ಣ ಕಲಾಲ್, ಕೃಷ್ಣ ಮಡಿವಾಳ, ಲಕ್ಷ್ಮಣ ಸದರ ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆಯಾದರು.




### 2028ಕ್ಕೆ ಜನರ ಬಳಿ ಲೆಕ್ಕಪತ್ರ ಇಡೋಣ

2023ರಲ್ಲಿ ನಮ್ಮ ತಂದೆ ಮಾಡಿದ್ದ ಜನಪರ ಕೆಲಸ ಮುಂದಿಟ್ಟು ಜನರ ಬಳಿ ಹೋದಾಗ ನನ್ನನ್ನು ಗೆಲ್ಲಿಸಿದ್ದಾರೆ. ಬರುವ ವಿಧಾನಸಭೆ ಚುನಾವಣೆಗೆ ಇನ್ನೂ ಎರಡು ವರ್ಷ ಸಮಯವಿದೆ. 2028ಕ್ಕೆ ನಾನು ಮಾಡಿದ ಕೆಲಸಗಳ ಬಗ್ಗೆ ನೀವು ಬನ್ನಿ,ನಾನು ಬರುತ್ತೇನೆ. ಜನರೇ ಲೆಕ್ಕಪತ್ರ ಮಾಡುತ್ತಾರೆ ಎಂದ ಶಾಸಕ ಶರಣಗೌಡ, ನಮ್ಮ ವಿರೋಧಿಗಳು ಎಷ್ಟೇ ನಿಂದಿಸಿದರೂ ಜನರ ಹೃದಯದಲ್ಲಿ ನಾನಿದ್ದೇನೆ. ಅಧಿಕಾರಿಗಳು ಭ್ರಷ್ಟಾಚಾರ ಮಾಡುತ್ತಿರುವಾಗ ಅದನ್ನು ಪ್ರಶ್ನಿಸಲು ಆಗೋಲ್ಲ ಎಂದರೆ ನಾನು ಶಾಸಕನಿದ್ದರೂ ಏನು ಪ್ರಯೋಜನ ಎಂದರು.

### 2028 ಕ್ಕೆ ಮತ್ತೇ ಕುಮಾರಸ್ವಾಮಿ ಸಿಎಂ: ಶಾಸಕ ಶರಣಗೌಡ ಕಂದಕೂರ ಭವಿಷ್ಯ

ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಪಕ್ಷವೇ ಮುಂದಿನ 2028 ರಲ್ಲಿ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತದೆ.ಅಷ್ಟೇ ಅಲ್ಲ ಹಾಲಿ ಕೇಂದ್ರ ಮಂತ್ರಿ ಕುಮಾರಸ್ವಾಮಿ ಅವರೇ ಮುಖ್ಯಮಂತ್ರಿಗಳಾಗುವುದು ಖಡಾ ಖಂಡಿತವೆಂದು ಶಾಸಕ ಶರಣಗೌಡ ಕಂದಕೂರ ಹೇಳಿದರು. ಗುರುಮಠಕಲ್ ಮತಕ್ಷೇತ್ರದ ಅಲ್ಲಿಪುರ ಗ್ರಾಮದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವಿವಿಧ ಪಕ್ಷಗಳ ನೂರಾರು ಜನರನ್ನು ಜೆಡಿಎಸ್ ಪಕ್ಷಕ್ಕೆ ಸೇರಿಕೊಂಡು ಮಾತನಾಡಿದ ಅವರು, ನಮಗೆ ಎಷ್ಟು ಸಿಟ್ ಗಳು ಬರುತ್ತೆವೆ ಎಂಬುವುದು ಮುಖ್ಯವಲ್ಲ, ಆದರೆ ನಮ್ಮ ಮೈತ್ರಿ ಗಾಡವಾಗಿದ್ದರಿಂದ ಸಿಎಂ ಆಗುವುದು ಕುಮಾರಸ್ವಾಮಿ ಅವರೇ ಎಂದರು.ಅವರು ಈ ಹಿಂದೆ ಎರಡು ಸಲ ಸಿಎಂ ಆಗಿದ್ದಾಗ ನೀಡಿದ ಅನೇಕ ಜನಪರ ಕೆಲಸಗಳು ಜನರು ಮರೆತ್ತಿಲ್ಲವೆಂದರು. ಜಿಲ್ಲೆಯಲ್ಲಿ ಮಾ.31ರೊಳಗಾಗಿ ಐವತ್ತು ಸಾವಿರ ಸದಸ್ಯತ್ವ ಮಾಡಲೇಬೇಕೆಂದ ಶಾಸಕರು, ಪಕ್ಷದ ಎಲ್ಲ ಘಟಕ, ತಾಲೂಕುಗಳ ರಚನೆ ಆಗಬೇಕೆಂದರು.

# ಮೌಖಿಕ ನೈರ್ಮಲ್ಯದ ಬಗ್ಗೆ ಜಾಗೃತಿ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಸ್ಮೈಲ್ ಫೌಂಡೇಶನ್ ಯಾದಗಿರಿ, ಎಂಎಸ್‌ಡಿ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಯಾದಗಿರಿ, ಶಾಲಾ ಶಿಕ್ಷಣ ಇಲಾಖೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಖಾನಾಪುರ ಗ್ರಾಮ, ವಡಗೇರಾ ತಾಲ್ಲೂಕು ಇವುಗಳ ಜಂಟಿ ಸಹಭಾಗಿತ್ವದಲ್ಲಿ ಮೌಖಿಕ ನೈರ್ಮಲ್ಯ ಮತ್ತು ಹಲ್ಲಿನ ಪೇಸ್ಟ್ ವಿತರಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಖಾನಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ನಿರ್ಮಲಾ ಅವರು ಮಾತನಾಡಿ, ವಿದ್ಯಾರ್ಥಿಗಳು ಮೌಖಿಕ ನೈರ್ಮಲ್ಯದ ಬಗ್ಗೆ ಜಾಗೃತಿ ಮೂಡಿಸಲು ಇಂತಹ ಕಾರ್ಯಕ್ರಮವು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಸ್ಮೈಲ್ ಫೌಂಡೇಶನ್‌ನ ವೈದ್ಯಾಧಿಕಾರಿ ಡಾ. ಯಲ್ಲಪ್ಪ ಕೃಷ್ಣಪ್ಪ ಆದಿನ್, ಎಂಎಸ್‌ಡಿ ಯಾದಗಿರಿ, ಮೌಖಿಕ ನೈರ್ಮಲ್ಯ ಮತ್ತು ನಿಮ್ಮ ಬಾಯಿಯನ್ನು ಸ್ವಚ್ಛವಾಗಿ ಮತ್ತು ರೋಗ ಮುಕ್ತವಾಗಿಡುವ ಅಭ್ಯಾಸ ಮಾಡಬೇಕು, ನಿಮ್ಮ ಹಲ್ಲುಜ್ಜುವುದು ಮತ್ತು ಫ್ಲಾಸ್ ಮಾಡುವುದು, ದಂತ ಎಕ್ಸ್–ರೇ, ಪರೀಕ್ಷೆಗಳು ಮತ್ತು ಶುಚಿಗೊಳಿಸುವಿಕೆಗಾಗಿ ದಂತವೈದ್ಯರನ್ನು ನಿಯಮಿತವಾಗಿ ಭೇಟಿ ಮಾಡಬೇಕು, ಮೌಖಿಕ ನೈರ್ಮಲ್ಯವು ತಡೆಗಟ್ಟುವ ಆರೈಕೆಯಾಗಿದೆ. ಸ್ಮೈಲ್ ಫೌಂಡೇಶನ್‌ನ ಯೋಜನಾ ಸಂಯೋಜಕರಾದ ಅಬ್ದುಲ್ ಶಫೀ ಅಹ್ಮದ್ ಅಧ್ಯಕ್ಷತೆ ವಹಿಸಿ ಮಾತನಾಡಿ

ಬಾಯಿಯ ಆರೋಗ್ಯದ ಮೇಲೆ ಕೇಂದ್ರೀಕರಿಸಿದ್ದು, ಇಡೀ ದೇಹದ ಆರೋಗ್ಯಕ್ಕೂ ಸಂಬಂಧಿಸಿದೆ. ನಿಮ್ಮ ಹಲ್ಲು ಮತ್ತು ಒಸಡುಗಳನ್ನು ಆರೋಗ್ಯವಾಗಿಡುವುದು ದೀರ್ಘಕಾಲೀನ ಒಟ್ಟಾರೆ ಆರೋಗ್ಯದ ಪ್ರಮುಖ ಭಾಗವಾಗಿದೆ. ಯಾದಗಿರಿಯ ಆರೋಗ್ಯ ಇಲಾಖೆಯ ಮೌನೇಶ್ ಪಾಟೀಲ್ ಬೆಳಗೇರಾ, ಸ್ಮೈಲ್ ಫೌಂಡೇಶನ್‌ನ ಸಿಬ್ಬಂದಿ ಅಶ್ವಿನಿ, ವಿನೋದ್ ಕುಮಾರ್, ಸುಮಂಗಲ, ಮೆಹರೂಜಾ ಬೀ, ಶಿಲ್ಪಾ, ಕವಿತಾ, ರೇಣುಕಾ, ವಿಜಯಲಕ್ಷ್ಮಿ, ವೆಂಕಪ್ಪ, ಮರಿಯಪ್ಪ ಮುಂತಾದವರಿದ್ದರು. ಕಾರ್ಯಕ್ರಮದಲ್ಲಿ ಟೂತ್‌ಪೇಸ್ಟ್ ಮತ್ತು ಟೂತ್ ಬ್ರಷ್ ವಿತರಿಸಲಾಯಿತು.

# ಗ್ರಾಪಂ ಆಡಳಿತ ಅಧಿಕಾರಿ ನೇಮಕ ಆದೇಶ ಹಿಂಪಡೆಯಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ
• ಕಮಲನಗರ:

ಗ್ರಾಪಂಆಡಳಿತಅವಧಿಮುಗಿಯುತ್ತಿರುವ ಗ್ರಾಮ ಪಂಚಾಯತಿಗಳಿಗೆ ಈಗಿರುವ ಆಡಳಿತ ಸಮಿತಿಯನ್ನು ಮರು ನೇಮಕ ಮಾಡಲು ತಾಲೂಕಿನ ಮದನೂರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪೂಜಾ ಗುಂಡಪ್ಪಾ ಬೇಲ್ಲೆ ಅವರು ಅವರು ಆಗ್ರಹಿಸಿದ್ದಾರೆ.



ಕರ್ನಾಟಕ ಸರ್ಕಾರವು ಆದೇಶ ಹೊರಡಿಸಿ ಆಡಳಿತಾಧಿಕಾರಿಗಳನ್ನು ನೇಮಿಸುವಂತೆ ಜಿಲ್ಲಾಧಿಕಾರಿಗಳಿಗೆ ಆದೇಶಿಸಿದೆ, ಆದರೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜಾಪ್ರತಿನಿಧಿಗಳಿಗೆ ಅವಕಾಶ ನೀಡದೆ ಅಧಿಕಾರಿಗಳಿಗೆ ಆಡಳಿತನಡೆಸುವಅವಕಾಶನೀಡುವುದು ಪ್ರಜಾಪ್ರಭುತ್ವ ವಿರೋಧಿ ಎಂದು ಮದನೂರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪೂಜಾ ಗುಂಡಪ್ಪಾ ಬೇಲ್ಲೆ ಅವರು ತೀವ್ರವಾಗಿ ಖಂಡಿಸಿದ್ದಾರೆ.

ರಾಜ್ಯ ಸರ್ಕಾರವು ಆದೇಶ ಹೊರಡಿಸಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 8(1)ಬಿ(ಚ) ರನ್ವಯ ಆಡಳಿತಾವಧಿ ಮುಗಿಯುತ್ತಿರುವ ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸುವಂತೆ ಜಿಲ್ಲಾಧಿಕಾರಿಗಳಿಗೆ ಆದೇಶಿಸಿರುತ್ತದೆ. ಆದರೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 8(1)ಬಿ(ಂ) ರ ಅನ್ವಯ ಚುನಾಯಿತರಾಗಲು ಅರ್ಹರಾದ ವ್ಯಕ್ತಿಗಳನ್ನೊಳಗೊಂಡ ಆಡಳಿತ ಸಮಿತಿಯನ್ನು ನೇಮಕ ಮಾಡಲು ಅವಕಾಶವಿರುತ್ತದೆ.

ರಾಜ್ಯ ಸರ್ಕಾರವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜಾಪ್ರತಿನಿಧಿಗಳಿಗೆ ಅವಕಾಶ ನೀಡದೆ, ಅಧಿಕಾರಿಗಳಿಗೆ ಆಡಳಿತ ನಡೆಸುವ ಅವಕಾಶ ನೀಡುವ ಮೂಲಕ ಪ್ರಜಾಪ್ರಭುತ್ವ ವಿರೋದಿ ನಡೆಯನ್ನು ನಡೆಯುತ್ತಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ನೆನಪಿಸಿ, 2020ರಲ್ಲಿ ಕೋವಿಡ್ ಕಾರಣದಿಂದಾಗಿ ಗ್ರಾಮ ಪಂಚಾಯತಿಗಳ ಅವಧಿ ಮುಕ್ತಾಯವಾದಾಗ ಆಡಳಿತ ಸಮಿತಿಯ ಅವಧಿಯನ್ನು ವಿಸ್ತರಿಸಬೇಕೆಂದು ಒತ್ತಾಯಿಸಿದ್ದನ್ನು ಉಲ್ಲೇಖಿಸಿದ್ದಾರೆ.

ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸುವ ಪ್ರಜಾಪ್ರಭುತ್ವ ವಿರೋಧಿ ಆದೇಶವನ್ನು ಹಿಂಪಡೆದು ಕಾಯ್ದೆಯ ಅನ್ವಯ ಆಡಳಿತಾವಧಿ ಕೊನೆಗೊಳ್ಳುತ್ತಿರುವ ಆಡಳಿತ ಸಮಿತಿಯನ್ನು ಪುನರ್ ನೇಮಕ ಮಾಡಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಪದ ಸಂಸ್ಕೃತಿ ಮನೆಯಿಂದಲೇ ಪ್ರಾರಂಭ : ಶಂಭುಲಿಂಗ ಕಾಮಣ್ಣ

• ಮಲ್ಲಮ್ಮ ನುಡಿ ವಾರ್ತೆ,ಭಾಲ್ಕಿ:



ಜನಪದ ಸಂಸ್ಕೃತಿ ಪ್ರಾರಂಭವಾಗುವುದು ಮನೆಯಿಂದಲೇ, ಮನೆಯಲ್ಲಿಯ ಜನರ ನಡೆ, ನುಡಿಗಳ ಜನಪದ ಸಂಸ್ಕೃತಿಯ ಮೂಲವಾಗಿವೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಜಿಲ್ಲಾದ್ಯಕ್ಷ ಪ್ರೊ॥ ಶಂಭುಲಿಂಗ ಕಾಮಣ್ಣ ಹೇಳಿದರು.

ಪಟ್ಟಣದ ನಿರ್ಮಲಾ ಹಲಮಂಡಗೆ ಕ್ರಿಯೇಟಿವ್ ಸ್ಟಡೀಜ್ ಶಾಲೆಯಲ್ಲಿ ಶುಕ್ರವಾರ ನಡೆದ ಸುಗ್ಗಿ, ಹುಗ್ಗಿ, ಸಂಕ್ರಾಂತಿ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜೋಗುಳ ಹಾಡಿನಿಂದ ಪ್ರಾರಂಭವಾದ ಜನಪದ ಸಂಕೃತಿ ನಮ್ಮ ಊಟ ಪಾಠಗಳಲ್ಲಿಯೂ ಮುಂದುವರೆದಿದೆ. ನಿಜವಾದ ಭಾರತ ಹಳ್ಳಿಗಳಲ್ಲಿದೆ, ಶಾಲಾ ವಿದ್ಯಾರ್ಥಿಗಳು ಈ ಹಳ್ಳಿ ಸೊಡಗು ತೋರಿಸಿದ ಪ್ರಾತೆ–ಯೇಕ್ಷಿತಕೆ ಎಲ್ಲರೂ ಮೆಚ್ಚುವಂತಿದೆ ಎಂದು ಹೇಳಿದರು.

> ಮಕ್ಕಳಲ್ಲಿ ಹಳ್ಳಿಯ ಸೊಡಗಿನ ಬಗ್ಗೆ ವಿವಿಧ ರೀತಿಯ ಉಡುಪುಗಳನ್ನು ತೊಡುವುದರೊಂದಿಗೆ ವಿನೂತನವಾಗಿ ಕಾರ್ಯನಿರ್ವಹಿಸಿದ ನಿರ್ಮಲಾ ಹಲಮಂಡಗೆ ಶಾಲೆಯ ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಶ್ರಮ ಮೆಚ್ಚುವಂತಹದ್ದು, ಪ್ರತಿವರ್ಷ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರೊಂದಿಗೆ ಮಕ್ಕಳಲ್ಲಿ ಭಾರತೀಯ ಸಂಸ್ಕೃತಿ ಮೂಡಿಸುವುದು ಪ್ರಶಂಸನಾರ್ಹವಾಗಿದೆ.
>
> **ಮಲ್ಲಿಕಾರ್ಜುನ ಹಲಮಂಡಗೆ,**
> ಅಧ್ಯಕ್ಷ ಅಖಿಲ ಭಾರತ ವೀರಶೈವ ಮಹಾಸಭಾ ಭಾಲ್ಕಿ ಘಟಕ.

ಕನ್ನಡ ಸಾಹಿತ್ಯ ಪರಿಷತ್ ರಾಜ್ಯ ಪ್ರತಿನಿಧಿ ಪ್ರೊ॥ ಮಲ್ಲಮ್ಮಾ ಆರ್ ಪಾಟೀಲ ಮಾತನಾಡಿ, ಸಂಕ್ರಾಂತಿ ಹಬ್ಬ ಸುಗ್ಗಿಯ ಹಬ್ಬವಾಗಿದೆ. ತೆನೆಗಳು ತುಂಬಿಕೊಂಡಿರುವ ಭೂತಾಯಿಯ ಸೀಮಂತ ಹಬ್ಬವೇ ಸಂಕ್ರಾಂತಿ ಹಬ್ಬವಾಗಿದೆ. ಮಣ್ಣಿನಲ್ಲಿ ನಾವು ಮಣ್ಣಾಗಿ ದುಡಿದಾಗ ಭೂತಾಯಿ ಭೂತಾಯಿ ನಮಗೆ ಸಾಕಷ್ಟು ಉತ್ಪನ್ನ ನೀಡುವಳು ಎಂದು ಹೇಳಿದರು. ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಶಿಕ್ಷಕಿ ಮೀನಾಕ್ಷಿ ಪಾಟೀಲ ಪ್ರಾಸ್ತಾವಿಕ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಅಮರ ಹಲಮಂಡಗೆ ಶಿಕ್ಷಣ ಸಂಸ್ಥೆಯ ಕಾರ್ಯಕಲಾಪಗಳ ಬಗ್ಗೆ ಮಾಹಿತಿ ನೀಡಿದರು. ಇದೇವೇಳೆ ಶಾಲಾ ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಸಿಕೊಡುವುದರೊಂದಿಗೆ, ಹಳ್ಳಿಯ ಸೊಡಗಿನ ಪ್ರಾತೇಕ್ಷಿಕತೆಯನ್ನು ತೋರಿಸುವುದರೊಂದಿಗೆ ವಿನೂತನ ಕಾರ್ಯಕ್ರಮ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಉದ್ಯಮಿ ಸೋಮನಾಥಪ್ಪ ಅಸ್ಟೂರೆ, ಶಿವರಾಜ ಮಲ್ಲೇಶಿ, ತಿಪ್ಪಣ್ಣ ಶಿವಪುರೆ, ಸುಭಾಷ ಹುಲಸೂರೆ, ದಶರಥ ಔರಾದೆ, ಆರುಷ ಚಿಲಶೆಟ್ಟಿ ಉಪಸ್ಥಿತರಿದ್ದರು.

# ಮಹಾಯೋಗಿ ವೇಮನರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಿ: ಶಾಸಕ ಡಾ.ಶಿವರಾಜ ಎಸ್.ಪಾಟೀಲ್

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಸಾಮಾನ್ಯ ಜೀವನ ನಡೆಸಿದ ಮಹಾಯೋಗಿ ವೇಮನರ ಜೀವನ ಆದರ್ಶಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಬೇಕು ಎಂದು ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಹೇಳಿದರು.

ಜನವರಿ 19ರ ಸೋಮವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಜನವರಿ 19ರಂದು ಹಮ್ಮಿಕೊಂಡಿದ್ದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರಳ ಸಾಧು ಜೀವನದ ನಡೆಸಿದ ವೇಮನರಂತಹ ಸಾಧನೆ ಮಾಡಿದ ಮಹನೀಯರ ಜಯಂತಿಗಳು ಕೇವಲ ಆಚರಣೆಗೆ ಸೀಮಿತಗೊಳಿಸದೇ ಅವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಬೇಕು ಎಂದರು.

ಈ ಸಮಾಜದ ಬಂಧುಗಳ ಬೇಡಿಕೆಯಂತೆ ಸಿ.ಎ ಸೈಟ್ ನೀಡಿದ್ದೇವೆ. ಮುಂದಿನ ದಿನಗಳಲ್ಲಿ ವೇಮನ ಮಂದಿರ ನಿರ್ಮಾಣವಾಗಲಿದೆ. ವೇಮನ ಸಮುದಾಯ ಭವನ ನಿರ್ಮಾಣಕ್ಕೆ 10 ಲಕ್ಷ ರೂಪಾಯಿಗಳನ್ನು ನೀಡುವುದಾಗಿ ಶಾಸಕರು ಘೋಷಣೆ ಮಾಡಿದರು.



ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ ಅವರು ಮಾತನಾಡಿ, ಮಹಾಯೋಗಿ ವೇಮನರು ಆಧ್ಯಾತ್ಮಿಕ ಜೀವನಕ್ಕೆ ಬರಲು ಹೇಮರೆಡ್ಡಿ ಮಲ್ಲಮ್ಮ ಅವರು ಕಾರಣರಾದರು. ಸಮಾಜದ ಏಳಿಗೆಗೆ ಅವರು ಶ್ರಮಿಸಿದ್ದು, ಎಲ್ಲ ಭಾರತೀಯರು ಸೇರಿ ವೇಮನ ಜಯಂತಿ ಆಚರಣೆ ಮಾಡಬೇಕು. ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನ ಆಚಾರ, ವಿಚಾರಗಳನ್ನು ಇಂದಿನ ಪೀಳಿಗೆಗೆ ತಿಳಿಸುವ ಕಾರ್ಯ ನಮ್ಮೆಲ್ಲರಿಂದ ಆಗಬೇಕೆಂದು ಹೇಳಿದರು.

ಸಾಮಾಜಿಕ ಸಮಸ್ಯೆ ಮತ್ತು ಪಿಡುಗುಗಳ ನಿವಾರಣೆಯಲ್ಲಿ ಹಲವಾರು ಶ್ರೇಷ್ಠ ದಾರ್ಶನಿಕರು, ಸಂತರು, ಶರಣರು ಮಹತ್ವದ ಪಾತ್ರವಹಿಸಿದ್ದು, ಅದರಲ್ಲಿ ವೇಮನರ ಕೊಡುಗೆ ಗಮನಾರ್ಹವಾಗಿದೆ. ಅವರ ಆಡು ಭಾಷೆಯ ಪದ್ಯಗಳಲ್ಲಿನ ತತ್ವಗಳು ಮನಪರಿವರ್ತನೆಗೊಳಿಸುವ ಮಾರ್ಗದರ್ಶಿ ಸೂತ್ರಗಳನ್ನು ಹೊಂದಿವೆ ಎಂದರು.

ಈ ವೇಳೆ ಉಪನ್ಯಾಸಕರಾಗಿ ಕಲಬುರಗಿ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷರಾದ ಮಹಿಪಾಲರೆಡ್ಡಿ ಅವರು ಮಾತನಾಡಿ, ತೆಲುಗಿನ ನಾಡಗೀತೆಯಲ್ಲಿ ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನ ಅವರು ಹೆಸರನ್ನು ಉಲ್ಲೇಖಿಸಲಾಗಿದೆ. ರೆಡ್ಡಿ ಎನ್ನುವುದು ನಾಯಕತ್ವದ ಪರ್ಯಾಯ ಹೆಸರಾಗಿದ್ದು, ರೆಡ್ಡಿ ಎಂಬ ಪದವು ರಾಷ್ಟ್ರಕೂಟರ ಆಳ್ವಿಕೆಯಲ್ಲಿ ಚಾಲ್ತಿಗೆ ಬಂದಿದೆ. ಸಮಾಜದವರು ಎಲ್ಲರೂ ಒಗ್ಗಟ್ಟಿನಿಂದ ಸಮಾಜವನ್ನು ಸಂಘಟಿಸಬೇಕು. ಧಾರವಾಹಿ ಮೂಲಕ ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನ ಇತಿಹಾಸವನ್ನು ಜನಸಾಮಾನ್ಯರಿಗೆ ತಿಳಿಸುವ ಕಾರ್ಯವಾಗಬೇಕು ಎಂದರು.

ವೇಮನ ಪದ್ಯಗಳು ಸುಮಾರು 20 ಸಾವಿರ ಇರಬಹುದು ಎಂದು ಹೇಳಲಾಗಿದೆ. 20 ಸಾವಿರ ಪೈಕಿ 6 ಸಾವಿರ ಪದ್ಯಗಳು ಮುದ್ರಣಗೊಂಡಿದ್ದು, ಇನ್ನೂ 14 ಸಾವಿರ ಪದ್ಯಗಳು ಸಂಶೋಧನೆಗೆ ಒಳಪಡಿಸಲಾಗಿದೆ. ಗದಗ ಜಿಲ್ಲೆಯ ಎಸ್.ಆರ್.ಪಾಟೀಲ್ ಅವರು ಸುಮಾರು ನಾಲ್ಕು ಸಾವಿರ ಪುಸ್ತಕಗಳನ್ನು ಕನ್ನಡಕ್ಕೆ ಅನುವಾದ ಮಾಡಿದ್ದಾರೆ. ರೆಡ್ಡಿ ಅಭಿವೃದ್ಧಿ ನಿಗಮ ಹಾಗೂ ರೆಡ್ಡಿ ಪ್ರಾಧಿಕಾರವನ್ನು ಸರ್ಕಾರದಿಂದ ಸ್ಥಾಪಿಸಿಬೇಕೆಂದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ಅತಿಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ವಿವಿಧ ಗಣ್ಯರಿಂದ ವಿದ್ಯಾರ್ಥಿಗಳಾದ ಸ್ಫೂರ್ತಿ ತಂದೆ ನರಸಿಂಹ ರೆಡ್ಡಿ, ಸಾಯಿ ರಘುಪತಿ ರೆಡ್ಡಿ, ಆಕಾಂಕ್ಷಾ ರೆಡ್ಡಿ ತಂದೆ ಪ್ರಕಾಶ್ ರೆಡ್ಡಿ, ಅನನ್ಯ ತಂದೆ ವಿಕ್ರಮ್ ರೆಡ್ಡಿ, ಕೀರ್ತಿ ತಂದೆ ಪ್ರಾಣೇಶ್ ರೆಡ್ಡಿ ಅವರಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದೀಶ್, ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಾ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್, ಸಮಾಜದ ಮುಖಂಡರಾದ ಜಿ.ರಾಮಚಂದ್ರ ರೆಡ್ಡಿ, ಅಚ್ಚುತ್ ರೆಡ್ಡಿ, ಡಾ.ಭೀಮನಗೌಡ, ಚಂದ್ರಶೇಖರ ರೆಡ್ಡಿ, ಭೀಮೇಶ್ ನಾಯ್ಕ್, ರಾಮನಗೌಡ ಏಗನೂರು, ಕೇಶವ ರೆಡ್ಡಿ, ದಂಡಪ್ಪ ಬಿರಾದಾರ್ ಸೇರಿದಂತೆ ಇತರರು ಇದ್ದರು.

# ಪ್ರೀಮಿಯರ್ ಲೀಗ್ ಟೂರ್ನಮೆಂಟ್



• **ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:**

ತಾಲೂಕಿನ ಹುನಕುಂಟಿ ಗ್ರಾಮದ ದ್ಯಾಮಮ್ಮ ದೇವಿ ಜಾತ್ರಾ ಮಹೋತ್ಸವ ನಿಮಿತ್ಯ ಸೋಮವಾರ ಹುನಕುಂಟಿ ಪ್ರೀಮಿಯರ್ ಲೀಗ್ ಕ್ರಿಕೇಟ್ ಟೂರ್ನಮೆಂಟ್ ಆರಂಭವಾಯಿತು.

ಸೋಮವಾರದಿಂದ ಎಂಟು ದಿನಗಳ ಕಾಲ ನಡೆಯಲಿರುವ' ಟೂರ್ನಮೆಂಟ್‌ನಲ್ಲಿ ಎಂಟು ತಂಡಗಳು ಪಾಲ್ಗೊಂಡಿವೆ. ವಿಜೇತ ತಂಡಗಳಿಗೆ ಪ್ರಥಮ ಬಹುಮಾನವಾಗಿ ರೂ.21,111 ಮತ್ತು ಟ್ರೋಫಿ, ದ್ವಿತೀಯ ಬಹುಮಾನವಾಗಿ

ರೂ.15,111 ಮತ್ತು ಟ್ರೋಫಿ, ತೃತೀಯ ಬಹುಮಾನವಾಗಿ ರೂ.11,111 ಮತ್ತು ಟ್ರೋಫಿ, ಚತುರ್ಥ ಬಹುಮಾನವಾಗಿ ರೂ.7,111 ಮತ್ತು ಟ್ರೋಫಿ ನೀಡಲಾಗುವುದು. ಕ್ರೀಡಾಪಟುಗಳು ಕ್ರೀಡಾಮನೋಭಾವದಿಂದ ಟೋರ್ನಮೆಂಟ್‌ನಲ್ಲಿ ಪಾಲ್ಗೊಳ್ಳಬೇಕು. ಎಂದು ಕೆಪಿಸಿಸಿ ಪದವೀಧರ ವಿಭಾಗದ ಜಿಲ್ಲಾಧ್ಯಕ್ಷ ಸಂಜೀವಪ್ಪ ಛಲವಾದಿ ಕರೆ ನೀಡಿದರು.

ಮುಖಂಡರಾದ ಪರಸಪ್ಪ ಇಂದ್ವಾರ, ಶರಣಗೌಡ ಮಾಲಿಪಾಟೀಲ್, ಕಲ್ಲಪ್ಪ ದೇವರಮನಿ, ಬಸವರಾಜ ಕಿಲಾರಟ್ಟಿ, ಜಗದೀಶ ದೋಟಿಹಾಳ, ಶರಣಬಸವ ವಕೀಲರು, ಶರಣಪ್ಪ ಕಂದಗಲ್ ಸೇರಿ ಇತರರಿದ್ದರು.

# ಮಧ್ಯಸ್ಥದಾರರ: ಪ್ರಸ್ತಾವನೆಗಳಿಗೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಬಳ್ಳಾರಿ ಉಪವಿಭಾಗ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ವತಿಯಿಂದ 2026-27 ರಿಂದ 2028-29 ನೇ ಸಾಲಿಗೆ ಸಹಕಾರ ಸಂಘಗಳ ಗೌರವ ಮಧ್ಯಸ್ಥದಾರರನ್ನು ನೇಮಿಸುವ ಸಂಬಂಧ ನವೀಕರಣ ಹಾಗೂ ಹೊಸದಾಗಿ ಗೌರವ ಮಧ್ಯಸ್ಥರಾಗ ಬಯಸುವ ಜಿಲ್ಲೆಯ ಆಸಕ್ತ ವಕೀಲರಿಂದ ನಿಗದಿತ ನಮೂನೆಯಲ್ಲಿ ಪ್ರಸ್ತಾವನೆಗಳಿಗೆ ಆಹ್ವಾನಿಸಲಾಗಿದೆ ಎಂದು ಬಳ್ಳಾರಿ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಅಧಿವೇಶನದಲ್ಲಿ ಬಲ್ಡೋಟಾ ವಿರೋಧಿ ಹೋರಾಟ ಪ್ರಸ್ತಾಪ: ನಾರಾಯಣಸ್ವಾಮಿ




• **ಮಲ್ಲಮ್ಮನುಡಿ ವಾರ್ತೆ ಕೊಪ್ಪಳ:**

ಬಸಾಪುರ ಕೆರೆ ಸಮುದಾಯದ ಆಸ್ತಿ ಅದನ್ನು ಯಾವುದೇ ಸರಕಾರ ಕಟ್ಟಿಲ್ಲ ಸರಕಾರ ಅದನ್ನು ಮಾರಲು ಬರುವುದಿಲ್ಲ ಕೂಡಲೇ ಅದನ್ನು ತೆರವುಗೊಳಿಸಬೇಕು ಈ ಕುರಿತು ಅಧಿವೇಶನದ ನಂತರವೂ ಕೂಡ ಹೋರಾಟ ಮುಂದುವರಿಸುವುದಾಗಿ ಹೇಳಿದರು. ಜನರ ಆರೋಗ್ಯ ಬಹಳ ಮುಖ್ಯ ಸಿಎಂ ಹಾಗೂ ಉದ್ಯಮ ಸಚಿವರು ಕೇಂದ್ರದತ್ತ ಬೆಟ್ಟು ಮಾಡುತ್ತಿರುವುದು ಸರಿಯಲ್ಲ ಇವರು ರದ್ದುಗೊಳಿಸಬೇಕು, ಕೇಂದ್ರದಲ್ಲಿ ಏನಾದರೂ ಇದ್ದರೂ ಅದನ್ನು ನಾವೂ ಗಮನಿಸುತ್ತೇವೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಅವರು ಭರವಸೆ ನೀಡಿದರು.

ಅವರು ನಗರ ಮತ್ತು ಭಾಗ್ಯನಗರ ಹಾಗೂ 20 ಭಾದಿತ ಹಳ್ಳಿಗಳ ಸಮಸ್ಯೆಯನ್ನ ಮುಂದಿಟ್ಟುಕೊಂಡು ನಡೆಸುತ್ತಿರುವ ಬಲ್ಡೋಟಾ ಹಾಗೂ ಇತರೆ ವಿಷಕಾರಕ ಕಾರ್ಖಾನೆಗಳ ವಿರೋಧಿ ಹೋರಾಟದ 78ನೇ ದಿನ ಬೆಂಬಲ ನೀಡಿ ಮಾತನಾಡಿ, ಜನವರಿ 22ರಂದು ನಡೆಯುವ ವಿಶೇಷ ಅಧಿವೇಶನದಲ್ಲಿ ಪ್ರಸ್ತಾಪ ಮಾಡಿ ಸರಕಾರವನ್ನ ಎಚ್ಚರಿಸುವುದಾಗಿ ಹೇಳಿದರು.

ಮುಂದುವರೆದು ಮಾತನಾಡಿದ ಅವರು ಈ ಹೋರಾಟಕ್ಕೆ ನಮ್ಮ ಬೆಂಬಲ ಇದೆ ಮತ್ತು ಈಗಾಗಲೇ ಹೋರಾಟವನ್ನು ಮುಂದುವರಿಸಿದ್ದೇವೆ ಅದನ್ನು ತೀವ್ರಗೊಳಿಸುವ ಕೆಲಸವನ್ನು ಬರುವ ದಿನಗಳಲ್ಲಿ ಮಾಡುತ್ತೇವೆ. ಸ್ಥಳೀಯ ನಾಯಕರು ಹೆಚ್ಚಿನ ಮುತುವರ್ಜಿವಹಿಸಿ ಜನರ ಜೀವ ಉಳಿಸಬೇಕು ಎಂದು ಆಗ್ರಹಿಸಿದರು.

ನಗರಸಭೆ ಪಕ್ಕದ ವಾಣೀಜ್ಯ ಸಂಕೀರ್ಣದ ಹತ್ತಿರ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ನೇತೃತ್ವದಲ್ಲಿ ನಡೆಯುತ್ತಿರುವ ಅನಿರ್ದಿಷ್ಟ ಧರಣಿ ಹೋರಾಟ 78ನೇ ದಿನದಲ್ಲಿ ಮುಂದುವರೆಯಿತು. ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ, ಈ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲು ನಿರ್ಧರಿಸಿದ್ದೇವೆ, ಜನಪ್ರತಿನಿಧಿಗಳು ಗವಿಮಠದ ಪೂಜ್ಯರಿಗೆ ಅವಮಾನ ಮಾಡಬಾರದು, ಅವರು ಈ ಭಾಗದ ದಿವ್ಯ ಶಕ್ತಿ, ಅವರಿಗೆ ನೋವು ಕೊಡಬೇಡಿ ಎಂದು ಹೇಳಿದರು.

ಧರಣಿಯಲ್ಲಿ ನಿವೃತ್ತ ಪ್ರಾಚಾರ್ಯ ಬಿ.ಜಿ.ಕರಿಗಾರ, ಎಸ್.ಬಿ.ರಾಜೂರು, ಹಿರಿಯರಾದ ಶಂಭುಲಿಂಗಪ್ಪ ಹರಗೇರಿ, ಜಿ. ಬಿ. ಪಾಟೀಲ್, ಸಂಚಾಲಕರಾದ ಮಲ್ಲಿಕಾರ್ಜುನ ಬಿ.ಗೋನಾಳ, ಮಂಜುನಾಥ ಜಿ. ಗೊಂಡಬಾಳ, ರಾಜೇಶ ಸಸಿಮಠ, ಬಿಜೆಪಿ ಮುಖಂಡರಾದ ಡಾ. ಬಸವರಾಜ ಕ್ಯಾವಟರ್, ಗಣೇಶ ಹೊರತಟ್ನಾಳ, ಕನಕಪ್ಪ ಚಲುವಾದಿ, ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಗ್ಯಾನೇಶ, ಕನಕಮೂರ್ತಿ ಚಲುವಾದಿ, ಹೋರಾಟ ಸಮಿತಿಯ ರವಿ ಕಾಂತನವರ, ಎ. ಎಂ. ಮದರಿ, ಕಾಶಪ್ಪ ಚಲುವಾದಿ, ವಿಜಯಮಹಾಂತೇಶ ಹಟ್ಟಿ, ಕಲ್ಲಮ್ಮ ಯರ್ಾವಣಕಿ, ಶಿವಾನಂದ ಬಡಿಗೇರ, ಶಾಂತಮ್ಮ, ಈರಮ್ಮ ಉಂಡಿ, ಈರಣ್ಣ ವಾಲಿ, ಶಿವಪ್ಪ ಜಲ್ಲಿ, ಮಕ್ಬೂಲ್ ರಾಯಚೂರು ಇತರರಿದ್ದರು.

## ಖೋಖೋ: 28 ತಂಡಗಳು ಭಾಗಿ

# ಉತ್ಸವ 2026ರ ಅಂಗವಾಗಿ ಖೋಖೋ ಸ್ಪರ್ಧೆಗೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಜನವರಿ 19ರಂದು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಖೋಖೋ ಕ್ರೀಡಾ-ಕೂಟಕ್ಕೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಈರೇಶ್ ನಾಯಕ ಅವರು ಚಾಲನೆ ನೀಡಿದರು.



ಜಿಲ್ಲೆಯ ವಿವಿಧ ಶಾಲಾ ಕಾಲೇಜುಗಳಿಂದ ಸುಮಾರು 300ಕ್ಕೂ ಹೆಚ್ಚು ವಿದ್ಯಾರ್ಥಿಗಳ ಸುಮಾರು 28ತಂಡಗಳ ಪೈಕಿ ಪುರುಷರ 16 ತಂಡಗಳು ಮತ್ತು 12 ಮಹಿಳೆಯರ ತಂಡಗಳು ಭಾಗಿಯಾಗಿದ್ದವು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ರಂಗಸ್ವಾಮಿ, ದೈಹಿಕ ಶಿಕ್ಷಣ ಜಿಲ್ಲಾಧ್ಯಕ್ಷರಾದ ಯಂಕಪ್ಪ ಪಿರಂಗಿ,

ರಾಯಚೂರು ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಪರಶುರಾಮ,

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸೂಪರಿಡೆಂಟ್ ಸಂತೋಷ್, ಚಂದ್ರಶೇಖರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿ ಇದ್ದರು.

# ಪ್ರವೇಶಕ್ಕೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾ ಗಾಂಧಿ, ಡಾ.ಬಿ.ಆರ್. ಅಂಬೇಡ್ಕರ್, ಮಾಸ್ತಿ ವೆಂಕಟೇಶ ಅಯ್ಯಂಗಾರ್, ಸಂಗೊಳ್ಳಿ ರಾಯಣ್ಣ, ಕವಿರನ್ನ, ಗಾಂಧಿತತ್ವ, ಶ್ರೀನಾರಾಯಣ ಗುರು ಮುಂತಾದ ವಸತಿ ಶಾಲೆಗಳಿಗೆ 2026-27ನೇ ಸಾಲಿಗೆ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು / ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ವೆಬ್‌ಸೈಟ್ ನಿಂದ ಘೋಷಣಾ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ದಿನಾಂಕ: 25-01-2026 ರಂದು ಸಂಜೆ 4ಗಂಟೆಯೊಳಗೆ ಯಾವುದೇ ವಸತಿ ಶಾಲೆಗಳಿಗೆ ಸಲ್ಲಿಸಿ ಸ್ವೀಕೃತಿ ಪಡೆಯಬಹುದಾಗಿದೆ.

ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ 2,50,000 ರೂ., ಹಿಂದುಳಿದ ವರ್ಗದ ಪ್ರವರ್ಗ 1ಗೆ 2,50,000ರೂ., ಹಾಗೂ ಹಿಂದುಳಿದ ವರ್ಗದ ಪ್ರವರ್ಗ-2ಎ, 2ಬಿ,ಮತ್ತು 3ಬಿಗೆ 1,00,000 ರೂ.ಗಳ ವಾರ್ಷಿಕ ಆದಾಯದ ಮಿತಿ ಇರಬೇಕು.6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು, ಅರ್ಜಿ ಸಲ್ಲಿಸುವ ವಿಧಾನ ಹಾಗೂ ಮಾಹಿತಿ ಪುಸ್ತಕ-2026ವನ್ನು ಪ್ರಾಧಿಕಾರ ವೆಬ್‌ಸೈಟ್ :https://cetonline.karnataka.gov.in/kea/kreis2026 2026 ನಲ್ಲಿ ಮತ್ತು ವಸತಿ ಶಿಕ್ಷಣ ಸಂಸ್ಥೆಗಳ ವೆಬ್ಸೈಟ್ https://kreis.karnataka.gov.in ನಲ್ಲಿ ಪಡೆಯಬಹುದು. ಪರೀಕ್ಷೆಗೆ ಪ್ರವೇಶ ಪತ್ರಗಳನ್ನು ದಿನಾಂಕ: 18-02-2026 ರಿಂದ ಈ ವೆಬ್ ಸೈಟ್‌ಗಳಿಂದ ಆಯಾ ವಸತಿ ಶಾಲೆಯಲ್ಲಿ ಡೌನ್ ಲೋಡ್ ಮಾಡಿಕೊಳ್ಳಬಹುದು.ಸೂಚನೆ: ಅಭ್ಯರ್ಥಿಯು ಈಗಾಗಲೇ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಶಾಲೆಯಿಂದ ರಾಜ್ಯ ಸಂಖ್ಯೆ, ಇತ್ತೀಚಿನ ಭಾವಚಿತ್ರ ಮತ್ತು ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳನ್ನು ಅಥವಾ ಜೆರಾಕ್ಸ್ ಪ್ರತಿಗಳನ್ನು ತೆಗೆದುಕೊಂಡು ಅರ್ಜಿ ಸಲ್ಲಿಸುವ ಸಮಯದಲ್ಲಿ ಸಂಬಂಧಿಸಿದ ವಸತಿ ಶಾಲೆ / ಕಾಲೇಜಿನ ಮುಖ್ಯಸ್ಥರನ್ನು ಸಂಪರ್ಕಿಸಬೇಕು. ದಿನಾಂಕ: 01-03-2026ರ ಭಾನುವಾರ ಬೆಳಿಗ್ಗೆ 11ರಿಂದ ಮಧ್ಯಾಹ್ನ 1 ಗಂಟೆವರೆಗೆ 100 ಅಂಕಗಳಿಗೆ ಪ್ರವೇಶ ಪರೀಕ್ಷೆ ನಡೆಯಲಿದೆ.ವಸತಿ ಶಾಲೆಗಳ ಆಯ್ಕೆಯ ಆದ್ಯತಾ ಕ್ರಮದಲ್ಲಿ ನಮೂದಿಸುವ ಕುರಿತು: ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿ /ವಿದ್ಯಾರ್ಥಿನಿಯರಿಗೆ ಯಾವ ಶಾಲೆಗಳಲ್ಲಿ ದಾಖಲಾತಿ ಬಯಸುತ್ತಾರೋ, ಅಂತಹ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ಆಯ್ಕೆ ಮಾಡಿಕೊಳ್ಳಬೇಕು. ಆದ್ಯತಾ ಕ್ರಮದಲ್ಲಿ ದಾಖಲಿಸುವ ಶಾಲೆಗಳನ್ನು ಮಾತ್ರ ಹಂಚಿಕೆಗೆ ಪರಿಗಣಿಸಲಾಗುವುದು. ಅಭ್ಯರ್ಥಿಗಳು ತಮ್ಮ ಸೀಟು ಹಂಚಿಕೆ ಅವಕಾಶವನ್ನು ಹೆಚ್ಚಿಸಿಕೊಳ್ಳಲು ತಮ್ಮ ಜಿಲ್ಲೆಯಲ್ಲಿರುವ ಕೆಆರ್‌ಇಐಎಸ್‌ನ ಎಲ್ಲಾ ವಸತಿ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ನಮೂದಿಸತಕ್ಕದು.

# 21ರಂದು ವಿದ್ಯುತ್ ವ್ಯತ್ಯಯ

ರಾಯಚೂರು: ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಶಕ್ತಿನಗರ ಉಪ ಕೇಂದ್ರದಲ್ಲಿ ನಿವೇದಿತಾ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜನವರಿ 21ರ ಬೆಳಿಗ್ಗೆ 10ಗಂಟೆಯಿಂದ ಸಂಜೆ 06 ಗಂಟೆವರೆಗೆ ವಿಶಾಲ್ ಕ್ರಾಸ್, ಎಂಪಿಸಿಎಲ್, ಯಾದವ್ ನಗರ, ಮುಖ್ಯದ್ವಾರ ಪ್ರದೇಶ, ರೆಡ್ಡಿ ನಗರ ಸೇರಿದಂತೆ ಸುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ, 27ರಂದು ಸೈಕ್ಲಿಂಗ್

ರಾಯಚೂರು: ರಾಯಚೂರು ಜಿಲ್ಲೆಯಲ್ಲಿ ಫೆಬ್ರವರಿ-2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದ ಅಂಗವಾಗಿ ಜನವರಿ 27ರಂದು ಗಂಟೆಗೆ ಸೈಕ್ಲಾಥಾನ್ ಆಯೋಜನೆ ಮಾಡಲಾಗಿದ್ದು, ಆಸಕ್ತ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸೈಕ್ಲಿಂಗ್ ಮ್ಯಾರಥಾನ್‌ದ ನೋಡಲ್ ಅಧಿಕಾರಿ ಆಗಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರಬಾಬು ಅವರು ತಿಳಿಸಿದ್ದಾರೆ.ಜನವರಿ 27ರ ಬೆಳಗ್ಗೆ 6 ಗಂಟೆಗೆ ಸೈಕ್ಲಾಥಾನ್ ಆಯೋಜನೆ ಮಾಡಲಾಗಿದೆ. ಪ್ರಥಮ ಬಹುಮಾನ 10 ಸಾವಿರ ಹಾಗೂ ದ್ವಿತೀಯ ಬಹುಮಾನ 5 ಸಾವಿರ ರೂ.ಗಳನ್ನು ನೀಡಲಾಗುವುದು. ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾರಿಗಳಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರಬಾಬು ಅವರ ಮೊಬೈಲ್ ಸಂಖ್ಯೆ: 9972316895 ಅಥವಾ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್ ಮೊಬೈಲ್ ಸಂಖ್ಯೆ: 9448427601ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ. ಅಥವಾ ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ ಸಹ ನೊಂದಾಯಿಸಿಕೊಳ್ಳಬಹುದಾಗಿದೆ.

# ಕ್ರೀಡಾ ಇಲಾಖೆಯಿಂದ ಆಯ್ಕೆ ಪ್ರಕ್ರಿಯೆ ಪ್ರಾರಂಭ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಇಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಡೆಸಲ್ಪಡುತ್ತಿರುವ ಕ್ರೀಡಾ ಶಾಲೆ/ ನಿಲಯಗಳಿಗೆ 2026-27ನೇ ಸಾಲಿನ ಪ್ರವೇಶಕ್ಕೆ ಜಿಲ್ಲೆಯ ವಿವಿಧ ತಾಲ್ಲೂಕು ಮಟ್ಟಗಳಲ್ಲಿ ಆಯ್ಕೆ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳು ಭಾಗವಹಿಸಬೇಕೆಂದು ಕೋರಲಾಗಿದೆ.

ಕಿರಿಯರ ವಿಭಾಗದ ಕ್ರೀಡಾ ವಸತಿಶಾಲೆಗಳ ಆಯ್ಕೆಯನ್ನು ಪ್ರಸ್ತುತ 7ನೇ ತರಗತಿ ಅಭ್ಯಾಸ ಮಾಡುತ್ತಿರುವ ಬಾಲಕ/ಬಾಲಕಿಯರಿಗಾಗಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ಫುಟ್‌ಬಾಲ್, ಜಿಮ್ನಾಸ್ಟಿಕ್, ಹಾಕಿ, ಜುಡೋ, ವಾಲಿಬಾಲ್ ಮತ್ತು ಕುಸ್ತಿ ವಿಭಾಗಗಳಲ್ಲಿ ಆಯ್ಕೆಯನ್ನು ನಡೆಸಲಾಗುವುದು.

ಆಯ್ಕೆಯಲ್ಲಿ ಭಾಗವಹಿಸುವವರು ದಿನಾಂಕ: 01-06-2026ರಂದು 14ವರ್ಷದೊಳಗಿರಬೇಕು. ಮತ್ತು 8ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹರಾಗಿರಬೇಕು. ಮತ್ತು ತಾವು ವ್ಯಾಸಾಂಗ ಮಾಡುತ್ತಿರುವ ಶಾಲಾ ಮುಖ್ಯಸ್ಥರಿಂದ ಜನ್ಮ ದಿನಾಂಕ ಪ್ರಮಾಣಪತ್ರ ಹಾಗೂ ವ್ಯಾಸಂಗ ಮಾಡುತ್ತಿರುವ ತರಗತಿಯ ವಿವರಗಳನ್ನೊಳಗೊಂಡ ದೃಢೀಕರಣ ಪತ್ರವನ್ನು ಆಯ್ಕೆ ದಿನದಂದು ಕಡ್ಡಾಯವಾಗಿ ತರಬೇಕು.ವೇಳಾಪಟ್ಟಿ: ಜನವರಿ 21ರ ರಾಯಚೂರು ತಾಲ್ಲೂಕು ಮಟ್ಟದ ಆಯ್ಕೆಯು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರಿನಲ್ಲಿ ನಡೆಯಲಿದೆ.ಆಸಕ್ತರು ಸಂಘಟಿಕರಾದ ಚಂದ್ರಶೇಖರ್ ಅವರ ಮೊಬೈಲ್ ಸಂಖ್ಯೆ: 9886551214ಗೆ ಸಂಪರ್ಕ ಮಾಡಬಹುದಾಗಿದೆ.ಮಾನ್ವಿ ತಾಲ್ಲೂಕು ಮಟ್ಟದ ಆಯ್ಕೆಯು ತಾಲ್ಲೂಕು ಕ್ರೀಡಾಂಗಣ ಮಾನವಿಯಲ್ಲಿ ನಡೆಯಲಿದೆ. ಆಸಕ್ತರು ಸಂಘಟಿಕರಾದ ರಾಮಚಂದ್ರ ಮೊಬೈಲ್ ಸಂಖ್ಯೆ:8861487321ಮೆಹಬೂಬ್: 9611181539 ಅಥವಾ ಮುಕ್ಕಣ್ಣ: 9483042741ಗೆ ಸಂಪರ್ಕ ಮಾಡಬಹುದಾಗಿದೆ.ಜನವರಿ 22ರಂದು ದೇವದುರ್ಗ ತಾಲ್ಲೂಕು ಮಟ್ಟದ ಆಯ್ಕೆಯು ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನಡೆಯಲಿದೆ. ಆಸಕ್ತರು ಸಂಘಟಿಕರಾದ ರಂಗನಾಥ್ ಮೊಬೈಲ್ ಸಂಖ್ಯೆ: 701945947 ಅಥವಾ ಚನ್ನಪ್ಪ ಮೊಬೈಲ್ ಸಂಖ್ಯೆ: 7338647270ಗೆ ಸಂಪರ್ಕ ಮಾಡಬಹುದಾಗಿದೆ.ಸಿಂಧನೂರು ತಾಲ್ಲೂಕು ಮಟ್ಟದ ಆಯ್ಕೆಯು ತಾಲ್ಲೂಕು ಕ್ರೀಡಾಂಗಣ ಸಿಂಧನೂರಿನಲ್ಲಿ ನಡೆಯಲಿದೆ. ಆಸಕ್ತರು ಸಂಘಟಿಕರಾದ ರಾಮಚಂದ್ರ ಮೊಬೈಲ್

# ಗಣರಾಜ್ಯೋತ್ಸವ ಅರ್ಥಪೂರ್ಣ ಆಚರಣೆಗೆ ನಿರ್ಧಾರ

• **ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:**

ಪಟ್ಟಣದ ಸರ್ಕಾರಿ ಕನ್ನಡ ಶಾಲೆ ಮೈದಾನದಲ್ಲಿ ತಾಲೂಕ ಆಡಳಿತದ ವತಿಯಿಂದ ಜನವರಿ 26ರಂದು ಆಚರಿಸಲಿರುವ ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಯಿತು. ಸೋಮವಾರ ಪಟ್ಟಣದ ತಹಸಿಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ತಹಸಿಲ್ದಾರ್ ಡಾ.ವಿನಯಾ ಹೂಗಾರ ಅವರ ಅಧ್ಯಕ್ಷತೆಯಲ್ಲಿ ನಡೆದ ತಾಲೂಕ ಮಟ್ಟದ ಅಧಿಕಾರಿಗಳ ಹಾಗೂ ಗಣ್ಯರ ಪೂರ್ವಭಾವಿ ಸಭೆಯಲ್ಲಿ ಈ ನಿರ್ಧಾರವನ್ನು ತೆಗೆದುಕೊಳ್ಳಲಾಯಿತು. ಈ ಸಂದರ್ಭದಲ್ಲಿ ತಹಸಿಲ್ದಾರ್ ಡಾ.ವಿನಯಾ ಹೂಗಾರ ಅವರು ಮಾತನಾಡಿ ಗಣರಾಜ್ಯೋತ್ಸವ ರಾಷ್ಟ್ರೀಯ ಹಬ್ಬವಾಗಿದ್ದು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಯಾವುದೇ ರೀತಿಯ ಲೋಪಗಳು ಆಗದಂತೆ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿ ಕಾರ್ಯಕ್ರಮದ ಯಶಸ್ವಿಗೆ ಸರ್ವ ಸಮಾಜದ ಗಣ್ಯರ ಸಹಕಾರವನ್ನು ಕೋರಿದರು.ಮುಂದುವರೆದು ಅವರು ಅಧಿಕಾರಿಗಳು ತಮಗೆ ವಹಿಸಿದ ಎಲ್ಲ ಕಾರ್ಯಗಳನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಜನ ಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ



ಆಹ್ವಾನಿಸಲು ಕ್ರಮವಹಿಸಬೇಕು. ಶಾಲಾ ಮಕ್ಕಳಿಂದ ಸಂಸ್ಕೃತಿಕ ಕಾರ್ಯಕ್ರಮ ಆಯೋಜನೆಗೆ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಿಗೆ ಪೂರ್ವದಲ್ಲಿಯೇ ತಿಳಿಸಬೇಕು.ವೇದಿಕೆ ಸಿದ್ಧತೆ, ಆಕರ್ಷಕ ಪಥಸಂಚಲನ, ಸನ್ಮಾನ, ಅಲ್ಪೋಪಹಾರದ ವ್ಯವಸ್ಥೆ, ಭದ್ರತಾ ವ್ಯವಸ್ಥೆ, ಕುಡಿಯುವ ನೀರು, ಸ್ವಚ್ಛತೆ, ದೀಪಾಲಂಕರದ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ನಿಗದಿತ ಸಮಯಕ್ಕೆ ಎಲ್ಲಾ ಅಧಿಕಾರಿಗಳು ಹಾಜರಿರಬೇಕು ಎಂದು ಹೇಳಿದರು. ಅಂದು ಬೆಳಿಗ್ಗೆ 8.30 ಘಂಟೆಗೆ ಕನ್ನಡ ಸರ್ಕಾರಿ ಶಾಲಾ ಮೈದಾನದಲ್ಲಿ ತಾಲೂಕ ಆಡಳಿತದಿಂದ ಧ್ವಜಾರೋಹಣ ನೆರವೇರಿಸಲು ತೀರ್ಮಾನಿಸಲಾಯಿತು. ಸಿ ಆರ್ ಸಿ ರಾಜು ವಿಜಾಪುರ ಕಾರ್ಯಕ್ರಮ ನಿರ್ವಹಿಸಿದರು. ಪೂರ್ವಭಾವಿ ಸಭೆಯಲ್ಲಿ ಪ್ರಮುಖರಾದ ಸಿದ್ದನಗೌಡ ಪಾಟೀಲ ನಾವದಗಿ, ಎಂ.ಜಿ. ಪಾಟೀಲ, ಪ್ರಭುಗೌಡ ಮದರಕಲ್ಲ, ಕಸಾಪ ಅಧ್ಯಕ್ಷ ಆರ್.ಎಲ್.ಕೊಪ್ಪದ, ಕರವೇ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಜೈ ಭೀಮ್ ಮುತ್ತಗಿ, ಗಂಗಾಧರ ಕಸ್ತೂರಿ, ಮಾಸೂಮಸಾಬ ಕೆಂಭಾವಿ,ಆರ್. ಎಂ.ಡೋಣಿ,ಸಂಗನಗೌಡ ಅಸ್ಕಿ, ಶಿವಣ್ಣ ಕಡಕೋಳ, ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ, ಇಸಿಓ ಸುರೇಶ ಹಿರೇಮಠ, ಡಾ. ಅನೀಲಕುಮಾರ ಇರಾಜ, ಎ. ಎಸ್.ಐ.ಡಿ.ಎಚ್.ಬಾಗೇವಾಡಿ, ಶಿರಸ್ತೆದಾರ ಜೆ.ಆರ್.ಜೈನಾಪೂರ ಹಾಗೂ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ದೇಶ ವಿದೇಶಿ ಪ್ರವಾಸಿಗರಿಗೆ ಆದ್ಯತೆ ಕೊಡಿ : ಸಿಎಂ ಸಿದ್ದರಾಮಯ್ಯ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ :

ಇಂದಿನ ದಿನಗಳಲ್ಲಿ ಹೊಟೇಲ್ ಉದ್ಯಮ ನಡೆಸುವುದು ಅಷ್ಟು ಸುಲಭದ ಮಾತಲ್ಲ. ಐತಿಹಾಸಿಕ ಪ್ರವಾಸಿತಾಣವಾದಬಾದಾಮಿಯಲ್ಲಿ ಯುವ ಉದ್ಯಮಿ ಹೊಳಬಸು ಶೆಟ್ಟರ ನೇತೃತ್ವದ ಹೊಟೇಲ್ ಬಾದಾಮಿ ಕೋರ್ಟ್ ಮತ್ತು ಶ್ರೀಜಿತ್ ರೇಸಾರ್ಟ್ ಉದ್ಯಮ, ಇಲ್ಲಿಗೆ ಬರುವ ದೇಶ–ವಿದೇಶಿ ಪ್ರವಾಸಿಗರಿಗೆ ವಿಶೇಷ ಆತಿಥ್ಯ ನೀಡಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾರೈಸಿದರು.

ಪಟ್ಟಣದರೈಲ್ವೆನಿಲ್ದಾಣ ರಸ್ತೆಯಲ್ಲಿ ಆಧುನೀಕರಣಗೊಂಡ ಹೊಟೇಲ್ ಬಾದಾಮಿಕೋಟ್ ಉದ್ಘಾಟನೆಹಾಗೂ ಶ್ರೀಜಿತ್ ರೇಸಾರ್ಟ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಹೊಟೇಲ್ ಬಾದಾಮಿ ಕೋರ್ಟ್‌ಗೆ, ಹಲವು ವರ್ಷಗಳ ಇತಿಹಾಸವಿದೆ. ಇಲ್ಲಿಗೆ ಬರುವ ಸಾವಿರಾರು, ದೇಶ–ವಿದೇಶಿ ಪ್ರವಾಸಿಗರಿಗೆ, ಉತ್ತರಕರ್ನಾಟಕದ ವಿಶೇಷ ಆತಿಥ್ಯ ನೀಡಿದ ಖ್ಯಾತಿಯೂ ಇದಕ್ಕಿದೆ. 25ರಿಂದ 30 ವರ್ಷಗಳ ಹಿಂದೆ ಇಲ್ಲಿಗೆ ಬರುವ ಪ್ರವಾಸಿಗರಿಗೆ ಅಷ್ಟೊಂದು ಅನುಕೂಲ ಇರಲಿಲ್ಲ. ಆ ಕೊರಗು ನೀಗಿಸಲು, ಅಖಂಡ ವಿಜಯಪುರ ಜಿಲ್ಲೆಯಲ್ಲಿ ರಫೀಕ ಹುಸೈನ್ ಅವರು 1994ರಲ್ಲಿ ಈ ಹೊಟೇಲ್ ಆರಂಭಿಸಿ, ಪ್ರವಾಸಿಗರಿಗೆ ಅನುಕೂಲ ಕಲ್ಪಿಸಿದ್ದರು ಎಂದು ಸ್ಮರಿಸಿದರು.ನಾನು ವಿರೋಧ ಪಕ್ಷದ ನಾಯಕನಾಗಿದ್ದಾಗ, ಸಚಿವನಾಗಿದ್ದಾಗ ಹಾಗೂ ಬಾದಾಮಿ ಕ್ಷೇತ್ರದ ಶಾಸಕನಾಗಿದ್ದಾಗ ಹಲವಾರು ಬಾರಿ ಈ ಹೊಟೇಲ್‌ಗೆ ಬಂದು, ವಿಶ್ರಾಂತಿ ಪಡೆದು ಹೋಗಿದ್ದೇನೆ. ಕಳೆದ 2020ರಲ್ಲಿ ಹೊಳಬಸು ಶೆಟ್ಟರ ಅವರು ಈ ಹೊಟೇಲ್ ಮುನ್ನೆಡೆಸುವ ಜವಾಬ್ದಾರಿ ಪಡೆದಿದ್ದು, ಇದೀಗ ದೇಶ–ವಿದೇಶಿ ಪ್ರವಾಸಿಗರಿಗೆ ಆತಿಥ್ಯ ನೀಡಲು ವಿಶೇಷವಾಗಿ ನವೀಕರಿಸಿದ್ದಾರೆ. ಅಧುನಿಕ ಜೀವನಶೈಲಿಗೆ ತಕ್ಕಂತೆ ಹೊಟೇಲ್ ನಿರ್ಮಿಸಿದ್ದಾರೆ. ಇದು, ಬಾದಾಮಿ ಹಾಗೂ ಬಾಗಲಕೋಟೆ ಜಿಲ್ಲೆಗೆ ಬರುವ ಪ್ರವಾಸಿಗರಿಗೆ ಮನೆಯ ವಾತಾವರಣದ ವಿಶ್ರಾಂತಿಯ ನೆಲೆಯಾಗಿ ರೂಪುಗೊಳ್ಳಲಿ ಎಂದರು.

**ರೇಸಾರ್ಟ್ ಭೂಮಿಪೂಜೆ :**

ಬಾದಾಮಿ, ಒಂದು ಐತಿಹಾಸಿಕ ಪ್ರವಾಸಿ ತಾಣವಾಗಿದ್ದು, ಇಲ್ಲಿಗೆ ಬರುವ ಪ್ರವಾಸಿಗರಿಗೆ ಎಲ್ಲ ರೀತಿಯ, ಆಧುನಿಕ ಶೈಲಿನ ಸೌಲಭ್ಯ ಕಲ್ಪಿಸುವ ಅಗತ್ಯವಿದೆ. ಅದನ್ನು ಮನಗಂಡು, ಹೊಳಬಸು ಶೆಟ್ಟರ, ಶ್ರೀಜಿತ್ ರೇಸಾರ್ಟ್ ನಿರ್ಮಿಸುತ್ತಿದ್ದು, ಇದೂ ಕೂಡ ಪ್ರವಾಸಿಗರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.ಉದ್ಯಮಿ, ಕಾಂಗ್ರೆಸ್ ಯುವ ಮುಖಂಡ ಹೊಳಬಸು ಶೆಟ್ಟರ ಮಾತನಾಡಿ, ಕಳೆದ 2020ರಲ್ಲಿ ಹೊಟೇಲ್ ಬಾದಾಮಿ ಕೋರ್ಟ್, ಪಡೆದು ಮುನ್ನಡೆಸಲಾಗುತ್ತಿದೆ. ಲಾಭವೊಂದೇ ಗುರಿಯಾಗಿಸಿಕೊಳ್ಳದೇ, ಇಲ್ಲಿಗೆ ಬರುವ ಪ್ರವಾಸಿಗರಿಗೆ ಆತಿಥ್ಯ ನೀಡುವುದು ನಮ್ಮ ಮುಖ್ಯ ಗುರಿಯಾಗಿದೆ. ಇದೀಗ, ಹೊಟೇಲ್ ಬಾದಾಮಿ ಕೋರ್ಟ್ ಹೊಂದಿಕೊಂಡೇ, ಶ್ರೀಜಿತ್ ರೇಸಾರ್ಟ್ ನಿರ್ಮಿಸುತ್ತಿದ್ದು, 24 ಕೊಠಡಿ ಇರಲಿವೆ. ಪ್ರವಾಸಿಗರಿಗೆ ವಿಶೇಷ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ನಿರ್ಮಾಣ ಮಾಡಲಾಗುತ್ತಿದೆ. ಈ ಕಾರ್ಯಕ್ಕೆ ನಾಡಿನ ಅನ್ನರಾಮಯ್ಯ ಎಂದೇ ಖ್ಯಾತಿ ಪಡೆದ ಸಿಎಂ ಸಿದ್ದರಾಮಯ್ಯ ಅವರಜ ಚಾಲನೆ ನೀಡಿರುವುದು ನಮ್ಮ ಸೌಭಾಗ್ಯ ಎಂದರು.ಕಮತಗಿಯ ಹೊಳೆಹುಚ್ಚೇಶ್ವರ ಬ್ಯಾಂಕ್, ಕೆನರಾ ಬ್ಯಾಂಕ್‌ನವರು ಆರ್ಥಿಕ ನೆರವು ನೀಡಿದ್ದಾರೆ. ಅವರ ಸಹಕಾರ ಸ್ಮರಿಸುತ್ತೇವೆ ಎಂದು ತಿಳಿಸಿದರು.ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು. ಸಚಿವರಾದ ಶಿವರಾಜ ತಂಗಡಗಿ, ಆರ್.ಬಿ. ತಿಮ್ಮಾಪುರ ಮುಂತಾದವರು ಉಪಸ್ಥಿತರಿದ್ದರು.

# ವ್ಯಕ್ತಿ ಕಾಣೆ; ಪತ್ತೆಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ನಗರದ ಜಾಗೃತಿ ನಗರ ಬಡಾವಣೆಯ ಕೌಲ್ ಬಜಾರ್ ನಿವಾಸಿಯಾದ ಮೊಹಮ್ಮದ್ ಇರ್ಫಾನ್ ಎನ್ನುವ 27 ವರ್ಷದ ವ್ಯಕ್ತಿ 2024ರ ಜುಲೈ 02 ರಂದು ಕಾಣೆಯಾಗಿರುವ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,

ಪತ್ತೆಗೆ ಸಹಕರಿಸಬೇಕು ಎಂದು ಸಹಾಯಕ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ:

ಎತ್ತರ 5.6 ಅಡಿ, ಸಾಧಾರಣ ಮೈಕಟ್ಟು, ಕೋಲು ಮುಖ, ಗೋಧಿ ಮೈ ಬಣ್ಣ, ಹೊಂದಿದ್ದು, ವ್ಯಕ್ತಿ ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ.

ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, 244145, ಪಿ.ಐ ಮೊ.9480803047, ಪಿಎಸ್‌ಐ ಮೊ.94808203084, 9480803085 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ. 08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆತ್ತವರನ್ನು ಚೆನ್ನಾಗಿ ನೋಡಿಕೊಳ್ಳಿ:ರಮೇಶ ಪೆದ್ದೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ಹೆತ್ತವರನ್ನು ನಿರ್ಲಕ್ಷಿಸದೆ ಅವರನ್ನು ಚೆನ್ನಾಗಿ ನೋಡಿಕೊಳ್ಳಿ ಎಂದು ತಮ್ಮ ವಚನ ಮೂಲಕ ನೈತಿಕ ಮೌಲ್ಯಗಳನ್ನು ಬೋಧಿಸಿದ ಮಹಾಕವಿ ಯೋಗಿ ವೇಮನ ಎಂದು ಗ್ರೇಡ–2 ತಹಸೀಲ್ದಾರ ರಮೇಶ ಪೆದ್ದೆ ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಆಯೋಜನೆ ಮಾಡಿದ ಮಹಾನಯೋಗಿ ವೇಮನ ಜಯಂತಿ ಕಾರ್ಯಕ್ರಮದಲ್ಲಿ ವೇಮನ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.ಹೆತ್ತವರನ್ನು ನಿರ್ಲಕ್ಷಿಸುವವನು ಹುತ್ತದ ಗೆದ್ದಲಿಗೆ ಸಮಾನವೆಂದು ಸಾರಿ, ನೇರ ನೇರ ವಾಗಿ ಕಟು ಪದ ಗಳಿಂದ ಟಿಕೀಸುತ್ತಾ ಜನರ ನ್ನು ಸಂಬಂಧ ಮೌಲ್ಯ ತಿಳಿಸಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪ ತಹಸೀಲ್ದಾರ ಗೋಪಾಲ ಕೃಷ್ಣ, ಸವಿತಾ, ಮಲ್ಲಪ್ಪ, ಪ್ರಶಾಂತ ಶ್ರೀಕಾಂತ, ಜರೆಪ್ಪ, ಸೇರಿದಂತೆ ತಹಸೀಲ್ದಾರ ಕಚೇರಿ ಸಿಬ್ಬಂದಿಯರು ಉಪಸ್ಥಿತರಿದ್ದರು.

# ಆಧ್ಯಾತ್ಮಿಕ ಚಿಂತಕ ಮಹಾನ್ ಯೋಗಿ ವೇಮನ



• ಮಲ್ಲಮ್ಮ ನುಡಿ ವಾರ್ತೆ ಕಲಘಟಗಿ:

ದೇಶಾದ್ಯಂತ ಅನೇಕ ಸಾಧು ಸಂತರನ್ನು ಕಂಡ ದೇಶ ನಮ್ಮ ಭಾರತ ನಮ್ಮ ದೇಶದಲ್ಲಿ ಆದ್ಯಾತ್ಮಿಕ ಸಾಧನೆಯಲ್ಲಿ ಮುಂಚಣಿಯಲ್ಲಿ ನಿಂತು ಸಾಧನೆಯ ಬೆಳಕನ್ನು ಹರಿಸುವ ಅನೇಕ ಸಾಧಕರಲ್ಲಿ ಯೋಗಿ ವೇಮನ ಅಗ್ರಗಣ್ಯರು ಎಂದು ರಾಮನಗೌಡ ಪಾಟೀಲ ಮಾತನಾಡಿದರು.

ಅವರು ಪಟ್ಟಣದ ತಹಶೀಲ್ದಾರ ಕಚೇರಿಯಲ್ಲಿ ಆಯೋಜಿಸಿದ್ದ ಮಹಾ ಕವಿ ಸಮಾಜಪರ ಚಿಂತಕ ಸಾಧನಾ ಪುರುಷ ವೇಮನರವರ 614 ನೇ ಜಯಂತ್ಯೋತ್ಸವದ ನಿಮಿತ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದ ಮೂಲಕ ಮಾತನಾಡಿ 15ನೇ ಶತಮಾನದ ರೆಡ್ಡಿ ವಂಶಕ್ಕೊಳಪಟ್ಟ ರಾಜವಂಶಸ್ಥರ ಸಂಜಾತರಾದ ಇಂದಿನ ಆಂದ್ರಪ್ರದೇಶ ಭಾಗವಾಗಿರುವ ಮಹಾನ ಯೋಗಿ ವೇಮನ ರವರ ಅನೇಕ ವಚನ ಸಾಹಿತ್ಯಗಳನ್ನು ಮೂಲದಲ್ಲಿ ತೆಲಗು ಭಾಷೆಯಲ್ಲಿ ರಚಿಸಲ್ಪಟ್ಟಿದ್ದು ಕನ್ನಡದಲ್ಲಿ ಬಾಷಾಂತರಗೊಳಿಸಲಾಗುತ್ತಿದೆ ಎಂದರು.

ಲಿಂಗರೆಡ್ಡಿ ನಡುವಿನಮನಿ ವೇಮನರು ಭಾರತ ಕಂಡ ಮಹಾನ್ ಸಂತ ಇವರ ಜೀವನ ಇಂದಿಗೂ ಕೂಡ ನಮ್ಮ ಸಮಾಜಕ್ಕೆ ಉತ್ತಮ ಸಂಧೇಶವಾಗಿದೆ ಎಂದರು.

ಗ್ರೇಡ2ತಹಶಿಲ್ದಾರ ಬಸವರಾಜ ಅಂಗಡಿ ಮಾತನಾಡಿ ವೇಮನರ ಕುರಿತು ಮಾತನಾಡಿದರು ಇ ಸಂಧರ್ಭದಲ್ಲಿ ಬಸನಗೌಡ ಸಣ್ಣಗೌಡ್ರ, ಡಾ. ಮತ್ತುರಾಜ ಪಾಟೀಲ, ಬಸನಗೌಡ ಗುಡ್ಡದಹುಲ್ಲಿಕಟ್ಟಿ, ಗೀರಿಶರಡ್ಡೇರ, ಐ.ಸಿ ಗೂಕೂಲ, ಮಂಜುನಾಥಮುಕ್ಕಲ್ಲ, ಭೀಮನಗೌಡ ಪಾಟೀಲ, ಬಸನಗೌಡಪಾಟೀಲ, ಉಮೇಶ ಸಣ್ಣಗೌಡ್ರ, ಗಂಗಾಧರರಡ್ಡೇರ, ಪ್ರಸನ್ನ ಡಂಬಳ, ಬಿ ಪಾಟೀಲ, ಶಂಕರ ರಡ್ಡೇರ, ಶಿವನಗೌಡ ಪಾಟೀಲ. ಪ್ರಭು ಅಂಗಡಿ, ಮಹಾಬಲೇಶ್ವರ ಕ್ಯಾರಕೊಪ್ಪ, ಬಸವರಾಜ ಹೆಬ್ಬಳ್ಳಿ, ಇದ್ದರು.

# ಹೊಲಗಳಿಗೆ ದಾರಿ ವ್ಯವಸ್ಥೆ ಮಾಡಿಕೊಡಿ ಅಧಿಕಾರಿಗಳಿಗೆ ಪ್ರಭು ಚವ್ಹಾಣ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ಗ್ರಾಮ ಸಂಚಾರದಲ್ಲಿ ರೈತರ ಕೃಷಿ ಜಮೀನುಗಳಿಗೆ ದಾರಿ ಸಮಸ್ಯೆಯ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿವೆ. ಗ್ರಾಮಸ್ಥರ ಸಹಯೋಗದೊಂದಿಗೆ ಸಮಸ್ಯೆ ಇತ್ಯರ್ಥಪಡಿಸುವಂತೆ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ರಾಮಸಂಚಾರದ ನಿಮಿತ್ತ ಸೋಮವಾರ ರಂದು ತಾಲೂಕಿನ ಬೆಂಬ್ರಾ, ಕೋರೆಕಲ್, ಠಾಣಾ ಕುಶನೂರ, ನಿಡೋದಾ, ಹಾಲಹಳ್ಳಿ, ಬಳತ್(ಕೆ), ಬಳತ್(ಬಿ), ಸಂಗಮ್, ಖೇಡ್ ಹಾಗೂ ಕಾಳಗಾಪೂರ ಗ್ರಾಮಗಳಿಗೆ ಭೇಟಿ ನೀಡಿ, ಗ್ರಾಮಸ್ಥರೊಂದಿಗೆ ನೇರ ಸಂವಾದ ನಡೆಸಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದರು.

ಗ್ರಾಮಸ್ಥರು ಮತ್ತು ರೈತರು ತಮ್ಮ ಹೊಲಗಳಿಗೆ ತೆರಳಲು ಅನುಕೂಲವಾಗುವಂತೆ ಹಳೆಯ ದಾರಿಗಳನ್ನು ಪುನರುಜ್ಜೀವನಗೊಳಿಸಿ, ಅತಿಕ್ರಮಣಗೊಂಡಿರುವ ದಾರಿಗಳನ್ನು ತೆರವುಗೊಳಿಸುವುದು ಅಗತ್ಯವಾಗಿದೆ. ರೈತರು ಕೃಷಿ ಚಟುವಟಿಕೆ ನಡೆಸಲು ದಾರಿ ಸಮಸ್ಯೆಯಿಂದ ಅಡಚಣೆ ಎದುರಿಸಬಾರದು ಎಂಬುದು ನನ್ನ ಆಶಯವಾಗಿದೆ ಎಂದು ಶಾಸಕರು ಹೇಳಿದರು.

ಪ್ರತಿ ಗ್ರಾಮದಲ್ಲಿಯೂ ಹೊಲಗಳಿಗೆ ಹೋಗುವ ದಾರಿಗಳ ವಿವರಗಳನ್ನು ಸಂಗ್ರಹಿಸಿ, ಸಮಸ್ಯೆಯಿರುವ ಸ್ಥಳಗಳನ್ನು ಗುರುತಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಂದಾಯ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಿ ರೈತರಿಗೆ ಶಾಶ್ವತ ಪರಿಹಾರ ಒದಗಿಸಬೇಕು ಎಂದು ಅವರು ಸೂಚಿಸಿದರು.

ಗ್ರಾಮಸ್ಥರಲ್ಲಿ ಮನವಿ:*ಎಲ್ಲ ರೈತರಿಗೂ ತಮ್ಮ ಹೊಲಗಳಿಗೆ ಹೋಗಲು ದಾರಿಯ ಅವಶ್ಯಕತೆಯಿರುತ್ತದೆ. ಆದರೆ ಕೆಲವರು ದಾರಿಯ ಅಗತ್ಯವಿದ್ದರೂ ರಸ್ತೆ ನಿರ್ಮಾಣಕ್ಕೆ ಅಡ್ಡಿಪಡಿಸುವುದು ಸಾಮಾನ್ಯವಾಗಿದೆ. ಕೆಲವರಿಂದಾಗಿ ಗ್ರಾಮದ ಬಹಳಷ್ಟು ರೈತರು ಸಮಸ್ಯೆ ಎದುರಿಸುತ್ತಿದ್ದಾರೆ. ಇದೇ ಪರಿಸ್ಥಿತಿ ಮುಂದುವರಿದರೆ ರಸ್ತೆ ನಿರ್ಮಾಣಕ್ಕೆ



ತೊಡಕಾಗಿ ಸಮಸ್ಯೆ ಎಂದಿನಂತೆ ಮುಂದುವರೆಯುತ್ತದೆ.

ಹಾಗಾಗಿ ಗ್ರಾಮಸ್ಥರು ಒಟ್ಟಾಗಿ ಕುಳಿತು ಆಂತರಿಕ ಸಮಸ್ಯೆಯನ್ನು ಬಗೆಹರಿಸಿಕೊಂಡು ಎಲ್ಲರ ಒಪ್ಪಿಗೆ ಪಡೆದು ರಸ್ತೆ ನಿರ್ಮಿಸುವ ಪ್ರಸ್ತಾವನೆ ಸಲ್ಲಿಸಿದಲ್ಲಿ ಭೂದಾಖಲೆಗಳ ಇಲಾಖೆಯಿಂದ ಸರ್ವೇ ಮಾಡಿಸಿ ಗ್ರಾಮ ಪಂಚಾಯಿತಿಯ ಮೂಲಕ ರಸ್ತೆ ನಿರ್ಮಿಸಲು ಕ್ರಮ ವಹಿಸಲಾಗುತ್ತದೆ. ಗ್ರಾಮಸ್ಥರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಶಾಸಕರು ತಿಳಿಸಿದರು.

ಗ್ರಾಮ ಸಂಚಾರದಲ್ಲಿ ಸಾರ್ವಜನಿಕರು ರಸ್ತೆ, ಕುಡಿಯುವ ನೀರು, ವಿದ್ಯುತ್, ವಸತಿ, ಶಿಕ್ಷಣ, ಆರೋಗ್ಯ ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳಿಗೆ ಸಂಬಂಧಿಸಿದ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಶಾಸಕರ ಗಮನಕ್ಕೆ ತಂದರು. ಪ್ರತಿಯೊಂದು ಅಹವಾಲಿಗೂ ಸ್ಪಂದಿಸಿದ ಶಾಸಕ ಪ್ರಭು ಬಿ. ಚವ್ಹಾಣ ಅವರು, ಸಮಸ್ಯೆ ಇತ್ಯರ್ಥಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಅಮಿತ ಕುಲಕರ್ಣಿ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ, ಲೋಕೋಪಯೋಗಿ ಉಲಾಖೆ ಎಇಇ ಪ್ರೇಮಸಾಗರ, ಪಂಚಾಯತ ರಾಜ್ ಎಂಜಿನಿಯರಿಂಗ್ ಇಲಾಖೆ ಎಇಇ ಸುನೀಲ ಚಿಲ್ಲರ್ಗೆ, ಬಿಇಓ ಬಿ.ಜೆ ರಂಗೇಶ, ಸಹಾಯಕ ಕೃಷಿ ನಿರ್ದೇಶಕ ಧೂಳಪ್ಪ, ಸಿಡಿಪಿಓ ಇಮಲಪ್ಪ, ಖೇಡ ಪಿ.ಡಿ.ಯೋ ಸಂಧ್ಯಾರಾಣಿ, ಎಡಿಎರ್ ರಾಜಶ್ರೀ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಅರಹಂತ ಸಾವಳೆ, ಧನರಾಜ ವಡೆಯರ್, ಗಿರೀಶ ವಡೆಯರ್, ಮಂಜು ಸ್ವಾಮಿ, ಬಾಲಾಜಿ ಠಾಕೂರ, ಸಂದೀಪ ಪಾಟೀಲ, ಶಿವಕುಮಾರ ಬಿರಾದಾರ, ಉದಯ ಸೋಲಾಪೂರೆ, ಪ್ರವೀಣ ಕಾರಬಾರಿ, ಯೋಗೇಶ ಬಿರಾದಾರ, ಶ್ರೀಮಂತ ಪಾಟೀಲ ಸೇರಿದಂತೆ ಇತರರಿದ್ದರು.

# ಡೋಣಗಾಂವದಲ್ಲಿ ಉನ್ನತ ಕೃಷಿ ಪ್ರದರ್ಶನ ಅಭಿಯಾನ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ತಾಲೂಕಿನ ಡೋಣಗಾಂವ ಗ್ರಾಮದಲ್ಲಿ ಇಂದು ಮಂಗಳವಾರ ಕೃಷಿ ಉನ್ನತ ಪ್ರದರ್ಶನ ಅಭಿಯಾನ ಕಾರ್ಯಕ್ರಮ ಗ್ರಾಮದ ಹೊರವಲಯದ ವಾಡಿ ಮುಖ್ಯ ರಸ್ತೆ ಪಕ್ಕದಲ್ಲಿ ನಡೆಯಲಿದೆ ಎಂದು ಡಾ. ಬಿಆರ್ ಅಂಬೇಡ್ಕರ್ ಗ್ರಾಮೀಣ ಕೃಷಿ ಅಭಿವೃದ್ಧಿ ಮತ್ತು ಸಂಶೋಧನಾ ಕೇಂದ್ರದ ಟ್ರಷ್ಟ ಅಧ್ಯಕ್ಷ ಬಾಬುರಾವ ಸೋಮೂರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕಾರ್ಯಕ್ರಮ ಸೇವಾ ನಿವೃತ ಕುಲಪತಿ ಕೃಷಿ ವಿಶ್ವವಿದ್ಯಾಲಯ ರಾಯಚೂರ ಬಿ.ಟಿ. ಪೂಜಾರಿ ಉದ್ಘಾಟಿವವರು. ಜಂಟಿ ನಿರ್ದೇಶಕ ಕೃಷಿ ಇಲಾಖೆ ದೇವಿಕಾ ಆರ್. ಉಪನಿರ್ದೇಕರು ಕೃಷಿ ಇಲಾಖೆ ಬೀದರ್ ಅನ್ಸಾರಿ ಎಚ್.ಕೆ. , ಕಮಲನಗರ ತಾಲೂಕು ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ, ಇಒ ಹಣಮಂತರಾವ ಕೌಟಗೆ,

ಪ್ರಗತಿಪರ ರೈತರು ಸೇರಿದಂತೆ ತಾಲೂಕಿನ ವಿವಿಧ ಹೋಬಳಿ ಕೇಂದ್ರ ಸುತ್ತಲಿನ ರೈತರು ಮದಾಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.ವಿಶೇಷವಾಗಿ ರೈತರಿಗೆ ವೈಜ್ಞಾನಿಕವಾಗಿ ಕೃಷಿಯಲ್ಲಿ ತೊಡಗಿಸಕೊಂಡು ಹೆಚ್ಚಿನ ಉತ್ಪಾದನೆ ಕುರಿತು ವಿವರವಾಗಿ ಮಾಹಿತಿ ನೀಡಲು ಕೃಷಿ ತಜ್ಞರ ಮಾರ್ಗದರ್ಶನ ಪಡೆಯಲು ಹೆಚ್ಚಿನ ಸಂಖ್ಯೆಯಲ್ಲಿ ರೈತರು ಪಾಲ್ಗೊಂಡು ಈ ಕಾರ್ಯಕ್ರಮದ ಲಾಭ ಪಡೆದು ಕೊಳ್ಳುವಂತೆ ಬಾಬುರಾವ ಸೋಮೂರೆ ಮನವಿ ಮಾಡಿದ್ದಾರೆ.

# ಗೃಹ ಲಕ್ಷ್ಮೀ: ಅಜ್ಜಿ ಮೊಮ್ಮಗಳಿಗಾಗಿ ಸುಕನ್ಯ ಸಮೃದ್ಧಿ ಯೊಜನೆಗೆ ಜಮಾ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:

ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತಿದ್ದಂತೆ, ಗೃಹಲಕ್ಷ್ಮಿ ಯೋಜನೆ ಜಾರಿ ಮಾಡಿದೆ. ಈ ಹಣದಿಂದ ಹಲವಾರು ಕಡೆಗಳಲ್ಲಿ ಗೃಹಲಕ್ಷ್ಮಿ ಹಣದಿಂದ ಮಹಿಳೆಯರು ಫ್ರಿಡ್ಜ್, ವಾಷಿಂಗ್ ಮಷಿನ್ ಖರೀದಿ ವರದಿಯಾದರೆ ಇಲೊಬ್ಬ ಅಜ್ಜಿ ಗೃಹಲಕ್ಷ್ಮಿ ಹಣವನ್ನು ಮೊಮ್ಮಳ ಮಂದಿನ ಭಷ್ಯದ ದೃಷ್ಟಿಯಿಂದ ಉಪಯೋಗವಾಗಲಿ ಎಂದು ಸರಕಾರದ ಮಹತ್ವಕಾಂಕ್ಷಿ ಯೋಜನೆಯಾದ ಸುಕನ್ನ ಸಮೃದ್ಧಿ ಯೋಜನೆಗೆ ಜಮಾ ಮಾಡಿದ್ದಾರೆ.ಯಲಬುರ್ಗಾ ತಾಲ್ಲೂಕಿನ ತರಲಕಟ್ಟಿ ಗ್ರಾಮದ ಶರಣಮ್ಮ ಯಮನಪ್ಪ ಬ್ಯಾಳಿಯವರು ಗೃಹಲಕ್ಷೀ ಹಣವನ್ನು ತನ್ನ ಮೊಮ್ಮಗ ಮುಂದಿನ ಭಷ್ಯದ ದೃಷ್ಟಿಯಿಂದ ಯೊಚನೆ ಮಾಡಿ ನನ್ನ ಗೃಹ ಲಕ್ಷೀ ಹಣವನ್ನು ನಾನು ಯಾರಿಗೂ ಕೊಡುವದಿಲ್ಲ ಮೋಮ್ಮಳಾದ ಸಾನ್ವಿ ಹನಮೇಶ ಬ್ಯಾಳಿ ಹೆಸರಿನಲ್ಲಿ ನಾನು ಸುಕನ್ನಯ ಸಮೃದ್ಧಿ ಯೋಜನೆಗೆ ಹಣ ಜಮಾ ಮಾಡುತ್ತಿದ್ದಾರೆ ಮುಂದೆ 18 ವರ್ಷದ ನಂತರ ಹೆಚ್ಚಿನ ವಿದ್ಯಾಬ್ಯಾಸಕ್ಕೆ ಮದುವೆಗೆ ಉಪಯೋಗವಾಗುತ್ತೆ ಎಂದು ನಿರ್ದಾರ ಮಾಡಿ ಹಣ ಜಮಾ ಮಾಡಿದ್ದಾರೆ ಈ ಕಾರ್ಯಕ್ಕೆ ಮಗ,ಗಂಡ ಸೊಸೆ ಈಗ ಜನ ಶಹಬ್ಬಾಸ್ ಅಂತಿದ್ದಾರೆ. ಈ ಯೋಜನೆ ಜಾರಿಗೆ ತಂದ ಸಿಎಂ ಸಿದ್ರಾರಾಮಯ್ಯ ಮತ್ತು ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿಯವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

# ಆಸ್ತಿ ಕರ ವಸೂಲಿ ಅಭಿಯಾನಕ್ಕೆ ಸಿಇಓ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ಜಿಲ್ಲೆಯಾದ್ಯಂತ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿರುವ ಆಸ್ತಿ ತೆರಿಗೆ ವಸೂಲಾತಿ ಅಭಿಯಾನಕ್ಕೆ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಶನಿವಾರ ಚಾಲನೆ ನೀಡಿದರು. ಬಾಗಲಕೋಟೆ ತಾಲೂಕಿನ ಶಿಕ್ಕೇರಿ ಗ್ರಾಪಂ ವ್ಯಾಪ್ತಿಯಲ್ಲಿ ಮನೆ ಮನೆಗೆ ಭೇಟಿ ನೀಡಿ ಅಭಿಯಾನಕ್ಕೆ ಚಾಲನೆ ನೀಡಿದ ಕುರೇರ, ಗ್ರಾಮೀಣ ಭಾಗದ ಅಭಿವೃದ್ಧಿಗಾಗಿ ಪೂರಕವಾಗಿ ತೆರಿಗೆ ಸಂಗ್ರಹ ಪ್ರಕ್ರಿಯೆಯನ್ನು ಚುರುಕುಗೊಳಿಸುವ ಉದ್ದೇಶದಿಂದ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಗ್ರಾಮಗಳ ಭೇಟಿಯ ಸಂದರ್ಭದಲ್ಲಿ ಗ್ರಾಮ ಪಂಚಾಯತಿಗಳು ಸ್ವಾವಲಂಬಿಯಾಗಲು ಮತ್ತು ಗ್ರಾಮಸ್ಥರಿಗೆ ಉತ್ತಮ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆಸ್ತಿ ತೆರಿಗೆ ಸಂಗ್ರಹ ಅತ್ಯಗತ್ಯವಾಗಿದ್ದು, ಸಾರ್ವಜನಿಕರು ಬಾಕಿ ಇರುವ ತೆರಿಗೆಯನ್ನು ಪಾವತಿಸುವ ಮೂಲಕ ಗ್ರಾಮದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಕರೆ ನೀಡಿದರು. ನಂತರ ಬಾಗಲಕೋಟೆ ತಾಲೂಕಿನ ಭಗವತಿ, ಹಳ್ಳೂರು, ಬೇವೂರ ಗ್ರಾಮಗಳಿಗೆ ಭೇಟಿ ನೀಡಿದರು.

# ಸೋಲೇ ಗೆಲುವಿನ ಮೆಟ್ಟಿಲು: ಸಂಸದ ಈ ತುಕಾರಾಂ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

(ತೋರಣಗಲ್ಲು ) ಮನುಷ್ಯ ಅಥವಾ ವಿದ್ಯಾರ್ಥಿಯ ಜೀವನದಲ್ಲಿ ಸೋಲು ಗೆಲುವು ಸಹಜ ಅದನ್ನು ಮೆಟ್ಟಿನಿಂತು ಜೀವನದ ಗುರಿಯನ್ನು ಸಾಧಿಸಿ ಕೊಳ್ಳಬೇಕು ಎಂದು ಬಳ್ಳಾರಿ ವಿಜಯನಗರ ಸಂಸದರಾದ ಈ ತುಕಾರಾಂ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಅವರು ಜಿಲ್ಲೆಯ ಸಂಡೂರು ತಾಲೂಕಿನ ತೋರಣಗಲ್ ಗ್ರಾಮದ ಜಿಂದಾಲ್ ಆದರ್ಶ ವಿದ್ಯಾಲಯದಲ್ಲಿ ಭಾರತ್ ಸ್ಕೌಟ್ ಮತ್ತು ಗೈಡ್ಸ್ ಕರ್ನಾಟಕ ಹಾಗೂ ಭಾರತ ಸ್ಕೌಟ್ ಮತ್ತು ಗೈಡ್ ಬಳ್ಳಾರಿ ಜಿಲ್ಲಾ ಸಂಸ್ಥೆ ಮತ್ತು ಜಿಂದಾಲ್ ಆದರ್ಶ ವಿದ್ಯಾಲಯ ಶಂಕರ್ ಗುಡ್ಡ ತೋರಣಗಲ್ಲು ಇವರ ಸಂಯುಕ್ತ ಆಶಯದಲ್ಲಿ ಆಯೋಜಿಸಲಾಗಿದ್ದ ಕಬ್ಸ್ ಬುಲ್ ಬುಲ್ಸ್ ಸ್ಕೌಟ್ ಗೈಡ್ಸ್ ಮತ್ತು ರೋವರ್ಸ್ ಅಂಡ್ ರೇಂಜರ್ಸ್ ಹಾಗೂ ದಳ ನಾಯಕರುಗಳ ರಾಜ್ಯಮಟ್ಟದ ಗೀತ ಗಾಯನ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದ ಶೈಲಿಯಲ್ಲಿ ಶಿಸ್ತು ಮತ್ತು ಸಂಯಮವನ್ನು ಕಾಪಾಡಿಕೊಳ್ಳಲು ಭಾರತ್ ಸ್ಕೌಟ್ ಅಂಡ್ ಗೈಡ್ ಸಂಸ್ಥೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದೆ ಈ ಸಂಸ್ಥೆಯ ಎಲ್ಲಾ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಜೀವನ ಶೈಲಿಯನ್ನು ಉತ್ತಮಪಡಿಸಿಕೊಳ್ಳಬೇಕು ಇಂತಹ ಕಾರ್ಯಕ್ರಮಗಳಿಗೆ ನಾನು ಮುಂದಿನ ದಿನಗಳಲ್ಲಿ ಕಾರ್ಯಕ್ರಮಕ್ಕೆ ಬೇಕಾಗುವ ಎಲ್ಲಾ ವ್ಯವಸ್ಥೆ ಸಹಾಯ ಸಹಕಾರವನ್ನು ಮಾಡಿಕೊಡುತ್ತೇನೆ ಎಂದ ಅವರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ರಾಜ್ಯಮಟ್ಟದ ಅಥವಾ ರಾಷ್ಟ್ರಮಟ್ಟದ ಕಾರ್ಯಕ್ರಮವನ್ನು ನಮ್ಮ ತಾಲೂಕು ಅಥವಾ ಜಿಲ್ಲೆಯಲ್ಲಿ ಹಮ್ಮಿಕೊಂಡಲ್ಲಿ ಅದ್ದೂರಿಯಾಗಿ ನಾನೇ ಮುಂದೆ ನಿಂತು ನಡೆಸಿಕೊಡುತ್ತೇನೆ ಎಂದು ಭರವಸೆಯನ್ನು ನೀಡಿದರು.

ನನ್ನ ಜೀವನದ ಏಳುಬೀಳುಗಳಲ್ಲಿ ಏಳಿಗೆಯನ್ನ ಹೆಚ್ಚಾಗಿ ಕಂಡಿದ್ದೇನೆ ಅದಕ್ಕೆ ಕಾರಣವೆಂದರೆ ನನ್ನ ಶಿಸ್ತು ಮತ್ತು ಸಂಯಮ ಸೇವಾಮನೋಭಾವ ಕಾರಣ ವಿದ್ಯಾರ್ಥಿಗಳು ಸಹ ಇದನ್ನು ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಭಾರತ್ ಸ್ಕೌಟ್ಸ್ ಮತ್ತು ಗೈಡ್ ಸಂಸ್ಥೆಯ ರಾಜ್ಯ ಮುಖ್ಯ ಆಯುಕ್ತರಾದ ಪಿ ಜಿ ಆರ್ ಸಿಂಧ್ಯಾ ಮಾತನಾಡಿ, 'ಸ್ಕೌಟ್–ಗೈಡ್' ಚಳವಳಿಯು ಪ್ರಪಂಚದಾದ್ಯಂತ ವ್ಯಾಪಿಸಿರುವ ಅಂತರಾಷ್ಟ್ರೀಯ



ಯುವಚಳವಳಿಯಾಗಿದೆ. ಈ ಚಳವಳಿಯು ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಬದುಕಿನ ಶಿಕ್ಷಣ, ಪರಿಸರ ಪ್ರಜ್ಞೆ, ಮನೋಬಲ, ಸಹಕಾರ, ಜಾತ್ಯಾತೀತ ಮನೋಭಾವ, ರಾಷ್ಟ್ರೀಯತೆ, ಸಾಹಸಪ್ರಿಯತೆ,

ಕ್ರೀಡಾಮನೋಭಾವ, ಕ್ರಿಯಾಶೀಲನೆ, ಸಚ್ಚಾರಿತ್ರ ಜೀವನ ಕೌಶಲ್ಯ, ನಾಯಕತ್ವ ಮತ್ತು ಉದಾತ್ತ ಜೀವನ ಮೌಲ್ಯಗಳನ್ನು ಮೈಗೂಡಿಸುವ ಉದ್ದೇಶವುಳ್ಳ ಸ್ವಯಂ ಸೇವಾ ಸಂಸ್ಥೆಯಾಗಿದೆ. ಸ್ಕೌಟ್ಸ್ ಮತ್ತು

ಗೈಡಿಂಗ್‌ನಲ್ಲಿ ಕರ್ನಾಟಕ ರಾಜ್ಯವು ದೇಶದ ಮುಂಚೂಣಿ ರಾಜ್ಯವಾಗಿದ್ದು, ಪ್ರಸ್ತುತ 7.84 ಲಕ್ಷ ಬನ್ನೀಸ್, ಕಬ್, ಬುಲ್‌ಬುಲ್, ಸ್ಕೌಟ್, ಗೈಡ್, ರೋವರ್, ರೇಂಜರ್ ವಿದ್ಯಾರ್ಥಿಗಳು ಜೀವನ ಶಿಕ್ಷಣ ಕಲಿತು, ಉತ್ತಮ ನಾಗರಿಕರಾಗಿ ರೂಪುಗೊಂಡಿದ್ದಾರೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಸಂಸ್ಥೆ ತನ್ನ ಕಾರ್ಯ ಚಟುವಟಿಕೆಯಿಂದ ವಿದ್ಯಾರ್ಥಿಗಳಲ್ಲಿ ಮಾನಸಿಕ ಮತ್ತು ದೈಹಿಕವಾಗಿ ಅಭಿವೃದ್ಧಿ ಹೊಂದುವಂತೆ ಇಂಥ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿದ್ಯಾರ್ಥಿಗಳ ಜೀವನದಲ್ಲಿ ದೇಶದ ಬಗ್ಗೆ ದೇಶಪ್ರೇಮ ದೇಶದ ಬಗ್ಗೆ ಗೌರವ ನಾಡಿನ ಬಗ್ಗೆ ಗೌರವ ಮತ್ತು ತಮ್ಮ ಜೀವನ ಶೈಲಿಯಲ್ಲಿ ಏಕಾಗ್ರತೆಯನ್ನು ಕಲ್ಪಿಸಿ ಕೊಡುತ್ತದೆ ಇದರಿಂದ ಮಕ್ಕಳಿಗೆ ದೇಶದ ಮೇಲೆ ಗೌರವ ಹೆಚ್ಚಾಗಿ ಉತ್ತಮ ಪ್ರಜೆಗಳಾಗುವ ವೇದಿಕೆಯನ್ನು ಕಲ್ಪಿಸಿಕೊಡಲಿದೆ, ಇಂಥ ಕಾರ್ಯಕ್ರಮಗಳಲ್ಲಿ ತಪ್ಪದೇ ಎಲ್ಲ ವಿದ್ಯಾರ್ಥಿಗಳು ಭಾಗವಹಿಸಬೇಕೆಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಮಾತನಾಡಿ, ಯಾವುದೇ ಕಾರಣ–ಕ್ಕೂ ಮಕ್ಕಳನ್ನು ಶಿಕ್ಷಣದಿಂದ ವಂಚಿಸಬೇಡಿ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಮತ್ತು ಅಭಿವೃದ್ಧಿಗಾಗಿ ಭಾರತ ಸ್ಕೌಟ್ಸ್ ಮತ್ತು ಗೈಡ್ ಸಂಸ್ಥೆ ಆಗಾಗ ಹಮ್ಮಿಕೊಳ್ಳುವ ಇಂಥ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಮಾನಸಿಕ ಮತ್ತು ಬೌದ್ಧಿಕ ಬೆಳವಣಿಗೆಯನ್ನು ಪಡೆದುಕೊಳ್ಳಬೇಕೆಂದರು.

ಕಾರ್ಯಕ್ರಮದ ಆಯೋಜ–ಕರೂ ಹಾಗೂ ಎ ಎಸ್ ಓ ಸಿ ಗೈಡ್ಸ್ ಮತ್ತು ರೇಜರ್ ಇನ್ ಮತ್ತು ಕಲ್ಯಾಣ ಕರ್ನಾಟಕ ಉಸ್ತುವಾರಿಗಳಾದ ಮಲ್ಲೇಶ್ವರಿ ಜುಜಾರೆ ಪ್ರಾಸ್ತಾವಿಕ ಮಾತನ್ನಾಡಿ, ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ಭಾರತ ಸ್ಕೌಟ್ ಮತ್ತು ಗೈಡ್ಸ್ ಸಂಸ್ಥೆಯು ಸುಮಾರು 75 ವರ್ಷದ ಹಿಂದೆ ವೆಂಕಣ್ಣ ಮತ್ತು ಗುರುರಾಜ ರಾವ್, ಮಲ್ಲಿಕಾರ್ಜುನಯ್ಯ ಒಂ ಒ, ಮತ್ತು ತಂಡದವರ ನೇತೃತ್ವದಲ್ಲಿ ಪ್ರಾರಂಭವಾಯಿತು.

ಇವರು ನೇತೃತ್ವದಲ್ಲಿ ಬಳ್ಳಾರಿ ಮಕ್ಕಳು ರಾಜ್ಯ ಪುರಸ್ಕಾರ ರಾಷ್ಟ್ರಪತಿ ಅವಾರ್ಡ್ ಹಾಗೂ ಪ್ರಧಾನಮಂತ್ರಿ ಪಾರಿತೋಷಕ ಪದಕಗಳನ್ನು ಪಡೆ–ಯುತ್ತಿದ್ದು ಹಾಗೂ ಅಂತರಾಷ್ಟ್ರೀಯ ಮಟ್ಟದ ಜಂಬೂರೇಟ್, ಗೀತ ಗಾಯನ, ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂಸ್ಥೆಗೆ ಕೀರ್ತಿಯನ್ನು ತಂದಿರುತ್ತಾರೆ. ನಮ್ಮ ಬಳ್ಳಾರಿ ಜಿಲ್ಲೆಯಿಂದ ಸುಮಾರು 30000 ರೋವರ್ಸ್ ಮತ್ತು ರೇಂಜರ್ಸ್ ಸ್ಕೌಟ್ಸ್ ಮತ್ತು ಗೈಟ್ಸ್ ಕಬ್ –ಬುಲ್ ಬುಲ್ ವಿದ್ಯಾರ್ಥಿಗಳು ಸಮಾಜ ಸೇವೆಯಲ್ಲಿ ಭಾಗಿಯಾಗಿದ್ದಾರೆ ನಮ್ಮ ಸಂಸ್ಥೆಯು ಪ್ರತಿವರ್ಷ ಪ್ರತಿ ತಿಂಗಳು ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತದೆ ಈ ಕಾರ್ಯಕ್ರಮಗಳ ಯಶಸ್ವಿಗಾಗಿ ಸಂಸ್ಥೆಯ ರಾಜ್ಯ ಮತ್ತು ಜಿಲ್ಲೆಯ ಪದಾಧಿಕಾರಿಗಳು ಕೆಲಸ ಮಾಡುತ್ತಾರೆ ಜೊತೆಗೆ ಈ ರೀತಿಯಾಗಿ ಜಿಲ್ಲೆಯ ಶಾಲೆ ಕಾಲೇಜುಗಳು ಕಾರ್ಯಕ್ರಮಗಳನ್ನು ನಡೆಸಲು ಅವಕಾಶ ಮಾಡಿಕೊಟ್ಟಲ್ಲಿ ಇನ್ನು ಮುಂದೆ ಸಂಸದರು ತಿಳಿಸಿದಂತೆ ರಾಜ್ಯ ಅಥವಾ ರಾಷ್ಟ್ರಮಟ್ಟದ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಉಮಾದೇವಿ,

ಹಂಪಿ ವಿಶ್ವವಿದ್ಯಾಲಯದ ರಿಜಿಸ್ಟರ್ ವಿರುಪಾಕ್ಷಿ ಪೂಜಾರಹಳ್ಳಿ, ಆದರ್ಶ ವಿದ್ಯಾಲಯದ ಕುಮಾರಸ್ವಾಮಿ ಬಳಿಗಾರ, ತೋರಣಗಲ್ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಅರಳಾಪುರ ವೀರೇಶಪ್ಪ,

ಭರತ್ ಸ್ಕೌಟ್ಸ್ ಮತ್ತು ಗೈಡ್ ಸಂಸ್ಥೆಯ ಉಪಾಧ್ಯಕ್ಷ ಮಲ್ಲೇಶಪ್ಪ ಜಿಲ್ಲಾ ಕಾರ್ಯದರ್ಶಿ ವಿಜಯ ಸಿಂಹ ಸಂಡೂರು ತಾಲೂಕಿನ ಕಾರ್ಯದರ್ಶಿ ಸೋಮಪ್ಪ ಸೇರಿದಂತೆ ಹಲವರು ಭಾಗವಹಿಸಿದ್ದರು.



ಪೀಣ್ಯ ದಾಸರಹಳ್ಳಿ: ಕ್ಷೇತ್ರದ ಕೆರೆಗುಡ್ಡದಹಳ್ಳಿಯ ಎಸ್ ಎಮ್ ಆರ್ ಲೇಔಟ್ ನ ರಸ್ತೆ ಡಾಂಬರೀಕರಣ ಕಾಮಗಾರಿಗೆ ಶಾಸಕ ಎಸ್.ಮುನಿರಾಜು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಜಿ.ಮರಿಸ್ವಾಮಿ, ಬಿಜೆಪಿ ಮುಖಂಡರಾದ ರಾಜೇಂದ್ರ, ಪುರಸಭೆ ಮುಖ್ಯ ಅಧಿಕಾರಿ ಎಸ್.ಮಂಜುನಾಥ್, ಮಹಿಳಾ ಮುಖಂಡರಾದ ಭಾಗ್ಯಮ್ಮ, ಗುತ್ತಿಗೆದಾರರಾದ ಕುಮಾರ್, ವಿಶ್ವನಾಥ್,ನಾಗರಾಜು ಮುಂತಾದವರು ಉಪಸ್ಥಿತರಿದ್ದರು.

## ಸನ್ಮತಿ ವಿದ್ಯಾಸಂಸ್ಥೆಯ ಶಾಲಾ ವಾರ್ಷಿಕೋತ್ಸವದಲ್ಲಿ ಸನ್ಮತಿ ಸಿರಿಸಂಜೆ



**ಪೀಣ್ಯ ದಾಸರಹಳ್ಳಿ:** ಸನ್ಮತಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಅರ್ಕೇಶ್ ಅವರ ನೇತೃತ್ವದಲ್ಲಿ 2026ರ ಸನ್ಮತಿ ಸಿರಿಸಂಜೆ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಶ್ರೀ ಶಬರಿಮಲೆ ಸ್ವಾಮಿ ಅಯ್ಯಪ್ಪ ಚಲನಚಿತ್ರ ನೃತ್ಯರೂಪಕ ಎಲ್ಲರ ಕಣ್ಮಣ ಸೆಳೆಯಿತುಮಕ್ಕಳು ಅಭಿನಯಿಸಿದ್ದರುಕಾರ್ಯಕ್ರವನ್ನು ಮನಿಗಂಗಪ್ಪ ಅಟದ ಮೈದಾನದಲ್ಲಿ ಅದ್ದೂರಿಯಾಗಿ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಬೆಂಗಳೂರು ಉತ್ತರ ವಲಯ ಉಪನಿರ್ದೇಶಕರಾದ ಅಂಜನಪ್ಪ, ಮಾಜಿ ಪಾಲಿಕೆ ಸದಸ್ಯ ಎಚ್ ಎನ್. ಗಂಗಾಧರ್,ರಾಜಗೋಪಾಲನಗರ ವಾರ್ಡ್ ಕಾಂಗ್ರೆಸ್ ಅಧ್ಯಕ್ಷ ಬಿ.ಜಗದೀಶ್ ಕುಮಾರ್, ರಾಜೇಶ್ವರೀನಗರ ಕಾಂಗ್ರೆಸ್ ಮುಖಂಡ ರುದ್ರೇಗೌಡ,ಬಿಜೆಪಿ ಮುಖಂಡ ಬಿ ಎನ್.ದಿನೇಶ್, ಸಮಾಜಸೇವಕ ಡಾ.ಸಂಗನ ಬಸಪ್ಪ ಬಿರಾದಾರ್, ವೇದಾಮೃತ ಅಸ್ಪತ್ರೆಯ ಮಾಲೀಕ ವೈದ್ಯರಾದ ಡಾ.ಬಿ ಎಂ.ಬಳ್ಳಾರಿ ಹಾಗೂ ಶಾಲೆಯ ಶಿಕ್ಷಕವೃಂದ ,ಅಡಳಿತ ಮಂಡಳಿ,ವಿದ್ಯಾರ್ಥಿಗಳು,ಪೋಷಕರು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಉನ್ನತಿಗೆ ಸನ್ಮಾರ್ಗ ತೋರಿದ ವೇಮನ: ಮಲ್ಲಿಕಾರ್ಜುನ



**ಔರಾದ:** ಮಹಾಯೋಗಿ ವೇಮನ ತಮ್ಮ ಪದ್ಯಗಳ ಮೂಲಕ ಮನುಕುಲದ ಉನ್ನತಿಗೆ ಸನ್ಮಾರ್ಗದ ಉಪದೇಶ ನೀಡಿದ್ದಾರೆ ಎಂದು ಸಹಶಿಕ್ಷಕ ಮಲ್ಲಿಕಾರ್ಜುನ ಕೋಟೆ ಹೇಳಿದರು.

ನಗರದ ನಾಲಂದಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ನಾಲಂದಾ ಪ್ರೌಢ ಶಾಲೆಯಲ್ಲಿಂದು ಏರ್ಪಡಿಸಿದ್ದ ಸಮಾಜ ಸುಧಾರಕ, ತತ್ವಜ್ಞಾನಿ ಕವಿ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಜನಸಾಮಾನ್ಯರ ಕವಿಯಾದ ಯೋಗಿ ವೇಮನರು ಜಾತೀಯತೆ, ಅಂಧಶ್ರದ್ಧೆ, ಮೇಲು ಕೀಳುಗಳನ್ನು ತಮ್ಮ ಕಾವ್ಯದ ಮುಖೇನ ಧಿಕ್ಕರಿಸಿದವರು. ಜೀವನವೆಂಬ ಸಂತೆಯೊಳಗಿದ್ದುಕೊಂಡೇ ಸಂತನಾಗಿ ಬೆಳೆದ ಅವರು ಅಪೂರ್ವ ಸಮಾಜ ಸುಧಾರಕ ಎಂದು ಬಣ್ಣಿಸಿದರು.

ತತ್ವಜ್ಞಾನಿ ಶ್ರೀ ವೇಮನರವರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ, ಪುಷ್ಪನಮನ ಸಲ್ಲಿಸಿದ ಮುಖ್ಯ ಶಿಕ್ಷಕ ಜಗನ್ನಾಥ.ಎಸ್.ಬಿರಾದಾರ ಮಾತನಾಡಿ ವೇಮನರು ಸರಳತೆಯಿಂದ ಬದುಕಿ ಸಂತ ಜೀವನಕ್ಕೆ ಮಾದರಿಯೇನಿಸಿದ್ದರು. ಆದುದರಿಂದಲೇ ವೇಮನರಿಂದ ಉತ್ಕೃಷ್ಟ ಸಾಹಿತ್ಯ ಸೃಷ್ಟಿ ಯಾಯಿತು. ವೇಮನರ ಪದ್ಯಗಳು ಆಂಗ್ಲ ಭಾಷೆಗೆ ಅನುವಾದಗೊಂಡು ಭಾರತದಲ್ಲಷ್ಟೆ ಅಲ್ಲ ವಿಶ್ವದ ಅನೇಕ ದೇಶಗಳಲ್ಲಿ ಜನಪ್ರಿಯವಾದವು ಎಂದರು.

ಮನುಷ್ಯನ ದುರಾಸೆಯ ಆಲೋಚನೆಗಳನ್ನು ತೊಡೆದು ಹಾಕಲು ವೇಮನ ವಚನಗಳು ಮುಖ್ಯ ಪಾತ್ರವನ್ನು ನಿರ್ವಹಿಸಿವೆ ಎಂದು ನುಡಿದ ಅವರು ಶ್ರೇಷ್ಠ ವಚನಕಾರ, ಕವಿ, ಸಮಾಜ ಚಿಂತಕ ಜತೆಗೆ ದಾರ್ಶನಿಕರಾಗಿ ಸ್ಮರಣೀಯರಾದ ವೇಮನ ಜೀವನದ ಸತ್ಯಗಳನ್ನು, ನೀತಿಗಳನ್ನು ಸರಳವಾಗಿ ತಿಳಿಸುತ್ತವೆ; ಉಪ್ಪು ಮತ್ತು ಕರ್ಪೂರದಂತೆ ಮೇಲ್ನೋಟಕ್ಕೆ ಒಂದೇ ಕಂಡರೂ ಗುಣಗಳಲ್ಲಿ ವ್ಯತ್ಯಾಸ, ಭಕ್ತಿಯೊಂದಿಗೆ ತಿನ್ನುವ ಸಾಧಾರಣ ಆಹಾರವೂ ಶ್ರೇಷ್ಠ, ಅಂತರಂಗ ಶುದ್ಧಿಯಿಲ್ಲದ ಪೂಜೆಯ ನಿರರ್ಥಕತೆ ಮತ್ತು ಸಾಧನೆಯಿಂದ ಕಷ್ಟಗಳ ನಿವಾರಣೆ ಮುಂತಾದವುಗಳ ಬಗ್ಗೆ ಅವರ ಪದ್ಯಗಳು ಜನಜಾಗೃತಿ ಮೂಡಿಸುತ್ತವೆಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪ್ರೌಢ ಶಾಲೆಯ ಸಹ ಶಿಕ್ಷಕರಾದ ದಿಲೀಪಕುಮಾರ.ಎನ್.ಮೇತ್ರೆ, ಪರಮೇಶ್ವರ.ಬಿ.ಬಿರಾದಾರ, ಅಸ್ಪಾಕ್ ಮಿಯ್ಯಾ.ಎಸ್.ಬೇಗ್, ಸಿದ್ಧಾರ್ಥ.ಜೆ.ಕಾಂಬಳೆ ಸಹ ಶಿಕ್ಷಕೀಯರಾದ ಜ್ಯೋತಿ.ಡಿ.ಘೂಳೆ ಉಪನ್ಯಾಸಕರಾದ ನರಸಿಂಗರಾವ ಬೇಲ್ದಾರ, ದಿಲೀಪ ತಾರೆ, ರಾಜಕುಮಾರ ಗುರುಮೆ ಸೇರಿದಂತೆ ಬೋಧ-ಕೇತರ ಸಿಬ್ಬಂಧಿವರ್ಗದವರಾದ ದಾಮಾ ಶಶಿಕಾಂತ, ಉಮರ್.ಜೆ ಉಪಸ್ಥಿತರಿದ್ದರು. ಮಕ್ಕಳೆಲ್ಲರೂ ಹಾಜರಿದ್ಧರು.

# ಕ್ರೀಡೆಯಿಂದ ಉತ್ಸಾಹ, ಚೈತನ್ಯ ಹೆಚ್ಚು: ಸಂಸದ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**



ಕ್ರೀಡೆಗಳಿಂದ ನಮ್ಮಲ್ಲಿ ಉತ್ಸಾಹ ಹಾಗೂ ಚೈತನ್ಯ ಹೆಚ್ಚಾಗುವುದರ ಜೊತೆಗೆ ಎಲ್ಲರೂ ಒಂದು ಕಡೆ ಸೇರಲು ಅವಕಾಶ ಮಾಡಿಕೊಡುತ್ತದೆ. ಹಾಗಾಗಿ ಇಂದು ತಾವೆಲ್ಲರೂ ಇಲ್ಲಿ ಸೇರಿದ್ದಿರಾ ಎಂದು ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಕೊಪ್ಪಳ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ (ರಿ) ಬೆಂಗಳೂರು, ಜಿಲ್ಲಾ ಶಾಖೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 2025-26ನೇ ಸಾಲಿನ ಕೊಪ್ಪಳ ಜಿಲ್ಲೆಯ ಜಿಲ್ಲಾ ಮಟ್ಟದ ರಾಜ್ಯ ಸರಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಗುಂಡು ಎಸೆಯುವ ಮೂಲಕ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಮಾತನಾಡಿ, ಕ್ರೀಡೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆಯುವುದಕ್ಕಿಂತ ಇದರಲ್ಲಿ ಭಾಗವಹಿಸುವುದು ಬಹಳ ಮುಖ್ಯ. ಸರಕಾರಿ ನೌಕರರು ಇತ್ತಿಚೆಗೆ ಹೆಚ್ಚಿನ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರಿಗೆ ಕ್ರೀಡೆಯಂತಹ ಇತರೆ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳವುದರಿಂದ ಮನಸ್ಸಿಗೆ ನೆಮ್ಮದಿ ಸಿಗಲಿದೆ. ಗ್ರಾಮೀಣ ಭಾಗದ ಕ್ರೀಡೆ ಕಬ್ಬಡಿಯಿಂದ ನಮಗೆ ಮತ್ತಷ್ಟು ಬಲ ತರಲಿದೆ. ಬಿಸಿಲು ನಾಡಿನ ಜನ ನಾವು ಬಹಳ ಗಟ್ಟಿ. ಮನೋಬಲದಿಂದ ನಮ್ಮ ಉತ್ಸಾಹ ಇನ್ನಷ್ಟು ಹೆಚ್ಚಾಗಲಿದೆ. ಪುಟ್ಬಾಲ್, ಹಾಕಿ, ವಾಲಿಬಾಲನಂತಹ ಕ್ರೀಡೆಗಳಿಗೆ ನಮ್ಮಲ್ಲಿ ಇನ್ನೂ ಸುಸಜ್ಜಿತ ಟ್ರ್ಯಾಕುಗಳು ಆಗಬೇಕಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಕ್ರೀಡಾ ಧ್ವಜಾರೋಹಣ ನೆರವೇರಿಸಿ ಕ್ರೀಡಾ ಜ್ಯೋತಿಗೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಕ್ರೀಡಾ ಪ್ರತಿಜ್ಞಾ ವಿಧಿಯನ್ನು ಬೋಧನೆ ಮಾಡಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು. ಎರಡು ದಿನಗಳ ಈ ಕ್ರೀಡಾಕೂಟದಲ್ಲಿ ಕಬಡ್ಡಿ, ವಾಲಿಬಾಲ, ಟೇಬಲ್ ಟೆನ್ನಿಸ್, ಕೇರಂ, ಚೆಸ್, ಕ್ರೀಕೆಟ್, ಬಾಲ್ ಬ್ಯಾಡ್ಮಿಂಟನ್ ಸೇರಿದಂತೆ ಇತರೆ ಹಲವಾರು ಕ್ರೀಡೆಗಳ ಜೊತೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಬಸವರಾಜ. ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠ್ಠಲ ಜಾಬಗೌಡರ್. ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಶಿವಪ್ಪ ಜೋಗಿ, ಖಜಾಂಚಿ ಜಯತೀರ್ಥ ದೇಸಾಯಿ, ರಾಜ್ಯ ಪರಿಷತ್ ಸದಸ್ಯರಾದ ಮೆಹಮೂದ್ ಆಸೀಫ್ ಅಲಿ, ಗೌರವ ಅಧ್ಯಕ್ಷರಾದ ಸಿದ್ದಪ್ಪ ಮೇಳಿ, ಕಾರ್ಯಾಧ್ಯಕ್ಷರಾದ ಬೀರಪ್ಪ ಅಂಡಗಿ, ರಾಜ್ಯ ಸಂಘಟನಾ ಪದಾಧಿಕಾರಿಗಳಾದ ಮಹೇಶ ಸಬರದ, ಮಂಜುನಾಥ ಆರೆಂಟನೂರ, ಶ್ರೀನಿವಾಸ ನಾಯಕ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಆಗಮಿಸಿದ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ನೌಕರರ ಸಂಘದ ಇತರೆ ಪದಾಧಿಕಾರಿಗಳು ಮತ್ತು ಸರಕಾರಿ ನೌಕರರು ಉಪಸ್ಥಿತರಿದ್ದರು.

## ರಸ್ತೆ ನಿಯಮಗಳನ್ನು ಪಾಲಿಸಿ...



• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ)**

ಜೀವ ಅಮೂಲ್ಯವಾದುದು, ರಸ್ತೆ ನಿಯಮಗಳನ್ನು ಪಾಲಿಸಿ ಸುರಕ್ಷಿತವಾಗಿರಿ ಎಂದು ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಡಿ. ಪಿ. ಕುಮಾರಸ್ವಾಮಿ ಹೇಳಿದರು.

ನಗರದ ವಡಕಾರಾಯ ದೇವಸ್ಥಾನ ಹತ್ತಿರ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಶಿಕ್ಷಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಯ ಜಂಟಿ ಸಹಯೋಗದಲ್ಲಿ 37ನೇ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಏರ್ಪಡಿಸಿದ್ದ ಬೈಕ್ ರ್ಯಾಲಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ರಸ್ತೆ ಅಪಘಾತಗಳು ಸಂಭವಿಸಿದಾಗ ಕೇವಲ ವ್ಯಕ್ತಿಯಷ್ಟೇ ಅಲ್ಲ, ಇಡೀ ಕುಟುಂಬವೇ ಸಂಕಷ್ಟಕ್ಕೆ ಸಿಲುಕಿ ಬೀದಿಗೆ ಬರುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರು ತಮಗಾಗಿ ಅಲ್ಲದ್ದಿದ್ದರೂ ತಮ್ಮ ಕುಟುಂಬಕ್ಕಾಗಿಯಾದರೂ ಹೆಲ್ಮೆಟ್ ಧರಿಸಬೇಕು. ಸವಾರರು ಕೇವಲ ದಂಡಕ್ಕೆ ಹೆದರಿ ಸಂಚಾರಿ ನಿಯಮ ಪಾಲಿಸುವುದಕ್ಕಿಂತ, ನಮ್ಮ ಜೀವದ ರಕ್ಷಣೆಗಾಗಿ, ಸ್ವಯಂಪ್ರೇರಿತರಾಗಿ ರಸ್ತೆ ಸಂಚಾರಿ ನಿಯಮ ಪಾಲಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಎಎಸ್ಪಿ ಮಂಜುನಾಥ, , ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ ಪ್ರಶಾಂತ್ ನಾಗಲಾಪುರ ಸೇರಿದಂತೆ ಮತ್ತಿತರರು ಇದ್ದರು.

## ಬಾಬಾರವರ 57ನೇ ಸ್ಮೃತಿ ದಿನ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಬ್ರಹ್ಮಕುಮಾರಿ ಸಂಚಾಲಕಿ ನಾಗಶ್ರೀ ಅಕ್ಕನವರು ಬಾಬಾ ರವರ ಪುಣ್ಯಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿ, ವಿಶ್ವದಾದ್ಯಂತ ಬಾಬಾರವರ ಸ್ಮೃತಿ ದಿನಾಚರಣೆಯನ್ನು ಆಚರಿಸುತ್ತಿದ್ದು, 1876 ರಲ್ಲಿ ಸಿಂಧು ಹೈದರಾಬಾದ್ ಕರಾಚಿಯಲ್ಲಿ ಕೃಪಾಲಾನಿ ವಂಶದ ಮುಖ್ಯೋಪಾಧ್ಯಾಯರ ಮಗನಾಗಿ ಜನಿಸಿದ ದಾದಾ ಲೇಖರಾಜ್ ಚಿಕ್ಕ ವಯಸ್ಸಿನಲ್ಲಿ ತಂದೆ ತಾಯಿಯನ್ನು ಕಳೆದುಕೊಳ್ಳುತ್ತಾರೆ. ಚಿಕ್ಕಪ್ಪನ ಆಶ್ರಯದಲ್ಲಿ ಗೋಧಿ ವ್ಯಾಪಾರದಲ್ಲಿ ತೊಡಗಿ ನಂತರ ದೊಡ್ಡ ವಜ್ರದ ವ್ಯಾಪಾರಿಯಾಗಿ ರಾಜ ಮಹಾರಾಜರ ಸಂಪರ್ಕದಲ್ಲಿಯೂ ಸಹ ಇರುತ್ತಾರೆ. ಇವರು ಮೈಸೂರಿಗೂ ಸಹ ಆಗಮಿಸಿದ್ದು ಅವರ 60ನೇ ವಯಸ್ಸಿನಲ್ಲಿ ಈ ಜಗತ್ತಿನ ಪರಿವರ್ತನೆ ಹಾಗೂ ಹೊಸ ಪ್ರಪಂಚದ ಸ್ಥಾಪನೆಯ ಸಾಕ್ಷಾತ್ಕಾರ ಮಾಡಿಕೊಳ್ಳುತ್ತಾರೆ. ವಿಶ್ವದ ಶಕ್ತಿ ಪರಮಾತ್ಮನ ಆದೇಶದಂತೆ ಅವರ ತನುವನ್ನು ಸಹಕಾರ ಮಾಧ್ಯಮವಾಗಿ ಮಾಡಿಕೊಂಡು ಹೊಸ ಜಗತ್ತಿನ ಸ್ಥಾಪನೆಯಾಗಿ ಸಿಂಧು ಹೈದರಾಬಾದ್ ಕರಾಚಿಯಲ್ಲಿ 500 ಜನ ಮಾತೆಯರ ಕನ್ಯೆಯರ ನೇತೃತ್ವದಲ್ಲಿ ಓಂ ಮಂಡಳಿ ಎಂಬ ಆಧ್ಯಾತ್ಮಿಕ ಸಂಸ್ಥೆಯನ್ನು ಹುಟ್ಟು ಹಾಕಿ ಸರ್ವಸ್ವವನ್ನು ಅವರಿಗೆ ಅರ್ಪಣೆ ಮಾಡುತ್ತಾರೆ, 1950ರಲ್ಲಿ ಭಾರತ ಪಾಕಿಸ್ತಾನ ವಿಭಜನೆ ಆದಾಗ ತಮ್ಮ ತಪಸ್ಸಿನ ಸಲುವಾಗಿ ಭಾರತದ ಮೌಂಟ್ ಅಬುವಿಗೆ ಸ್ಥಳಾಂತರ ಗೊಳ್ಳುತ್ತಾರೆ. ಸಾಧು, ಸಂತ, ಸನ್ಯಾಸಿಗಳ ಮಾಡುವುದಕ್ಕಾಗದ ಅಸಂಭವ ಕಾರ್ಯವನ್ನು ಗ್ರಹಸ್ಥದಲ್ಲಿದ್ದು ಪವಿತ್ರ ಜೀವನ ನಡೆಸಲು ಸಾಧ್ಯ ಎಂಬುದನ್ನು ತೋರಿಸಿಕೊಟ್ಟರು. ಮಹಿಳೆಯರಲ್ಲಿ ಇದ್ದ ಅಂಧ ವಿಶ್ವಾಸ ಕಂದಾಚಾರಗಳನ್ನು ತೊಡೆದು ಹಾಕಿ ಅವರನ್ನು ವಿಶ್ವದ ಮಾತೇಯರನ್ನಾಗಿ ಮಾಡಿದರು. ಮಹಿಳೆಯರು ನರಕಕ್ಕೆ ಹೆದ್ದಾರಿ ಎಂಬುದನ್ನು ಅಳಿಸಿ ಸ್ವರ್ಗಕ್ಕೆ ಹೆದ್ದಾರಿ ಎಂಬುದನ್ನು ಸಾಕಾರಗೊಳಿಸಿದರು. ಮಾತೆಯರು ತೊಟ್ಟಿಲು ಹಿಡಿಯುವ ಕೈ ಇಡೀ ವಿಶ್ವವನ್ನೇ ತೂಗಬಲ್ಲರು ಎಂಬುದನ್ನು ಸಾಕಾರಗೊಳಿಸಿದರು. ಮಾನವ ಆಧುನಿಕತೆಯನ್ನು ಮೈಗೂಡಿಸಿಕೊಂಡು ತನ್ನ ಬದುಕನ್ನು ನರಕದತ್ತ ಕೊಂಡೊಯ್ಯುತ್ತಿದ್ದಾನೆ. ನಿರಂತರ ಭಗವಂತನ ಸ್ಮರಣೆ, ಧ್ಯಾನದಿಂದ ಮನಸ್ಸು ಶಾಂತಿ ಹೊಂದಲು ಸಾಧ್ಯ, ಎಂದರು.



# ಬೀದರ್‌ನಲ್ಲಿ ಜ.24 ರಿಂದ ವೀರಲೋಕ ಪುಸ್ತಕ ಸಂತೆ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಬೀದರ್ ನಗರದಲ್ಲಿ ಜ.24 ರಿಂದ 26ರ ವರೆಗೆ ವೀರಲೋಕ ಪುಸ್ತಕ ಜರುಗಲಿದ್ದು ಜಿಲ್ಲೆಯ ಪುಸ್ತಕ ಪ್ರಿಯರು, ಅಭಿಮಾನಿಗಳು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದ್ದಾರೆ.

ನಗರದ ನೆಹರು ಸ್ಟೇಡಿಯಂ ಸಮೀಪದ ಸಾಯಿ ಸ್ಕೂಲ್ ಆವರಣದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಹಿರೇಮಠ ಸಂಸ್ಥಾನ ಭಾಲ್ಕಿ ಸಹಯೋಗದಲ್ಲಿ ಮೂರು ದಿನಗಳ ಕಾಲ 4ನೆಯ ಆವೃತ್ತಿಯ ರಾಜ್ಯಮಟ್ಟದ ಪುಸ್ತಕ ಸಂತೆ ಆಯೋಜಿಸಲಾಗುತ್ತಿದೆ.

ಅನ್ನ ದಾಸೋಹದಷ್ಟೇ ಜ್ಞಾನ ದಾಸೋಹವೂ ಪವಿತ್ರವಾದುದು ಪುಸ್ತಕಗಳು ಮನುಷ್ಯನ ಅಂತರಂಗವನ್ನು ಶುದ್ಧೀಕರಿಸುವ ಶಕ್ತಿಯನ್ನು ಹೊಂದಿವೆ. ಇಂತಹ ಜ್ಞಾನದ ಪರ್ವ ವೀರಲೋಕ ಪುಸ್ತಕ ಸಂತೆಯು ನಮ್ಮ ಜಿಲ್ಲೆಯಲ್ಲಿ ನಡೆಯುತ್ತಿರುವುದು ನಾಡಿನ ಭಾಗ್ಯ.

ಕನ್ನಡ ನಾಡು-ನುಡಿ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ವೀರಲೋಕ ಬುಕ್ಸ್ ಸಂಸ್ಥೆಯು ಪ್ರಕಾಶನವನ್ನು ಒಂದು ಸಾಂಸ್ಕತಿಕ ಚಳವಳಿಯನ್ನಾಗಿಸುವ ನಿಟ್ಟಿನಲ್ಲಿ ವೀರಕಪುತ್ರ ಶ್ರೀನಿವಾಸ ಅವರು ಪುಸ್ತಕ ಸಂತೆ ಎಂಬ ವಿಶಿಷ್ಟ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿರುವುದು ಕನ್ನಡಕ್ಕೆ ನೀಡುತ್ತಿರುವ ಬಹುದೊಡ್ಡ ಕೊಡುಗೆಯಾಗಿದೆ ಎಂದಿದ್ದಾರೆ.

ಇಂದಿನ ಮೊಬೈಲ್ ಯುಗದಲ್ಲಿ ಯುವ ಪೀಳಿಗೆ ಪುಸ್ತಕಗಳಿಂದ ದೂರ ಸರಿಯುತ್ತಿರುವುದು ಆತಂಕದ ಸಂಗತಿ. ಪುಸ್ತಕಗಳು ನಮಗೆ ಸಂಸ್ಕಾರವನ್ನು ಕಲಿಸುತ್ತವೆ.

ಆದೀಶ ವಾಲಿ, ಯುವ ಸಂಘಟಕ ಗುರುನಾಥ ರಾಜಗೀರಾ ನೇತೃತ್ವದಲ್ಲಿ ನಡೆಯಲಿರುವ ಪುಸ್ತಕ ಸಂತೆಯಲ್ಲಿ ಜಿಲ್ಲೆಯ ಭಕ್ತರು, ಕನ್ನಡಾಭಿಮಾನಿಗಳು ಕುಟುಂಬ ಸಮೇತರಾಗಿ ಈ ಪುಸ್ತಕ ಸಂತೆಗೆ ಭೇಟಿ ನೀಡಿ, ಪುಸ್ತಕಗಳನ್ನು ಖರೀದಿಸುವ ಮೂಲಕ ಅಕ್ಷರ ಸಂಸ್ಕೃತಿಯನ್ನು ಬೆಳೆಸಬೇಕು ಮತ್ತು ಈ ಐತಿಹಾಸಿಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.



# ಮಾನವ ಮೌಲ್ಯಗಳ ದೀಪವಾದ ಮಹಾಯೋಗಿ ವೇಮನರ ತತ್ವ ಚಿಂತನೆ: ಸಚಿವ ರಹೀಮ್ ಖಾನ್

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಮಹಾಯೋಗಿ ವೇಮನರು ದಕ್ಷಿಣ ಭಾರತದ ಪ್ರಮುಖ ತತ್ವಜ್ಞಾನಿ, ಸಮಾಜ ಸುಧಾರಕ ಹಾಗೂ ಕವಿ ಆಗಿದ್ದಾರೆ. ಸರಳ ಭಾಷೆಯಲ್ಲಿ ಆಳವಾದ ತತ್ವಗಳನ್ನು ಹೇಳಿದ ವೇಮನರು, ಅಜ್ಞಾನ, ಅಂಧಶ್ರದ್ಧೆ ಹಾಗೂ ಸಾಮಾಜಿಕ ಅಸಮಾನತೆಗಳ ವಿರುದ್ಧ ಧ್ವನಿ ಎತ್ತಿದರು. ಜನಸಾಮಾನ್ಯರಿಗೆ ಸುಲಭವಾಗಿ ಅರ್ಥವಾಗುವಂತಿದ್ದ ಅವರ ವಚನಗಳು, ಮಾನವೀಯ ಮೌಲ್ಯ, ಸತ್ಯ, ನೀತಿ ಮತ್ತು ಆತ್ಮಜ್ಞಾನವೇ ಜೀವನದ ಮೂಲ ಅಂಶಗಳು ಎಂಬ ಸಂದೇಶವನ್ನು ಸಾರುತ್ತವೆ ಎಂದು ಪೌರಾಡಳಿ ಹಾಗೂ ಹಜ್ ಖಾತೆ ಸಚಿವ ರಹೀಮ್ ಖಾನ್ ಹೇಳಿದರು.

ಅವರು ಸೋಮವಾರ ನಗರದ ಅಮಲಾಪುರ ರಸ್ತೆಯಲ್ಲಿರುವ ಹೇಮ ವೇಮ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಮಹಾಯೋಗಿ ವೇಮನರವರ 614ನೇ ಜಯಂತ್ಯೋತ್ಸವ ಕಾರ್ಯಕ್ರಮ ಸಸಿಗೆ ನೀರು ಎರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಾತಿ, ಧರ್ಮ ಮತ್ತು ವರ್ಗಭೇದಗಳನ್ನು ತಿರಸ್ಕರಿಸಿದ ವೇಮನರು ಸಮಾನತೆಯ ಸಮಾಜದ ಪರವಾಗಿ ತಮ್ಮ ಚಿಂತನೆಗಳನ್ನು ವ್ಯಕ್ತಪಡಿಸಿದರು. ವೇಮನರ ಕಾವ್ಯ ಮತ್ತು ತತ್ವಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಅವರ ವಿಚಾರಧಾರೆಗಳು ಸರ್ವಕಾಲಿಕ, ಅವುಗಳು ಇಂದಿನ ಯುವಜನತೆಗೆ ಆತ್ಮಪರಿಶೀಲನೆ ಮತ್ತು ನೈತಿಕ ಬದುಕಿನ ಮಹತ್ವವನ್ನು ನೆನಪಿಸುತ್ತವೆ. ವೈಯಕ್ತಿಕ ಶುದ್ಧತೆ ಮತ್ತು ಸಮಾಜದ ಒಟ್ಟಾರೆ ಹಿತವೇ ನಿಜವಾದ ಯೋಗ ಎಂದು ಬೋಧಿಸಿದ ಮಹಾಯೋಗಿ ವೇಮನರು, ಭಾರತೀಯ ತತ್ವಚಿಂತನೆಯ ಇತಿಹಾಸದಲ್ಲಿ ಅಚ್ಚಳಿಯದ ಸ್ಥಾನವನ್ನು ಪಡೆದಿದ್ದಾರೆ ಎಂದರು.



ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಮಾತನಾಡಿ, ರೆಡ್ಡಿ ಸಮಾಜವು ಯಾವಾಗಲೂ ಮಾತು ತಪ್ಪೋದಿಲ್ಲ ಜನರು ವೇಮನರ ತತ್ವ ಆದರ್ಶವನ್ನು ತಪ್ಪದೆ ಪಾಲಿಸಬೇಕು ಮೂಡನಂಬಿಕೆ ಅಸಮಾನತೆಯನ್ನು ಹೋಗಲಾಡಿಸಬೇಕು ವೇಮನರ ಚಿಂತನೆಯನ್ನು ಸದುಪ ಪಡೆದುಕೊಳ್ಳಬೇಕು ಎಂದು ಹೇಳಿದ್ದಾರೆ,

ವೇಮನ ರವರ ಜೀವನ ಚರಿತ್ರೆ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ನಿವೃತ್ತ ಪ್ರಾಚಾರ್ಯ ಡಾ.ಶಿವಶರಣಪ್ಪಾ ಹುಗ್ಗಿ ಪಾಟೀಲ್, ರೆಡ್ಡಿ ಸಮಾಜ ಮುಚ್ಚಿ ಹಾಕುವ ಹುನ್ನಾರ ನಡೆದಿದೆ,ಮೂಗಚಿಂತ ಪಲ್ಲೆಯಾದರೂ ಬೆಳೆದಿದ್ದು ಕೊಂಡವೀಡುವಿನಲ್ಲಿ. ಬಾಲ್ಯದಿಂದಲೂ ಸುಖದಲ್ಲಿ ಬೆಳೆದ ವೇಮನ ಕೊನೆಗಾಲದಲ್ಲಿ ಬೈರಾಗಿಯಾಗಿ ಅಲೆದಾಡುವವರೆಗಿನ ಪ್ರಯಾಣ ಒಂದು ಪ್ರೇರಣಾದಾಯಿ ಇತಿಹಾಸವಾಗಿದೆ,

ವೇಮನರು ಕನ್ನಡದ ಸರ್ವಜ್ಞ, ತಮಿಳಿನ ತಿರುವಳ್ಳುವರ್ ರಂತೆ ತೆಲುಗಿಗೆ ವೇಮನರು ಶ್ರೇಷ್ಠ ವಚನಕಾರರು.ವೇಮನ ಹೆತ್ತವರಿಂದ,ಒಡಹುಟ್ಟಿದವರಿಂದ, ಸಂಬಂಧಿಕರಿಂದ ತಿರಸ್ಕಾರಕ್ಕೆ ಗುರಿಯಾಗಿ ದುಶ್ಚಟಗಳ ದಾಸನಾಗುತ್ತಾನೆ.ಪರಸ್ತ್ರೀ ಸಂಗದಲ್ಲಿ ವಿಷಯಾಸಕ್ತನಾದ ವೇಮನ ಭೋಗಾಸಕ್ತನಾಗುತ್ತಾನೆ. ವೇಶ್ಯಾಸ್ತ್ರೀಯೊಬ್ಬಳ ಸಹವಾಸ ಮಾಡಿ, ಮನೆಯ ಸಂಪತ್ತನ್ನೆಲ್ಲಾ ಹಾಳುಗೆಡವುತ್ತಾನೆ. ವೇಮನನಿಗೆ ಅತ್ತಿಗೆಯಾಗಿ ಬಂದ ಹೇಮರೆಡ್ಡಿ ಮಲ್ಲಮ್ಮ ಮೈದುನನ ಮನ ತಿದ್ದುವಲ್ಲಿ ಪ್ರಯತ್ನಿಸಿ ಸಫಲಳಾಗುತ್ತಾಳೆ. ಸಿಪಿ ಬ್ರೌನ್ ಅವರಿಗೆ ಅಭಿನಂದನೆ ಸಲ್ಲಿಸಬೇಕು ಮೂಲಕ ವೇಮನ ಮಹಾಯೋಗಿ ವೇಮನರಾಗಿ ಬದಲಾಗುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವೇದಿಕೆಯಲ್ಲಿ ರೆಡ್ಡಿ ಸಮಾಜದ ದಿನದರ್ಶಿಕೆ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಗರ ಸಭೆ ಅಧ್ಯಕ್ಷರಾದ ಮೊಹ್ಮದ ಗೌಸ , ನಗರಸಭೆ ಸದಸ್ಯ ರಾಜು ಚಿಂತಾಮಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಶಿಂಧೆ, ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಶಂಕರರೆಡ್ಡಿ ,ಬಾಬುರೆಡ್ಡಿ, ಮಾಣಿಕ ರೆಡ್ಡಿ ,ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆ ಸಂಪಾದಕ ರಮೇಶ್ ರೆಡ್ಡಿ, ಸಂಗ್ರಾಮ ರೆಡ್ಡಿ, ಸಂಜೀವ್ ರೆಡ್ಡಿ, ಶ್ರೀನಿವಾಸ ರೆಡ್ಡಿ, ಸೂರ್ಯಕಾಂತ್ ಬಿರಾದಾರ, ಸಂಗೀತಾ ರೆಡ್ಡಿ, ಭಾಲ್ಕಿ ರೆಡ್ಡಿ ಸಮಾಜದ ಅಧ್ಯಕ್ಷರಾದ ವಿಜಯ ರೆಡ್ಡಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)